ಸಂಪುಟ: 06 ಸಂಚಿಕೆ: 74 ಪುಟಗಳು: 08 ಗುರುವಾರ 28 ಮೇ 2026
www.udayavahini.in epaper.udayavahini.in Udaya vahini news Udaya vahini news Udayavahini news youGÓ...qbe udayavahininews@gmail.
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ವೃಕ್ಷಕ್ಕೆ ದುಃಖ ಬೇರು ಎನಿಸಿದರೆ ಸಂತೋಷ ಕೊಂಬೆಗಳು, ಬೇರು ಕೊಂಬೆಗಳೆರಡೂ ಮರದ ಲವಲವಿಕೆಗೆ ಅಗತ್ಯ. ಅಂತೆಯೇ ಜೀವನಕ್ಕೆ ದುಃಖ ಮತ್ತು ಸಂತೋಷಗಳು! ।

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಸಿದ್ದರಾಮಯ್ಯ ಹಳೆಯ ಹುಲಿ, ಯಾವಾಗ ಯಾವ ಆಟ ಆಡ್ತಾರೋ ಗೊತ್ತಿಲ್ಲ

• ಉದಯವಾಹಿನಿ, ಬೆಂಗಳೂರು

ಶೋಭಾ ಕರಂದ್ಲಾಜೆಸಿದ್ದರಾಮಯ್ಯ ಹಳೆಯ ಹುಲಿ, ಯಾವಾಗ ಯಾವ ಆಟ ಆಡುತ್ತಾರೋ ಗೊತ್ತಿಲ್ಲ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ. ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಖುರ್ಚಿ ಕಾದಾಟ ವಿಚಾರವಾಗಿ ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ರಾಜೀನಾಮೆ ಕೊಡುವವರೆಗೂ ಗ್ಯಾರಂಟಿಯಿಲ್ಲ. ಮೂರು ವರ್ಷದ ಸರ್ಕಾರದಲ್ಲಿ 2.5 ವರ್ಷ ಸಿಎಂ ಬದಲಾವಣೆ ಬಗ್ಗೆಯೆ ಚರ್ಚೆಯಾಗಿದೆ.

ಕಾಂಗ್ರೆಸ್ ಸರ್ಕಾರಕ್ಕೆ ಜನರ ಬಗ್ಗೆ ಕಾಳಜಿಯಿಲ್ಲ. ಒಂದು ಕಡೆ ಬರಗಾಲ ಮತ್ತೊಂದು ಕಡೆ ನೆರೆ ಬರುತ್ತಿದೆ. ಬೆಂಗಳೂರು ಮಳೆಯಿಂದ ಮುಳುಗುತ್ತಿದೆ, ಗಾರ್ಬೆಜ್‌ನ ಹಗರಣ ನಡೆಯುತ್ತಿದೆ. ಇವೆಲ್ಲವನ್ನೂ ಬಿಟ್ಟು ಖುರ್ಚಿಗಾಗಿ ಹೊಡೆದಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಸಿದ್ದರಾಮಯ್ಯ ಖುರ್ಚಿ ಉಳಿಸುವ ಯತ್ನ ಮಾಡುತ್ತಿದ್ದರೆ, ಡಿಕೆಶಿ ಸಿಎಂ ಆಗುವ ಯತ್ನ ಮಾಡುತ್ತಿದ್ದಾರೆ.

## ಮೇಲ್ಮನವಿ ಸಲ್ಲಿಸಲು ಪೂರ್ವ ಠೇವಣಿ ಇಡುವುದು ಕಡ್ಡಾಯವಲ್ಲ

• ಉದಯವಾಹಿನಿ, ಬೆಂಗಳೂರು

ಬ್ಯಾಂಕುಗಳಿಂದ ಸಾಲ ಪಡೆದ ಮಾಲೀಕರು ಸುಸ್ತಿದಾರರಾದಾಗ, ಆ ಆಸ್ತಿಯಲ್ಲಿ ವಾಸವಿರುವ, ಕಚೇರಿ ಹೊಂದಿರುವ ಬಾಡಿಗೆದಾರರು (ಸಾಲಗಾರರಲ್ಲದ ಮೂರನೇ ವ್ಯಕ್ತಿ) ಸಾಲ ವಸೂಲಾತಿ ನ್ಯಾಯಮಂಡಳಿ (ಡಿಆರ್‌ಟಿ) ನೀಡಿದ ಆದೇಶವನ್ನು ಮೇಲ್ಮನವಿ ಸಲ್ಲಿಸುವುದಕ್ಕಾಗಿ ಸಾಲದ ಮೊತ್ತದ ಶೇ. 50 ರಷ್ಟನ್ನು ಠೇವಣಿ ಇಡಬೇಕು ಎನ್ನುವುದು ಕಡ್ಡಾಯವಲ್ಲ ಎಂದು ಹೈಕೋರ್ಟ್ ಆದೇಶಿಸಿದೆ. ಕಟ್ಟಡದಲ್ಲಿರುವ ಬಾಡಿಗೆದಾರರನ್ನು ಯಾವುದೇ ಕಾರಣಕ್ಕೂ ಸಾಲಗಾರ ಎಂದು ಪರಿಗಣಿಸಲು ಸಾಧ್ಯವಿಲ್ಲ. ಹೀಗಾಗಿ, ಸಾಲದ ಹೊಣೆಗಾರಿಕೆಯನ್ನು ಅವರ ಮೇಲೆ ಹೇರಲು ಬರುವುದಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಡಿಆರ್‌ಟಿ ಆದೇಶವನ್ನು ಮೇಲ್ಮನವಿ ಸಲ್ಲಿಸಲು ಸಾಲದ ಪ್ರಮಾಣದ ಶೇ. 50ರಷ್ಟು ಠೇವಣಿ ಇಡಬೇಕು ಎಂದು ತಿಳಿಸಿದ್ದ ಮೇಲ್ಮನವಿ ಪ್ರಾಧಿಕಾರದ ಆದೇಶವನ್ನು ಪ್ರಶ್ನಿಸಿ ಇಟ್ಟಿಯಂ ಸಿಸ್ಟಮ್ಸ್ ಕಂಪನಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಮತ್ತು ನ್ಯಾಯಮೂರ್ತಿ ಡಾ.ಕೆ.ಮನ್ಮಥ ರಾವ್ ಅವರಿದ್ದ ವಿಭಾಗೀಯ ಪೀಠ ಈ ಆದೇಶ ನೀಡಿದೆ.

ಅಲ್ಲದೇ, ಹಣಕಾಸು ಆಸ್ತಿಗಳ ಸಕ್ಯುರಿಟೈಸೇಶನ್ ಮತ್ತು ಪುನರ್ನಿರ್ಮಾಣ ಮತ್ತು ಭದ್ರತಾ ಆಸಕ್ತಿ ಕಾಯ್ದೆ ಜಾರಿ(ಸರ್ಫೇಸಿ) ಕಾಯ್ದೆಯ ಸೆಕ್ಷನ್ 18ರಲ್ಲಿ ಸಾಲಗಾರ' ಮತ್ತು 'ಸಾಲಗಾರನಲ್ಲದ ಇತರ ವ್ಯಕ್ತಿ' ಎಂದು ಇಬ್ಬರನ್ನೂ ಪ್ರತ್ಯೇಕವಾಗಿ ಉಲ್ಲೇಖಿಸಲಾಗಿದೆ. ಆದರೆ, ಎರಡನೇ ನಿಬಂಧನೆಯಲ್ಲಿ ಕೇವಲ 'ಸಾಲಗಾರ' ಮಾತ್ರ ಶೇ. 50ರಷ್ಟು ಪೂರ್ವ ಠೇವಣಿ ಇಡಬೇಕು ಎಂದು ಸ್ಪಷ್ಟವಾಗಿ ಹೇಳಲಾಗಿದೆ.

## ನಿಕೇತ್ ಮೌರ್ಯ, ಭಾವನಾ ರಾಮಣ್ಣ ಸೇರಿದಂತೆ 31 ಕೆಪಿಸಿಸಿ ಪದಾಧಿಕಾರಿಗಳಿಗೆ ಗೇಟ್‌ಪಾಸ್ ನೀಡಿದ ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಸಭೆಗೆ ಗೈರು ಹಾಜರಿ ಹಾಕಿದ ಕೆಪಿಸಿಸಿ ಪದಾಧಿಕಾರಿಗಳಿಗೆ ಅಧ್ಯಕ್ಷ ಡಿಕೆ ಶಿವಕುಮಾರ್ ಬಿಗ್ ಶಾಕ್ ನೀಡಿದ್ದಾರೆ. ಕೆಪಿಸಿಸಿ ವಕ್ತಾರ ನಿಕೇತ್ ರಾಜ್ ಮೌರ್ಯ, ಭಾವನಾ ರಾಮಣ್ಣ, ಶಿವಮೂರ್ತಿ ನಾಯಕ್, ಎಂ ಸಿ ವೇಣುಗೋಪಾಲ್, ಷಣ್ಮುಖ ಶಿವಳ್ಳಿ, ಸಿಆರ್ ಮನೋಹರ್ ಸೇರಿದಂತೆ ಮೂವರು ಕೆಪಿಸಿಸಿ ಉಪಾಧ್ಯಕ್ಷರು, 29 ಪ್ರಧಾನ ಕಾರ್ಯದರ್ಶಿಗಳಿಗೆ ಡಿಕೆಶಿವಕುಮಾರ್ ಗೇಟ್ ಪಾಸ್ ನೀಡಿದ್ದಾರೆ. ತಕ್ಷಣವೇ ಈ ನಾಯಕರನ್ನು ಪಕ್ಷದ ಹುದ್ದೆಯಿಂದ ಕೈ ಬಿಡಲಾಗಿದೆ ಎಂದು ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಕರ್ನಾಟಕ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಪಕ್ಷದ ಸಭೆ ಗೈರಾಗಿರುವ ವಿಚಾರವನ್ನು ಗಂಭೀರವಾಗಿ ತೆಗೆದುಕೊಂಡು ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದರು.

## ಜೂನ್ 4 ರಿಂದ ಚೀತಾಗಳು ಸಾರ್ವಜನಿಕ ವೀಕ್ಷಣೆಗೆ ಲಭ್ಯ : ಸಚಿವ ಈಶ್ವರ ಖಂಡ್ರೆ

• ಉದಯವಾಹಿನಿ, ಬೆಂಗಳೂರು

ಕಳೆದ ಏಪ್ರಿಲ್ 18ರಂದು ದಕ್ಷಿಣ ಆಫ್ರಿಕಾದಿಂದ ಬೆಂಗಳೂರಿಗೆ ಬಂದ 4 ಚೀತಾಗಳು (ಶಿವಾಂಗಿ) ಕ್ವಾರಂಟೈನ್ ಅವಧಿ ಮುಗಿದಿದ್ದು, ಜೂನ್ 4ರಿಂದ ಸಾರ್ವಜನಿಕ ವೀಕ್ಷಣೆಗೆ ಲಭ್ಯವಾಗಲಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಈ ಸಂಬಂಧ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರಾದ ಕುಮಾರ್ ಪುಷ್ಕರ್ ಅವರೊಂದಿಗೆ ಸಭೆ ನಡೆಸಿದ ಸಚಿವರು, ಚೀತಾಗಳಿಗಾಗಿಯೇ ಬನ್ನೇರುಘಟ್ಟ ಮೃಗಾಲಯದಲ್ಲಿ ಪ್ರತ್ಯೇಕವಾಗಿ ಸಿದ್ಧಪಡಿಸಿರುವ ಆವರಣದಲ್ಲಿ ಈ ಚೀತಾಗಳನ್ನು ಬಿಡಲಾಗುವುದು ಎಂದರು. ವನ್ಯಜೀವಿ ವಿನಿಮಯ ಕಾರ್ಯಕ್ರಮದ ಭಾಗವಾಗಿ ಏ.18ರ ಮಧ್ಯರಾತ್ರಿ ದ.ಆಫ್ರಿಕಾದಿಂದ ಬೆಂಗಳೂರಿಗೆ ಬಂದ ಈ ಹೊಸ ಅತಿಥಿಗಳನ್ನು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅರಣ್ಯ ಸಚಿವ ಈಶ್ವರ ಖಂಡ್ರೆ ಬರಮಾಡಿಕೊಂಡಿದ್ದರು. ಈ ಚೀತಾಗಳು ಬನ್ನೇರುಘಟ್ಟ ಪರಿಸರ, ವಾತಾವರಣ, ಹವಾಮಾನಕ್ಕೆ ಹೊಂದಿಕೊಳ್ಳಲು ಪ್ರತ್ಯೇಕವಾಗಿ ಇಡಲಾಗಿತ್ತು.

# ಪಾಕ್ -ಚೀನಾಗೆ ಭಾರತ ತಿರುಗೇಟು



**ಜಮ್ಮು ಕಾಶ್ಮೀರ, ಲಡಾಖ್ ಭಾರತದ ಅವಿಭಾಜ್ಯ ಅಂಗ**

**ಬೇರೆ ದೇಶಗಳ ಹಸ್ತಕ್ಷೇಪ ಬೇಡ**



•ಉದಯವಾಹಿನಿ, ದೆಹಲಿ

ಚೀನಾ ಮತ್ತು ಪಾಕಿಸ್ತಾನ ಜಂಟಿಯಾಗಿ ಬಿಡುಗಡೆ ಮಾಡಿದ್ದ ಜಂಟಿ ಹೇಳಿಕೆಯಲ್ಲಿ ಜಮ್ಮು ಮತ್ತು ಕಾಶ್ಮೀರವನ್ನು ಉಲ್ಲೇಖಿಸಿದ್ದಕ್ಕೆ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ಜಮ್ಮು ಮತ್ತು ಕಾಶ್ಮೀರ, ಲಡಾಖ್ ಭಾರತದ ಅವಿಭಾಜ್ಯ ಅಂಗ ಎಂದು ಪುನರುಚ್ಚರಿಸಿರುವ ಭಾರತ ಚೀನಾ-ಪಾಕಿಸ್ತಾನದ ವಿರುದ್ಧ ಕಿಡಿಕಾರಿದೆ. ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಿದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಚೀನಾ-ಪಾಕಿಸ್ತಾನ ಜಂಟಿ ಹೇಳಿಕೆಯಲ್ಲಿ ಜಮ್ಮು ಮತ್ತು ಕಾಶ್ಮೀರ ಕುರಿತು ಮಾಡಲಾದ ಅನಗತ್ಯ ಉಲ್ಲೇಖಗಳನ್ನು ಭಾರತವು ಖಡಾಖಂಡಿತವಾಗಿ ಖಂಡಿಸುತ್ತದೆ ಎಂದು ಹೇಳಿದರು. ಭಾರತದ ದೀರ್ಘಾವಧಿಯ ನಿಲುವನ್ನು ಪುನರುಚ್ಚರಿಸಿದ ರಣಧೀರ್ ಜೈಸ್ವಾಲ್, ಭಾರತದ ಅವಿಭಾಜ್ಯ ಅಂಗಗಳಾಗಿರುವ ಜಮ್ಮು-ಕಾಶ್ಮೀರ ಮತ್ತು ಲಡಾಖ್‌ಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಪ್ರತಿಕ್ರಿಯಿಸುವ ಯಾವುದೇ ಹಕ್ಕು ಬೇರೆ ಯಾವುದೇ ದೇಶಕ್ಕೆ ಇಲ್ಲ ಎಂದು ಹೇಳಿದ್ದಾರೆ. ಚೀನಾ-ಪಾಕಿಸ್ತಾನ ಆರ್ಥಿಕ ಕಾರಿಡಾರ್ ಕುರಿತಾದ ಉಲ್ಲೇಖಗಳಿಗೂ ಭಾರತ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ''ಭಾರತದ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಗೆ ಧಕ್ಕೆ ತರುವ ಮೂಲಕ ಈ ಪ್ರದೇಶಗಳ ಮೇಲಿನ ಪಾಕಿಸ್ತಾನದ ಅಕ್ರಮ ಮತ್ತು ಬಲವಂತದ ಆಕ್ರಮಣವನ್ನು ಬಲಪಡಿಸಲು ಅಥವಾ ಕಾನೂನುಬದ್ಧಗೊಳಿಸಲು ಇತರ ದೇಶಗಳು ಮಾಡುವ ಯಾವುದೇ ಪ್ರಯತ್ನಗಳನ್ನು ನಾವು ದೃಢವಾಗಿ ವಿರೋಧಿಸುತ್ತೇವೆ ಮತ್ತು ತಿರಸ್ಕರಿಸುತ್ತೇವೆ'' ಎಂದು ವಿದೇಶಾಂಗ ಸಚಿವಾಲಯದ ವಕ್ತಾರರು ತಿಳಿಸಿದ್ದಾರೆ. 1963ರಲ್ಲಿ ಪಾಕಿಸ್ತಾನ ಮತ್ತು ಚೀನಾ ನಡುವೆ ಸಹಿ ಮಾಡಲಾದ ಗಡಿ ಒಪ್ಪಂದವನ್ನು ಭಾರತ ಎಂದಿಗೂ ಮಾನ್ಯ ಮಾಡಿಲ್ಲ ಎಂಬುದನ್ನು ಭಾರತ ಮತ್ತೊಮ್ಮೆ ಸ್ಪಷ್ಟಪಡಿಸಿದೆ. ತಮ್ಮ ಜಂಟಿ ಹೇಳಿಕೆಯಲ್ಲಿ, ಜಮ್ಮು ಮತ್ತು ಕಾಶ್ಮೀರ ವಿವಾದವನ್ನು ವಿಶ್ವಸಂಸ್ಥೆಯ ಚಾರ್ಟರ್, ಭದ್ರತಾ ಮಂಡಳಿಯ ನಿರ್ಣಯಗಳು ಮತ್ತು ದ್ವಿಪಕ್ಷೀಯ ಒಪ್ಪಂದಗಳ ಪ್ರಕಾರ ಶಾಂತಿಯುತವಾಗಿ ಪರಿಹರಿಸಿಕೊಳ್ಳಬೇಕು ಎಂದು ಚೀನಾ ಮತ್ತು ಪಾಕಿಸ್ತಾನ ಉಲ್ಲೇಖಿಸಿದ್ದವು. ಇದಕ್ಕೆ ಭಾರತ ಆಕ್ಷೇಪ ವ್ಯಕ್ತಪಡಿಸಿದೆ. ಭಾರತದ ವಿರುದ್ಧ ಪಾಕಿಸ್ತಾನದ ನಿರಂತರ ಗಡಿಯಾಚೆಗಿನ ಆಕ್ರಮಣವನ್ನು ವಿಶ್ವಸಂಸ್ಥೆಯಲ್ಲಿರುವ ಭಾರತದ ಖಾಯಂ ರಾಯಭಾರಿ ಪರ್ವತನೇನಿ ಹರೀಶ್ ಅವರು ಪ್ರಸ್ತಾಪಿಸಿ, ಇಸ್ಲಾಮಾಬಾದ್ ತನ್ನ ಭಯೋತ್ಪಾದನೆಯನ್ನು ಪ್ರಾಯೋಜಿಸುತ್ತಿರುವುದಕ್ಕೆ ತಕ್ಕ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.ಭದ್ರತಾ ಮಂಡಳಿ ಸಭೆಯಲ್ಲಿ ಮಾತನಾಡಿದ ಅವರು, ಪಾಕಿಸ್ತಾನ ಗಡಿಯಾಚೆಗಿನ ಭಯೋತ್ಪಾದನೆ ಮತ್ತು ಹಿಂಸಾತ್ಮಕ ಮೂಲಭೂತವಾದವನ್ನು ನಿರಂತರವಾಗಿ ಮುಂದುವರೆಸಿದೆ. ಈ ರೀತಿಯ ದುಷ್ಕೃತ್ಯಗಳಿಂದ ರಕ್ಷಿಸಿಕೊಳ್ಳುವ ಎಲ್ಲಾ ಹಕ್ಕನ್ನು ಭಾರತ ಹೊಂದಿದೆ ಎಂದರು. ಪಾಕಿಸ್ತಾನ ಮಂಗಳವಾರ ಮಾಡಿದ ಆಧಾರರಹಿತ ಮತ್ತು ಅನಗತ್ಯ ಹೇಳಿಕೆಯ ನಂತರ ರಾಯಭಾರಿ ಪರ್ವತನೇನಿ ಅವರು ಬುಧವಾರ ತಿರುಗೇಟು ಕೊಟ್ಟಿದ್ದಾರೆ. ಜಮ್ಮು ಮತ್ತು ಕಾಶ್ಮೀರ ಮತ್ತು ಲಡಾಖ್ ಭೂಪ್ರದೇಶಗಳು ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಭಾಗಗಳಾಗಿವೆ. ಬೇರೆ ಯಾವುದೇ ದೇಶ ಇದರ ಬಗ್ಗೆ ಪ್ರತಿಕ್ರಿಯಿಸುವ ಅರ್ಹತೆ ಹೊಂದಿಲ್ಲ ಎಂದು ಚೀನಾ ಮತ್ತು ಪಾಕಿಸ್ತಾನ ಬಿಡುಗಡೆ ಮಾಡಿದ ಜಂಟಿ ಹೇಳಿಕೆಯನ್ನು ಭಾರತ ಖಂಡಿಸಿ, ಜಮ್ಮು ಮತ್ತು ಕಾಶ್ಮೀರದ ಉಲ್ಲೇಖಗಳನ್ನು ಬಲವಾಗಿ ತಿರಸ್ಕರಿಸಿತು.

**ವಿದೇಶಾಂಗ ಸಚಿವಾಲಯ ಚಾಟಿ**

### ಭಾರತದಿಂದ ವಿರೋಧ

ಇದೇ ವೇಳೆ, ಪಾಕಿಸ್ತಾನ ಹಾಗೂ ಚೀನಾ ಜಂಟಿಯಾಗಿ ರೂಪಿಸುತ್ತಿರುವ ಚೀನಾ-ಪಾಕಿಸ್ತಾನ ಆರ್ಥಿಕ ಕಾರಿಡಾರ್ ಯೋಜನೆಗಳನ್ನು ಪ್ರಸ್ತಾಪವನ್ನು ಟೀಕಿಸಿದ್ದು, ಈ ಯೋಜನೆಯಲ್ಲಿನ ಕೆಲವು ಪ್ರದೇಶಗಳು ಭಾರತದ ಸಾರ್ವಭೌಮ ಪ್ರದೇಶದಲ್ಲಿವೆ, ಭಾರತದ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಗೆ ಧಕ್ಕೆ ತರುವ ಮೂಲಕ ಪಾಕಿಸ್ತಾನವು ಈ ಪ್ರದೇಶಗಳನ್ನು ಅಕ್ರಮವಾಗಿ ಮತ್ತು ಬಲವಂತವಾಗಿ ಆಕ್ರಮಿಸಿಕೊಂಡಿರುವುದನ್ನು ಬಲಪಡಿಸಲು ಅಥವಾ ಕಾನೂನುಬದ್ಧಗೊಳಿಸಲು ಇತರ ದೇಶಗಳು ಮಾಡುವ ಯಾವುದೇ ಕ್ರಮಗಳನ್ನು ನಾವು ದೃಢವಾಗಿ ವಿರೋಧಿಸುತ್ತೇವೆ ಮತ್ತು ತಿರಸ್ಕರಿಸುತ್ತೇವೆ. ಈ ಕುರಿತು ಈಗಾಗಲೇ ಪಾಕ್ ಮತ್ತು ಚೀನೀ ಅಧಿಕಾರಿಗಳಿಗೆ ಹಲವಾರು ಬಾರಿ ಸ್ಪಷ್ಟವಾಗಿ ತಿಳಿಸಲಾಗಿದೆ ಎಂದು ತಿಳಿಸಿದ್ದಾರೆ. ಪಾಕಿಸ್ತಾನ ಮತ್ತು ಚೀನಾ ನಡುವಿನ 1963 ರ ಗಡಿ ಒಪ್ಪಂದವನ್ನು ನವದೆಹಲಿ ಎಂದಿಗೂ ಗುರುತಿಸಿಲ್ಲ ಎಂದು ಒತ್ತಿ ಹೇಳಿದ ಜೈಸ್ವಾಲ್, ಚೀನಾ ಮತ್ತು ಪಾಕಿಸ್ತಾನ ನಡುವಿನ 'ಟ್ರಾನ್ಸ್-ಬೌಂಡರಿ ಜಲ ಸಂಪನ್ಮೂಲ ಸಹಕಾರ'ದ ಉಲ್ಲೇಖಗಳನ್ನು ನಾವು ನೋಡಿದ್ದೇವೆ. ಎರಡೂ ದೇಶಗಳು ಯಾವುದೇ ಗಡಿಯನ್ನು ಹಂಚಿಕೊಳ್ಳದ ಕಾರಣ, 'ಟ್ರಾನ್ಸ್‌ಬೌಂಡರಿ ಜಲ ಸಂಪನ್ಮೂಲ ಸಹಕಾರ' ಎಂದು ಕರೆಯಲ್ಪಡುವ ಪ್ರಶ್ನೆ ಉದ್ಭವಿಸುವುದಿಲ್ಲ ಎಂಬ ಸಂದೇಶ ರವಾನಿಸಿದ್ದಾರೆ.



### ಪಾಕ್-ಚೀನಾ ಜಂಟಿ ಹೇಳಿಕೆ

ಭಾರತದ ಈ ಹೇಳಿಕೆಗಳು ಇತ್ತೀಚೆಗೆ ಪಾಕ್-ಚೀನಾ ಜಂಟಿಯಾಗಿ ತಮ್ಮ ಯೋಜನೆಯ ಕುರಿತು ನೀಡಿದ ಜಂಟಿ ಹೇಳಿಕೆ ಬಳಿಕ ಬಂದಿದೆ. ಪಾಕ್-ಚೀನಾದ ಅಧಿಕಾರಿಗಳು ಜಮ್ಮು ಮತ್ತು ಕಾಶ್ಮೀರದಲ್ಲಿನ ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಪಾಕಿಸ್ತಾನವು ಚೀನಾದ ಕಡೆಯಿಂದ ವಿವರಿಸಿದೆ. ಇದಕ್ಕೆ ಪ್ರತಿಕ್ರಿಯೆಯಾಗಿ, ಪಾಕಿಸ್ತಾನವು ಭಾರತೀಯ ಭೂಪ್ರದೇಶವನ್ನು ಅಕ್ರಮವಾಗಿ ಆಕ್ರಮಿಸಿಕೊಂಡಿರುವ ವಿಷಯವನ್ನು ವಿವಾದ ಐತಿಹಾಸಕವಾಗಿ ಉಳಿದುಕೊಂಡಿದ್ದು, ಈ ಕುರಿತಂತೆ ಕಾಶ್ಮೀರ ಸಮಸ್ಯೆಯನ್ನು ವಿಶ್ವಸಂಸ್ಥೆಯ ಚಾರ್ಟರ್, ಸಂಬಂಧಿತ ವಿಶ್ವಸಂಸ್ಥೆ ಭದ್ರತಾ ಮಂಡಳಿಯ ನಿರ್ಣಯಗಳು ಮತ್ತು ದ್ವಿಪಕ್ಷೀಯ ಒಪ್ಪಂದಗಳಿಗೆ ಅನುಗುಣವಾಗಿ ಸರಿಯಾಗಿ ಮತ್ತು ಶಾಂತಿಯುತವಾಗಿ ಪರಿಹರಿಸಬೇಕುಎಂದು ಚೀನಾ ಹೇಳಿಕೆ ನೀಡಿತ್ತು. ಇದಕ್ಕೆ ಪ್ರತಿಯಾಗಿ ಪಾಕಿಸ್ತಾನ ತೈವಾನ್ ಅನ್ನು ಚೀನಾದ ಭೂಭಾಗ ಎಂದು ಉಲ್ಲೇಖಿಸಿತ್ತು.




### ಒಳಿತಿಗಾಗಿ ದೇಶಗಳು ಸಹಕಾರ

ವಿವೇಚನಾರಹಿತ ಶಕ್ತಿ ಮತ್ತು ಅಧಿಕಾರ ರಾಜಕಾರಣವು ಬಹುಪಕ್ಷೀಯತೆಯನ್ನು ಬಲಪಡಿಸಲು ಸಾಧ್ಯವಿಲ್ಲ. ಜಾಗತಿಕ ಒಳಿತಿಗಾಗಿ ದೇಶಗಳು ಸಹಕಾರ ಮತ್ತು ರಾಜಿ ಮನೋಭಾವವನ್ನು ತೋರಿಸಬೇಕು ಎಂದಿರುವ ಅವರು, ಎಲ್ಲಾ ರೀತಿಯ ಭಯೋತ್ಪಾದನೆಗೆ ಪಾಕಿಸ್ತಾನ ನೀಡುತ್ತಿರುವ ಬೆಂಬಲವನ್ನು ಶಾಶ್ವತವಾಗಿ ಕೊನೆಗೊಳಿಸಬೇಕು ಎಂದು ಪುನರುಚ್ಚರಿಸಿದರು. ಭಾರತದ ಕೇಂದ್ರಾಡಳಿತ ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರದ ಉಲ್ಲೇಖಗಳ ಕುರಿತು ಮಾಧ್ಯಮದ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತದ ನಿಲುವು ಸ್ಥಿರವಾಗಿದೆ ಮತ್ತು ಸಂಬಂಧಪಟ್ಟ ಪಕ್ಷಗಳಿಗೆ ಚೆನ್ನಾಗಿ ತಿಳಿದಿದೆ ಎಂದು ಹೇಳಿದರು.

### ವಿಶ್ವಸಂಸ್ಥೆಯಲ್ಲಿ ಬಹಿರಂಗ

ಗಡಿಯಾಚೆಗಿನ ಭಯೋತ್ಪಾದನೆಯ ಪರಿಣಾಮಗಳನ್ನು ಪಾಕಿಸ್ತಾನ ಎದುರಿಸುತ್ತಿದೆ ಎಂಬುದನ್ನು ಒಪ್ಪಿಕೊಳ್ಳಬೇಕು. ಪಾಕಿಸ್ತಾನವು ಭಯೋತ್ಪಾದನೆ, ಧಾರ್ಮಿಕ ಉಗ್ರವಾದ, ಹಿಂಸಾತ್ಮಕ ಮೂಲಭೂತವಾದ ಮತ್ತು ಭಾರತ ವಿರೋಧಿ ದುಷ್ಟ ಶಕ್ತಿಗಳನ್ನು ಬಳಸಿಕೊಳ್ಳುವುದನ್ನು ನಿರಂತರವಾಗಿ ಮುಂದುವರೆಸಿದೆ ಎಂದು ನೆನಪಿಸಿದರು.

ಅಲ್ಲದೇ ಪಾಕಿಸ್ತಾನ ಅನುಸರಿಸಿಕೊಂಡು ಬರುತ್ತಿರುವ ಸಾವಿರಾರು ಕಡಿತಗಳಿಂದ ಭಾರತವನ್ನು ರಕ್ತಸಿಕ್ತವಾಗಿಸುವ ನೀತಿಯನ್ನು ಬಲವಾಗಿ ಖಂಡಿಸಿದ ಅವರು, ಇಸ್ಲಾಮಾಬಾದ್ ಹೇಗೆ ತನ್ನ ಪೊಳ್ಳು ಬದ್ಧತೆಯನ್ನು ಬಹಿರಂಗಪಡಿಸುತ್ತದೆ.

**ಭಾರತ ರಕ್ತಸಿಕ್ತವಾಗಿಸುವ ನೀತಿ ಖಂಡಿನೆ**

## ಎಂಡಿಎಂಎ ಮಾದಕ ವಸ್ತುಗಳ ಮಾರಾಟ: ನೈಜೀರಿಯಾ ಪ್ರಜೆಯ ಜಾಮೀನು ಅರ್ಜಿ ತಿರಸ್ಕರಿಸಿದ ಹೈಕೋರ್ಟ್


• ಉದಯವಾಹಿನಿ, ಬೆಂಗಳೂರು

ವಾಣಿಜ್ಯ ಪ್ರಮಾಣದ ಮಾದಕ ವಸ್ತುಗಳೊಂದಿಗೆ ಸಿಕ್ಕಿಬಿದ್ದ ಆರೋಪಿಗಳಿಗೆ ಜಾಮೀನು ನೀಡುವುದು ಅಪವಾದವಾಗಲಿದೆ ಎಂದು ಅಭಿಪ್ರಾಯಪಟ್ಟಿರುವ ಹೈಕೋರ್ಟ್, ಎಂಡಿಎಂಎ ಮಾದಕ ವಸ್ತು ಸಾಗಣೆ ಪ್ರಕರಣದಲ್ಲಿ ಬಂಧಿತರಾಗಿದ್ದ ನೈಜೀರಿಯಾ ಪ್ರಜೆಯ ಜಾಮೀನು ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿದೆ.

ನೈಜೀರಿಯಾದ ಪ್ರಜೆಯಾಗಿರುವ ಕ್ರಿಶ್ಚಿಯನ್ ಸೋಪೊರುಚುಕ್ವು ಎಂಬುವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿ. ಶ್ರೀಶಾನಂದ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ.

ಪ್ರಕರಣ ಸಂಬಂಧ ದಾಖಲೆಗಳನ್ನು ಪರಿಶೀಲಿಸಿದ ನ್ಯಾಯಪೀಠ, ಆರೋಪಿಯು ಅಕ್ರಮವಾಗಿ ಭಾರತದಲ್ಲಿ ಉಳಿದಿದ್ದು, 1 ಕೆಜಿ ಎಂಡಿಎಂಎ ಸಹಿತ ಸಿಕ್ಕಿಬಿದ್ದಿದ್ದಾನೆ. ದಾಳಿ ನಡೆಸಿದ ಪೊಲೀಸ್ ತಂಡದ ಮುಖ್ಯಸ್ಥರು ಆರೋಪಿಯಿಂದ ಮಾದಕ ವಸ್ತುಗಳ ಜೊತೆಗೆ ಮಿನಿ ಎಲೆಕ್ಟ್ರಾನಿಕ್ ತೂಕ ಯಂತ್ರ, ಮೊಬೈಲ್ ಫೋನ್ ಹಾಗೂ ದ್ವಿಚಕ್ರ ವಾಹನ ವಶಪಡಿಸಿಕೊಂಡಿದ್ದಾರೆ. ನಂತರ ಆರೋಪಿಯನ್ನು ಹಾಗೂ ವಶಪಡಿಸಿಕೊಂಡ ವಸ್ತುಗಳನ್ನು ಠಾಣಾಧಿಕಾರಿಗಳ ವಶಕ್ಕೆ ಒಪ್ಪಿಸಲಾಗಿದೆ. ವಾಸ್ತವವಾಗಿ ಬಂಧನವು ಪೊಲೀಸ್ ಠಾಣೆಯಲ್ಲೇ ನಡೆದಿರುವುದರಿಂದ ದಾಳಿ ತಂಡದ ಮುಖ್ಯಸ್ಥರು ಹೆಚ್ಚುವರಿ ವಿಧಿವಿಧಾನಗಳನ್ನು ಪಾಲಿಸುವ ಅಗತ್ಯ ಇರಲಿಲ್ಲ ಎಂದು ಹೇಳಿದೆ.

ಅಲ್ಲದೆ, 1 ಕೆಜಿ ಎಂಡಿಎಂಎ ಸಂಗ್ರಹಿಸುವುದು ಸುಲಭದ ವಿಷಯವಲ್ಲ. ಪೊಲೀಸರು ಸುಳ್ಳು ಪ್ರಕರಣ ದಾಖಲಿಸಿದ್ದಾರೆ ಎನ್ನುವ ವಾದ ನಂಬಲರ್ಹವಲ್ಲ. ಅಲ್ಲದೆ, ಆರೋಪಿಗೂ ದಾಳಿ ನಡೆಸಿದ ಅಧಿಕಾರಿಗೂ ಪೂರ್ವ ವೈಮನಸ್ಸು ಇತ್ತು ಎಂಬುದಕ್ಕೂ ಯಾವುದೇ ಪುರಾವೆಗಳಿಲ್ಲ ಎಂದು ಪೀಠ ತಿಳಿಸಿದೆ. ಅರ್ಜಿದಾರರ ವಾದವನ್ನು ತಳ್ಳಿಹಾಕಿರುವ ನ್ಯಾಯಪೀಠ, ಬಂಧನದ



ಕಾರಣಗಳನ್ನು ಸರಿಯಾಗಿ ತಿಳಿಸದಿರುವುದು ಕೆಲ ಪ್ರಕರಣಗಳಲ್ಲಿ ಜಾಮೀನು ನೀಡಲು ಆಧಾರವಾಗಬಹುದು. ಆದರೆ ವಾಣಿಜ್ಯ ಪ್ರಮಾಣದ ಡ್ರಗ್ಸ್ ಪ್ರಕರಣಗಳಲ್ಲಿ ಕೇವಲ ತಾಂತ್ರಿಕ ಲೋಪಗಳನ್ನು ಆಧಾರವನ್ನಾಗಿ ಮಾಡಿಕೊಂಡು ಜಾಮೀನು ನೀಡಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದೆ.

**ಪ್ರಕರಣದ ಹಿನ್ನೆಲೆ:** ಅರ್ಜಿದಾರ ಆರೋಪಿ ಕ್ರಿಸ್ಟಿಯನ್ ಬಟ್ಟೆ ವ್ಯಾಪಾರಕ್ಕಾಗಿ ಬ್ಯುಸಿನೆಸ್ ವೀಸಾದ ಮೇಲೆ ಭಾರತಕ್ಕೆ ಬಂದಿದ್ದ. ಬಳಿಕ ಗೋವಾ, ದೆಹಲಿ ಮತ್ತು ಮುಂಬೈ ನಗರಗಳಲ್ಲಿ ವಾಸವಾಗಿದ್ದ ವೇಳೆ ದಕ್ಷಿಣ ಆಫ್ರಿಕಾ ಮೂಲದ ಡ್ರಗ್ ಪೆಡ್ಲರ್‌ಗಳ ಪರಿಚಯ ಮಾಡಿಕೊಂಡು ಕಡಿಮೆ ದರದಲ್ಲಿ ಎಂಡಿಎಂಎ ಖರೀದಿಸಿ, ಕಾಲೇಜು ವಿದ್ಯಾರ್ಥಿಗಳು ಹಾಗೂ ಐಟಿ/ಬಿಟಿ ಉದ್ಯೋಗಿಗಳಿಗೆ ಪ್ರತಿ ಗ್ರಾಂಗೆ 15 ಸಾವಿರದಿಂದ 20 ಸಾವಿರಕ್ಕೆ ಮಾರಾಟ ಮಾಡುತ್ತಿದ್ದ. ಪ್ರಕರಣ ಸಂಬಂಧ ಅರ್ಜಿದಾರ ಆರೋಪಿ ಕ್ರಿಸ್ಟಿಯನ್ ಅವರನ್ನು ಬೇಗೂರು ಪೊಲೀಸರು 1 ಕೆಜಿ ಎಂಡಿಎಂಎ ಕ್ರಿಸ್ಟಲ್‌ಗಳೊಂದಿಗೆ 2025ರ ಏಪ್ರಿಲ್ 6ರಂದು ಬಂಧಿಸಿ ಎನ್‌ಡಿಪಿಎಸ್ ಕಾಯ್ದೆಯ ವಿವಿಧ ಕಲಂಗಳಡಿ ಪ್ರಕರಣ ದಾಖಲಿಸಿದ್ದರು.

## ಸಿಎಂ ಹೇಳಿದ ಬಳಿಕವೇ ಎಲ್ಲವೂ ಗೊತ್ತಾಗಲಿದೆ: ಸಚಿವ ಸತೀಶ್ ಜಾರಕಿಹೊಳಿ

• ಉದಯವಾಹಿನಿ, ಬೆಂಗಳೂರು:

2 ಹೈಕಮಾಂಡ್ ನೇತೃತ್ವದಲ್ಲಿ ನಿನ್ನೆ ಮಹತ್ವದ ಚರ್ಚೆಗಳು ನಡೆದಿರುವುದು ನಿಜ. ಆದರೆ, ಇನ್ನೂ ಅಧಿಕೃತವಾಗಿ ಏನನ್ನೂ ತಿಳಿಸಲಾಗಿಲ್ಲ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ರಾಜ್ಯ ಕಾಂಗ್ರೆಸ್ ನಾಯಕತ್ವ ಬದಲಾವಣೆ ಕುರಿತು ಇಂದು ನವದೆಹಲಿಯಲ್ಲಿ ಮಾಧ್ಯಮದವರು ಕೇಳಿದ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ಸಿಎಂ ಹೇಳಿದ ಬಳಿಕವೇ ಎಲ್ಲವೂ ಗೊತ್ತಾಗಲಿದೆ. ಹೈಕಮಾಂಡ್ ಸಭೆಯಲ್ಲಿ ಏನಾಗಿದೆ, ಅವರು ಏನು ಆದೇಶ ನೀಡಿದ್ದಾರೆ ಎಂದು ತಿಳಿದುಬಂದಿಲ್ಲ. ಗುರುವಾರ ಬ್ರೇಕ್‌ಫಾಸ್ಟ್ ಮೀಟಿಂಗ್ ಬಳಿಕವೇ ಸಿಎಂ ಈ ಬಗ್ಗೆ ಮಾತನಾಡಲಿದ್ದಾರೆ. ಬೆಂಗಳೂರಿನಲ್ಲಿ ಉಪಾಹಾರ ಸಭೆ ಕರೆದಿದ್ದಾರೆ. ನಾವು ಕೂಡ ಉಪಾಹಾರ ಕೂಟದಲ್ಲಿ ಭಾಗವಹಿಸುತ್ತೇವೆ. ಅಲ್ಲಿ ಅವರು ಮಾತನಾಡಿದ ನಂತರವೇ ನಮಗೆ ತಿಳಿಯುತ್ತದೆ. ಹೈಕಮಾಂಡ್ ನಮ್ಮನ್ನು ಕೇಳಿದರೆ ನಮ್ಮ ಬೇಡಿಕೆ ಏನೆಂದು ತಿಳಿಸಲಾಗುವುದು ಎಂದರು.

ಕೆಪಿಸಿಸಿ ಅಧ್ಯಕ್ಷ ಹುದ್ದೆಗೆ ಸಂಭಾವ್ಯ ಅಭ್ಯರ್ಥಿಯಾಗಿ ಅವರ ಹೆಸರು ಕೇಳಿಬರುತ್ತಿರುವ ಬಗ್ಗೆ ಪ್ರತಿಕ್ರಿಯಿಸಿ, ನನಗೆ ಗೊತ್ತಿಲ್ಲ. ಅದರ ಬಗ್ಗೆ ಇನ್ನೂ ಯಾವುದೇ ನಿರ್ದಿಷ್ಟ ಚರ್ಚೆ ನಡೆದಿಲ್ಲ. ಕೆಲವು ಚರ್ಚೆಗಳು ನಡೆಯುತ್ತಿವೆ. ಆದರೆ, ಹಿರಿಯ ನಾಯಕರು ಇಲ್ಲಿಯವರೆಗೆ ನನಗೆ ವೈಯಕ್ತಿಕವಾಗಿ ಕರೆ ಮಾಡಿ ಚರ್ಚಿಸಿಲ್ಲ. ಅವರು ಕರೆ ಮಾಡಿದರೆ, ನಿಮಗೆ ತಿಳಿಸುತ್ತೇನೆ. ಪಕ್ಷದ ನಿರ್ಧಾರ ಎಲ್ಲರಿಗೂ ಅಂತಿಮ.

ಪಕ್ಷ ಯಾವುದೇ ನಿರ್ಧಾರ ತೆಗೆದುಕೊಂಡರೂ, ಎಲ್ಲರೂ ಅದಕ್ಕೆ ಬದ್ಧರಾಗಿರಬೇಕು. ಆದ್ದರಿಂದ ನಾವು ಸ್ವಲ್ಪ ಕಾಯಬೇಕಾಗಿದೆ ಎಂದು ತಿಳಿಸಿದರು. **ಸಿಎಂ ಭೇಟಿ ಮಾಡುವೆ ಎಂದ ಗೃಹ**



**ಸಚಿವ ಪರಮೇಶ್ವರ್:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಜೊತೆ ನಡೆಸಿದ ಸಭೆಯಲ್ಲಿನ ಚರ್ಚೆಗಳ ಬಗ್ಗೆ ಯಾರಿಗೂ ತಿಳಿದಿಲ್ಲ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಹೇಳಿದರು.

ಹೈಕಮಾಂಡ್ ನಾಯಕರು ಹಾಗೂ ಸಿಎಂ ಸಭೆ ನಡೆಸಿದ್ದಾರೆ. ಆದರೆ, ಒಳಗೆ ಏನು ಚರ್ಚಿಸಲಾಗಿದೆ ಅನ್ನೋದು ಯಾರಿಗೂ ತಿಳಿದಿಲ್ಲ. ನಮಗೆ ಇನ್ನೂ ಯಾವುದೇ ಮಾಹಿತಿ ಇಲ್ಲ. ರಾಜ್ಯ ಉಸ್ತುವಾರಿ ಸುರ್ಜೆವಾಲಾ ಇಂದು ಬೆಂಗಳೂರಿಗೆ ಬರುತ್ತಿದ್ದಾರೆ. ಅವರು ಎಲ್ಲಾ ಗೊಂದಲಗಳನ್ನು ನಿವಾರಿಸುತ್ತಾರೆ. ಆಂತರಿಕ ಚರ್ಚೆಗಳ ಬಗ್ಗೆ ನಮಗೆ ಇನ್ನೂ ತಿಳಿದಿಲ್ಲ. ನಮಗೆ ಇನ್ನೂ ಯಾವುದೇ ಮಾಹಿತಿ ಇಲ್ಲ ಕೆ.ಸಿ. ವೇಣುಗೋಪಾಲ್ ಏನು ಹೇಳಿದರು ಅನ್ನೋದು ನಮಗೆ ತಿಳಿದಿದೆ ಎಂದು ಅವರು ಮಾಧ್ಯಮದವರಿಗೆ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಳೆ ಉಪಾಹಾರ ಸಭೆ ಕರೆದಿದ್ದಾರೆ. ನಾನು ಮಧ್ಯಾಹ್ನ ಸಿಎಂ ಅವರನ್ನು ಭೇಟಿ ಮಾಡುತ್ತೇನೆ ಎಂದು ಪರಮೇಶ್ವರ್ ಇದೇ ವೇಳೆ ಹೇಳಿದರು.

# ಅಪ್ಪಾಜಿ ನೀವು ಹೋದ್ರೆ ನಮ್ಮನ್ನ ಕೈ ಬಿಡ್ತಾರೆ? ಸಿಎಂ ಮುಂದೆ ಕಣ್ಣೀರಿಟ್ಟ ನೌಕರರು

• ಉದಯವಾಹಿನಿ,ಬೆಂಗಳೂರು

ಸಿದ್ದರಾಮಯ್ಯ ಅವರು ಮೇ 28 ರಂದು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಲು ಮುಂದಾಗಿದ್ದಾರೆ. ಇದರ ಬೆನ್ನಲ್ಲೇ ವಿಧಾನಸೌಧದಲ್ಲಿದ್ದ ಅಡ್ಮಿನ್ ವಿಭಾಗದ ಮಹಿಳಾ ಸಿಬ್ಬಂದಿ ಕಣ್ಣೀರಿಟ್ಟಿದ್ದಾರೆ. ಅಪ್ಪಾಜಿ ಅಪ್ಪಾಜಿ.. ನೀವು ಹೋದ್ರೆ, ನಮ್ಮನ್ನ ಕೈ ಬಿಡ್ತಾರೆ ಎಂದು ಕೆಲ ನೌಕರರು ಗೋಳಾಡಿದ್ದಾರೆ. ನಿಮ್ಮ ಹೆಸರು ಹೇಳಿಕೊಂಡು ಬದುಕುತ್ತಿದ್ದೇವು ಎಂದು ವಿಧಾನಸೌಧದಲ್ಲಿ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುವ ಉದ್ಯೋಗಿಗಳು ಕಣ್ಣೀರಿಟ್ಟಿದ್ದಾರೆ. ಆದರೆ ಸಿಎಂ ಸಿದ್ದರಾಮಯ್ಯ ಅವರು ವಿಷಲ್ ಹೊಡೆದುಕೊಂಡು ಅಲ್ಲಿಂದ ತೆರಳಿದ್ದಾರೆ. ತಮ್ಮ ಹಳೆಯ ಶೈಲಿಯಲ್ಲಿಯೇ ನಿರ್ಗಮಿಸಿದರು. ಇನ್ನೂ ಇದೇ ವೇಳೆ ಸಿಎಂಗೆ ಅಭಿಮಾನಿಗಳು ಜೈಕಾರ ಕೂಗಿದ್ದಾರೆ. ಸಿಎಂ ನೋಡಲು ಸಿಬ್ಬಂದಿ ದಂಡು ಸೇರಿದ್ದರು.

ಸಿದ್ದರಾಮಯ್ಯ ಬೇಕು ಎಂದು ಅಭಿಮಾನಿಗಳು ಕೂಗಿದರು. ಆದರೆ ಸಿದ್ದರಾಮಯ್ಯ ಮಾತ್ರ ಏನೂ ಮಾತನಾಡದೇ ಅಲ್ಲಿಂದ ತೆರಳಿದ್ದಾರೆ. **ಕಾವೇರಿ ನಿವಾಸಕ್ಕೆ ಆಪ್ತ ಸಚಿವರ ದಂಡು:** ಇತ್ತ ಸಿಎಂ



ಸರ್ಕಾರಿ ನಿವಾಸ ಕಾವೇರಿಗೆ ಸಿದ್ದರಾಮಯ್ಯ ಆಪ್ತ ಸಚಿವರ ದಂಡು ಆಗಮಿಸುತ್ತಿದ್ದು, ಚರ್ಚೆ ನಡೆಸುತ್ತಿದ್ದಾರೆ. ರಾಜೀನಾಮೆ ಸಾಧ್ಯತೆ ಸುದ್ದಿ ಹರಿದಾಡುತ್ತಿರುವ ಸಂಬಂಧ ಆಪ್ತ ಸಚಿವರು, ಶಾಸಕರು ಸಿಎಂ ಸಿದ್ದರಾಮಯ್ಯ ಬಳಿ ಸ್ಪಷ್ಟೀಕರಣ ಕೋರುತ್ತಿದ್ದಾರೆ ಎನ್ನಲಾಗಿದೆ. ಕಾವೇರಿ ನಿವಾಸಕ್ಕೆ ಸಚಿವರುಗಳಾದ ಜಮೀರ್ ಅಹಮದ್ ಖಾನ್, ಹೆಚ್.ಸಿ. ಮಹದೇವಪ್ಪ, ಎಂ.ಸಿ. ಸುಧಾಕರ್, ಸಂತೋಷ್ ಲಾಡ್, ಹೆಚ್. ಕೆ. ಪಾಟೀಲ್, ಎಂ.ಬಿ. ಪಾಟೀಲ್, ಆರ್.ಬಿ. ತಿಮ್ಮಾಪೂರ, ಕೆ.ಜೆ. ಜಾರ್ಜ್. ಕೆ. ವೆಂಕಟೇಶ್ ಆಗಮಿಸಿ ಚರ್ಚೆ ನಡೆಸಿದ್ದಾರೆ.

ಶಿವಲಿಂಗೇಗೌಡ, ರಾಜೇಂದ್ರ ರಾಜಣ್ಣ, ಮಾಲೂರ್ ನಂಜೇಗೌಡ, ಮಾಜಿ ಸಚಿವ ನಾಗೇಂದ್ರ, ನಜೀರ್ ಅಹಮದ್, ರಾಘವೇಂದ್ರ ಹಿಟ್ನಾಳ್, ಮಾಗಡಿ ಬಾಲಕೃಷ್ಣ ಭೇಟಿ ನೀಡಿ ಸಿಎಂ ಸಿದ್ದರಾಮಯ್ಯ ಬಳಿ ಮಾತುಕತೆ ನಡೆಸಿದರು. ಆಪ್ತರು ಕೇಳಿ ಬರುತ್ತಿರುವ ರಾಜಕೀಯ ಬೆಳವಣಿಗೆಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಕೆಲ ಸಚಿವರು, ಶಾಸಕರು ರಾಜೀನಾಮೆ ನೀಡದಂತೆ ಮನವೊಲಿಸಲು ಯತ್ನಿಸಿದ್ದಾರೆ.

ಆದರೆ ಸಿಎಂ ಸಿದ್ದರಾಮಯ್ಯ ಏನೂ ಪ್ರತಿಕ್ರಿಯೆ ನೀಡದೆ ಮೌನಕ್ಕೆ ಶರಣಾಗಿದ್ದಾರೆ ಎಂದು ಹೇಳಲಾಗುತ್ತಿದೆ. ಸಿಎಂ ಸಿದ್ದರಾಮಯ್ಯ ಭೇಟಿ ಬಳಿಕ ಹೆಚ್.ಕೆ. ಪಾಟೀಲ್ ಮಾತನಾಡುತ್ತಾ, ಮಾಧ್ಯಮಗಳಲ್ಲಿ ಸುದ್ದಿ ಬಂದಿದೆ. ನಮ್ಮ ಕಳವಳ ನಾವು ವ್ಯಕ್ತಪಡಿಸಿದ್ದೇವೆ. ಆದರೆ ಸಿಎಂ ಸಿದ್ದರಾಮಯ್ಯ ಸೈಲೆಂಟ್ ಆಗಿದ್ದರು. ನಾವು ಇವತ್ತು ಸಿಎಂರನ್ನು ಭೇಟಿ ಮಾಡೋಕೆ ಬಂದಿದ್ದೇವೆ. ಮಾಧ್ಯಮಗಳಲ್ಲಿ ಬಂದ ಸುದ್ದಿ ಹಿನ್ನೆಲೆಯಲ್ಲಿ ಭೇಟಿ ಮಾಡಿದ್ದೇವೆ. ಸಹಜವಾಗಿಯೇ ನಮಗೂ ಒಂದು ರೀತಿಯ ಕಳವಳ ಇತ್ತು. ಅದರ ಬಗ್ಗೆ ಮಾತಾಡಲು ಸಿಎಂ ಭೇಟಿ ಮಾಡಿದ್ದೇವೆ. ನಮ್ಮ ಕಳವಳ ನಮ್ಮ ಮನವಿಯನ್ನು ಸಿಎಂಗೆ ಹೇಳಿದ್ದೇವೆ. ಆದರೆ ಸಿಎಂ ಮಾತ್ರ ಸೈಲೆಂಟ್ ಆಗಿದ್ರು, ಏನು ಮಾತಾಡ್ತಿಲ್ಲ ಎಂದು ತಿಳಿಸಿದರು. ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲೇ ಉಪಮುಖ್ಯಮಂತ್ರಿಯಾಗಿರುವ ಡಿ.ಕೆ. ಶಿವಕುಮಾರ್‌ರವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡಲಾಗುತ್ತದೆ. ಹೈಕಮಾಂಡ್‌ನ ಸಂದೇಶ ಹೊತ್ತು ಬರಲಿರುವ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್ ಹಾಗೂ ಸುರ್ಜೇವಾಲ ರವರು ಶಾಸಕಾಂಗ ಪಕ್ಷದ ಸಭೆಯಲ್ಲಿ ಹೈಕಮಾಂಡ್ ಸಂದೇಶವನ್ನು ಎಲ್ಲಾ ಶಾಸಕರಿಗೆ ವಿವರಿಸಿ, ಹೈಕಮಾಂಡ್ ಅಣತಿಯಂತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರನ್ನು ಶಾಸಕಾಂಗ ಪಕ್ಷದ ನಾಯಕನ್ನಾಗಿ ಆಯ್ಕೆ ಮಾಡುವ ಪ್ರಸ್ತಾವವನ್ನು ಶಾಸಕರ ಮುಂದಿಡಲಿದ್ದು, ಶಾಸಕಾಂಗ ಪಕ್ಷದ ಸಭೆಯಲ್ಲಿ ಡಿ.ಕೆ. ಶಿವಕುಮಾರ್ ಆಯ್ಕೆಗೆ ಎಲ್ಲಾ ಶಾಸಕರ ಒಪ್ಪಿಗೆ ಪಡೆಯುವ ಪ್ರಕ್ರಿಯೆಯನ್ನು ನಡೆಸುವರು. ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯ ನಂತರ ನೂತನ ಶಾಸಕಾಂಗ ಪಕ್ಷದ ನಾಯಕರು ರಾಜ್ಯಪಾಲರನ್ನು ಭೇಟಿ ಮಾಡಿ ಪ್ರಮಾಣ ವಚನ ಕಾರ್ಯಕ್ರಮವನ್ನು ನಿಗದಿ ಮಾಡುವರು ಎಂದು ಹೇಳಲಾಗಿದೆ.

### ರಾಜೀನಾಮೆ ನಂತರ ಸಿಎಲ್‌ಪಿ ಸಭೆ

**ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯಪಾಲರಿಗೆ ರಾಜೀನಾಮೆ ಪತ್ರ ನೀಡಿದ ನಂತರ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ಆ ಸಭೆಯಲ್ಲಿ ನೂತನ ಶಾಸಕಾಂಗ ಪಕ್ಷದ ಆಯ್ಕೆಯಾಗಲಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶಾಸಕಾಂಗ ಪಕ್ಷದ ನೂತನ ನಾಯಕನಾಗಿ ಆಯ್ಕೆಯಾಗಲಿದ್ದಾರೆ.**

**ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಮತ್ತು ಕೆ.ಸಿ. ವೇಣುಗೋಪಾಲ್ ಅವರು ಇಂದು ಮಧ್ಯಾಹ್ನ ದೆಹಲಿಯಿಂದ ಬೆಂಗಳೂರಿಗೆ ಬರಲಿದ್ದು, ಅವರು ಬಂದ ನಂತರ ಶಾಸಕಾಂಗ ಪಕ್ಷದ ಸಭೆಯ ದಿನಾಂಕ ನಿಗದಿಯಾಗಲಿದ್ದು, ಬಹುತೇಕ ಶುಕ್ರವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯುವುದು ನಿಶ್ಚಿತ.**

**ಈ ದಿನದ ದರ** ಪೆಟ್ರೋಲ್: 110.89 ₹/L | ಡೀಸೆಲ್ : 98.80₹/L | ಬಂಗಾರ: ₹ 15,829/Gram 24ct ₹14,510/Gram 22ct | ಬೆಳ್ಳಿ: ₹285.00/Gram

# ಉಗಾಂಡಾ ಮಹಿಳೆಗೆ ನೆಗೆಟಿವ್; ಕರ್ನಾಟಕದಲ್ಲಿ ಎಬೋಲಾ ಪ್ರಕರಣ ಇಲ್ಲ: ಆರೋಗ್ಯ ಸಚಿವ ದಿನೇಶ್ ಗುಂಡೂರಾವ್

• ಉದಯವಾಹಿನಿ, ಬೆಂಗಳೂರು

ಎಬೋಲಾ ವೈರಸ್‌ನ ಲಕ್ಷಣಗಳು ಕಂಡುಬಂದಿದ್ದ ಶಂಕಿತ ಉಗಾಂಡಾದ 28 ವರ್ಷದ ಮಹಿಳೆಯ ತಪಾಸಣಾ ವರದಿಯಲ್ಲಿ ಸೋಂಕು ಇಲ್ಲ ಎಂಬುದು ದೃಢಪಟ್ಟಿದೆ. ಹೀಗಾಗಿ, ಜನರು ಆತಂಕಕ್ಕೆ ಒಳಗಾಗುವುದು ಬೇಡ ಎಂದು ಸಚಿವ ದಿನೇಶ್ ಗುಂಡೂರಾವ್ ಬುಧವಾರ ತಿಳಿಸಿದ್ದಾರೆ.

ಅಧಿಕಾರಿಗಳ ಪ್ರಕಾರ, ಎಬೋಲಾ ವೈರಸ್ ಪೀಡಿತ ಪ್ರದೇಶದಿಂದ ಬಂದ ಮಹಿಳೆಯೊಬ್ಬರಿಗೆ ಮಂಗಳವಾರ ದೇಹದ ನೋವಿನಂತಹ ಸೌಮ್ಯ ಲಕ್ಷಣಗಳು ಕಾಣಿಸಿಕೊಂಡಿತ್ತು. ನಂತರ ಅವರನ್ನು ಹೋಟೆಲ್‌ನಿಂದ ಸರ್ಕಾರಿ ಸಾಂಕ್ರಾಮಿಕ ರೋಗಗಳ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು. ಅವರ ರಕ್ತದ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗಾಗಿ ಪುಣೆಯಲ್ಲಿರುವ ರಾಷ್ಟ್ರೀಯ ವೈರಾಲಜಿ ಸಂಸ್ಥೆಗೆ ಕಳುಹಿಸಲಾಗಿತ್ತು. ರಾಜ್ಯದಲ್ಲಿ ವರದಿಯಾಗಿದ್ದ ಶಂಕಿತ ಎಬೋಲಾ ಪ್ರಕರಣದ ಪ್ರಯೋಗಾಲಯದ ತಪಾಸಣಾ ವರದಿ ಬಂದಿದ್ದು, ಅದು 'ನೆಗೆಟಿವ್' ಆಗಿರುವುದು ಕಂಡುಬಂದಿದೆ. ಅವರು ಎಬೋಲಾ ವೈರಸ್ ಸೋಂಕಿಗೆ ಒಳಗಾಗಿಲ್ಲ ಎಂದು ಆರೋಗ್ಯ ಇಲಾಖೆಯ ಅಧಿಕಾರಿಗಳು ದೃಢಪಡಿಸಿದ್ದಾರೆ' ಎಂದು ಸಚಿವರು ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಶಂಕೆ ವ್ಯಕ್ತವಾದ ತಕ್ಷಣವೇ ಇಲಾಖೆಯು ಸಾರ್ವಜನಿಕ ಆರೋಗ್ಯ ಮಾರ್ಗಸೂಚಿಗಳ ಅನ್ವಯ ಅತ್ಯಂತ ಕಟ್ಟುನಿಟ್ಟಾದ ಮುನ್ನೆಚ್ಚರಿಕೆ ಕ್ರಮಗಳು ಮತ್ತು ವೈದ್ಯಕೀಯ ನಿಯಮಾವಳಿಗಳನ್ನು ಪಾಲಿಸಿದೆ. ಸಾರ್ವಜನಿಕರ ಆರೋಗ್ಯ ಮತ್ತು ಸುರಕ್ಷತೆಯೇ ಸರ್ಕಾರದ ಮೊದಲ ಆದ್ಯತೆಯಾಗಿದೆ. ನಮ್ಮ ಆರೋಗ್ಯ ಇಲಾಖೆಯು ಪ್ರತಿಯೊಂದು ಪರಿಸ್ಥಿತಿಯನ್ನೂ ಅತ್ಯಂತ ಸೂಕ್ಷ್ಮವಾಗಿ ಗಮನಿಸುತ್ತಿದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಯಾವುದೇ ರೀತಿಯ ಸವಾಲನ್ನು ಎದುರಿಸಲು ಮತ್ತು ಅಗತ್ಯವಿರುವ ಎಲ್ಲಾ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಇಲಾಖೆ ಸಂಪೂರ್ಣವಾಗಿ ಸಜ್ಜಾಗಿದೆ ಎಂದು ರಾವ್ ಹೇಳಿದರು. ವಿಶ್ವ ಆರೋಗ್ಯ ಸಂಸ್ಥೆಯು ಮೇ 17 ರಂದು ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯ (ಮತ್ತು ಉಗಾಂಡಾದಲ್ಲಿನ ಎಬೋಲಾ ಪ್ರಕರಣಗಳ ಏಕಾಏಕಿ ಉಲ್ಬಣದಿಂದಾಗಿ ಸಾರ್ವಜನಿಕ ಆರೋಗ್ಯ ತುರ್ತುಸ್ಥಿತಿ ಎಂದು ಘೋಷಿಸಿತು.


ಉದಯವಾಹಿನಿ ಚಿತ್ರ

> ಯಾರೂ ಅನಗತ್ಯವಾಗಿ ಆತಂಕಕ್ಕೊಳಗಾಗಬಾರದು ಎಂದು ವಿನಂತಿಸುತ್ತೇನೆ. ವದಂತಿಗಳಿಗೆ ಕಿವಿಗೊಡದೆ, ನಿಗದಿಪಡಿಸಿದ ಆರೋಗ್ಯ ಮಾರ್ಗಸೂಚಿಗಳನ್ನು ಪಾಲಿಸಿ. ಸರ್ಕಾರ ಮತ್ತು ಆರೋಗ್ಯ ಇಲಾಖೆ ಅಧಿಕೃತವಾಗಿ ಹೊರಡಿಸುವ ಮಾಹಿತಿ ಹಾಗೂ ಪ್ರಕಟಣೆಗಳನ್ನು ಮಾತ್ರ ಆಧಾರವಾಗಿಟ್ಟುಕೊಳ್ಳಿ. ನಿಮ್ಮ ಆರೋಗ್ಯದ ರಕ್ಷಣೆಗೆ ಸರ್ಕಾರ ಸದಾ ಬದ್ಧ. ಸಚಿವ ದಿನೇಶ್ ಗುಂಡೂರಾವ್

### ಆರೋಗ್ಯ ಇಲಾಖೆ ಸೂಚನೆ

**ಹಲವಾರು ಆಫ್ರಿಕನ್ ದೇಶಗಳಲ್ಲಿ ಎಬೋಲಾ ಏಕಾಏಕಿ ಕಂಡುಬಂದಿರುವ ಹಿನ್ನೆಲೆಯಲ್ಲಿ, ಇತ್ತೀಚೆಗೆ ಪೀಡಿತ ರಾಷ್ಟ್ರಗಳಿಗೆ ಪ್ರಯಾಣಿಸಿದ ವ್ಯಕ್ತಿಗಳು ಹಿಂದಿರುಗಿದ ನಂತರ 21 ದಿನಗಳ ಕಾಲ ಆರೋಗ್ಯ ಮೇಲ್ವಿಚಾರಣೆ ಮತ್ತು ಸ್ವಯಂ ವೀಕ್ಷಣೆಗೆ ಒಳಗಾಗುವಂತೆ ರಾಜ್ಯದ ಆರೋಗ್ಯ ಇಲಾಖೆ ಸೂಚಿಸಿತ್ತು.**

## ಬೆಂಗಳೂರಿನಲ್ಲಿ ಎಬೋಲಾ ರೋಗ ಪತ್ತೆ: ಉಗಾಂಡಾ ಮಹಿಳೆ ಆಸ್ಪತ್ರೆಗೆ ದಾಖಲು; ಮಾದರಿ ಪುಣೆಗೆ ರವಾನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಜಗತ್ತಿನಲ್ಲಿ ಎಬೋಲಾ ರೋಗ ಭೀತಿ ಆವರಿಸಿದೆ. ಇದರ ನಡುವೆ ಇದೇ ವೈರಸ್‌ನ ಲಕ್ಷಣಗಳಿದ್ದ ಉಗಾಂಡಾದ 28 ವರ್ಷದ ಮಹಿಳೆಯನ್ನು ನಿನ್ನೆ (ಮಂಗಳವಾರ) ಬೆಂಗಳೂರಿನ ಸರ್ಕಾರಿ ಸಾಂಕ್ರಾಮಿಕ ರೋಗಗಳ ಆಸ್ಪತ್ರೆಗೆ ಸೇರಿಸಲಾಗಿದೆ. ಈ ಕುರಿತು ಆರೋಗ್ಯ ಇಲಾಖೆಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಎಬೋಲಾ ಪೀಡಿತ ಪ್ರದೇಶದಿಂದ ಬಂದಿದ್ದ ಈ ಮಹಿಳೆಗೆ ಮೈ ಕೈ ನೋವಿನಂತಹ ಸೌಮ್ಯ ಲಕ್ಷಣಗಳು ಕಾಣಿಸಿಕೊಂಡಿದ್ದವು. ಹೀಗಾಗಿ ಅವರನ್ನು ಮುನ್ನೆಚ್ಚರಿಕಾ ಕ್ರಮವಾಗಿ ಹೋಟೆಲ್‌ನಿಂದ ಆಸ್ಪತ್ರೆಗೆ ಕಳುಹಿಸಲಾಗಿದೆ. ಇದೀಗ ಆರೋಗ್ಯ ಪರಿಸ್ಥಿತಿ ಸ್ಥಿರವಾಗಿದೆ ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಈ ಮಹಿಳೆಯ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗಾಗಿ ಪುಣೆಯ ರಾಷ್ಟ್ರೀಯ ವೈರಾಲಜಿ ಸಂಸ್ಥೆ (ಎನ್‌ಐವಿ)ಗೆ ಕಳುಹಿಸಲಾಗಿದೆ. ವರದಿಗೆ ಕಾಯುತ್ತಿದ್ದೇವೆ. ಶಿಷ್ಟಾಚಾರದಂತೆ ಮತ್ತೆ ಪರೀಕ್ಷೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಆರೋಗ್ಯ ಅಧಿಕಾರಿಗಳು ಸೋಂಕಿತ ಮಹಿಳೆಯ ಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ಇತ್ತೀಚೆಗೆ ಆಕೆ ಎಬೋಲಾ ಪೀಡಿತ ಪ್ರದೇಶದಿಂದ ಪ್ರಯಾಣಿಸಿದ್ದು, ನಂತರ ಮೈ ಕೈ ನೋವಿನಂತಹ ಲಕ್ಷಣಗಳು ಕಾಣಿಸಿವೆ. ಹೀಗಾಗಿ, ಮುನ್ನೆಚ್ಚರಿಕೆಯಿಂದ ಸಾಂಕ್ರಾಮಿಕ ರೋಗಗಳ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಆರೋಗ್ಯ ಇಲಾಖೆಯ ಅಧಿಕಾರಿಯೊಬ್ಬರು ಹೇಳಿದರು. ಮೇ 17ರಂದು ವಿಶ್ವ ಆರೋಗ್ಯ ಸಂಸ್ಥೆ ಆಫ್ರಿಕಾದ ಕಾಂಗೋ ಮತ್ತು ಉಗಾಂಡಾ ದೇಶಗಳಲ್ಲಿ ಎಬೋಲಾ ರೋಗ ದಿಢೀರ್ ವ್ಯಾಪಕವಾಗಿ ಹರಡುತ್ತಿರುವುದನ್ನು ಮನಗಂಡು ಅಂತಾರಾಷ್ಟ್ರೀಯ ಕಾಳಜಿಯ ಸಾರ್ವಜನಿಕ ಆರೋಗ್ಯ ತುರ್ತುಸ್ಥಿತಿ ಎಂದು ಘೋಷಣೆ ಮಾಡಿತ್ತು. ಆಫ್ರಿಕಾದ ಪೀಡಿತ ದೇಶಗಳಿಗೆ ಪ್ರಯಾಣಿಸಿ ವಾಪಸಾದ ಜನರು 21 ದಿನಗಳವರೆಗೆ ಆರೋಗ್ಯ ಮೇಲ್ವಿಚಾರಣೆ ಮತ್ತು ಸ್ವಯಂ ವೀಕ್ಷಣೆಗೆ ಒಳಗಾಗಬೇಕು.

## ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಿದರೆ ಬೇರೆ ಸಿಎಂ ಆಡಳಿತ ಸುಲಭವಲ್ಲ

# ಬಿವೈವಿ ಭವಿಷ್ಯ

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡಿದರೆ, ಬೇರೆ ಸಿಎಂ ಆಡಳಿತ ಸುಲಭವಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅಭಿಪ್ರಾಯ ವ್ಯಕ್ತಪಡಿಸಿದರು. ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕಳೆದ ಮೂರು ವರ್ಷಗಳಲ್ಲಿ ಉತ್ತಮ ಆಡಳಿತ ಕೊಡಲು ಆಗಿಲ್ಲ. ಇದನ್ನು ಕಾಂಗ್ರೆಸ್ ಹೈಕಮಾಂಡ್ ಅನುಮೋದಿಸಿದೆ.

ದೆಹಲಿಯಲ್ಲಿ 5 ಗಂಟೆಗಳ ಕಾಲ ಮ್ಯಾರಥಾನ್ ಸಭೆ ನಡೆದಿದೆ. ಸಿಎಂ ರಾಜೀನಾಮೆ ತೆಗೆದುಕೊಳ್ಳುವ ತೀರ್ಮಾನ ಮಾಡಿದ್ದಾರೆ. ಒಟ್ಟಾರೆ ದೇಶದಲ್ಲಿ ಕಾಂಗ್ರೆಸ್ ಕೊನೆ ದಿನಗಳನ್ನು ನೋಡುತ್ತಿದೆ. ರಾಜ್ಯದಲ್ಲೂ ಕಾಂಗ್ರೆಸ್ ಅವನತಿಯತ್ತ ಸ್ಪಷ್ಟವಾಗಿ ಹೋಗುತ್ತಿರುವ ಮುನ್ಸೂಚನೆ ಇದಾಗಿದೆ ಎಂದರು.

ಸಿದ್ದರಾಮಯ್ಯ ರಾಜೀನಾಮೆ ಕೊಟ್ಟ ಬಳಿಕ ಯಾರು ಸಿಎಂ ಆಗುತ್ತಾರೆ ಅನ್ನೋದು ಮುಖ್ಯ ಅಲ್ಲ. ರಾಜ್ಯ ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಎಂಬುದನ್ನು ಆಲೋಚಿಸಬೇಕು. ಸಿಎಂ ಅವರ ಬಗ್ಗೆ ನನಗೆ ವೈಯಕ್ತಿಕ ದ್ವೇಷವೇನೂ ಇಲ್ಲ. ಅವರು ಅತೀ ಹೆಚ್ಚು ಅನುಭವ ಇರುವಂತಹವರು. 10 ಲಕ್ಷ ಕೋಟಿ ರೂ. ಸಾಲವನ್ನು ಮಾಡಿದ್ದಾರೆ. ರಾಜ್ಯದ ಜನತೆ ಯಾವ ರೀತಿ ಸಾಲದ ಸುಳಿಗೆ ಸಿಲುಕಿದೆ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಟೀಕಿಸಿದರು. ಆಂತರಿಕ ಕಚ್ಚಾಟದಿಂದ ಆಡಳಿತ ಸಂಪೂರ್ಣ ಕುಸಿದಿತ್ತು. ಭ್ರಷ್ಟಾಚಾರ ಕೂಡ ಹೆಚ್ಚಾಗಿತ್ತು. ವಾಲ್ಮೀಕಿ ಅಭಿವೃದ್ಧಿ ನಿಗಮ, ಮುಡಾ ಹಗರಣವನ್ನು ನಾವೆಲ್ಲಾ ನೋಡಿದ್ದೇವೆ. ರಾಜ್ಯದ ಇತಿಹಾಸದಲ್ಲಿ ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಂಡದ್ದು ಇದ್ದರೆ ಅದು ಇದೇ ಸಿದ್ದರಾಮಯ್ಯ ಸರ್ಕಾರದಲ್ಲಿ ಎಂದು ಆರೋಪಿಸಿದ ರಾಜ್ಯಾಧ್ಯಕ್ಷರು ಇದು ಜನ ವಿರೋಧಿ ಸರ್ಕಾರವಾಗಿದೆ. ರಾಜ್ಯ ಸರ್ಕಾರ ಉಪ ಚುನಾವಣೆ ಗೆದ್ದಿದ್ದಾರೆ. ಅದು ಮಾನದಂಡವಾಗಲು ಸಾಧ್ಯವಿಲ್ಲ. ಅದು ಮಾನದಂಡವಾಗಿದ್ದರೆ, ಸಿದ್ದರಾಮಯ್ಯ ರಾಜೀನಾಮೆ ಕೊಡುವ ಪರಿಸ್ಥಿತಿ ನಿರ್ಮಾಣ ಆಗುತ್ತಿರಲಿಲ್ಲ ಎಂದರು. ರಾಜ್ಯದಲ್ಲಿ ಅಭಿವೃದ್ಧಿ ಇಲ್ಲದೇ ಭ್ರಷ್ಟಾಚಾರದಲ್ಲಿ ಕಾಂಗ್ರೆಸ್ ಸರ್ಕಾರ ಮುಳುಗಿ ಹೋಗಿತ್ತು. ಕೊನೆಗೂ ಕಾಂಗ್ರೆಸ್ ಹೈಕಮಾಂಡ್ ಒಪ್ಪಿ ಸಿಎಂ ಬದಲಾವಣೆಗೆ ಕೈ ಹಾಕಿದೆ. ನಾನು ಶಾಸಕನಾಗಿ ಒಂದು ಮಾತು ಹೇಳ್ತೇನೆ, ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ಯಾರೇ ಸಿಎಂ ಆದ್ರೂ ಅದು ತಾತ್ಕಾಲಿಕ. ಅವಧಿ ಪೂರ್ವ ಚುನಾವಣೆ ರಾಜ್ಯದಲ್ಲಿ ಬರೋದನ್ನು ಯಾರು ತಡೆಯಲು ಸಾಧ್ಯವಿಲ್ಲ. ಸಿದ್ದರಾಮಯ್ಯ ಬಿಟ್ಟು ಯಾರೇ ಸಿಎಂ ಆದರೂ ಆಡಳಿತದಲ್ಲಿ ಗೊಂದಲ ಆಗುತ್ತೇ ನೋಡಿ ಎಂದು ವಿಜಯೇಂದ್ರ ಭವಿಷ್ಯ ನುಡಿದರು.

ಸಂಘಟನಾ ಶಕ್ತಿಯ ಮೂಲಕ ಬಲಪಡಿಸಿ ಕೆಲಸ ಮಾಡುತ್ತೇವೆ. ಅಧಿಕಾರಕ್ಕೆ ಬರಲು ಒಟ್ಟಾಗಿ ಹೋಗುತ್ತೇವೆ. ಸಿಎಂ ಸಿದ್ದರಾಮಯ್ಯ ಅಷ್ಟು ಸುಲಭವಾಗಿ ರಾಜೀನಾಮೆ ಕೊಡ್ತಾರೆ ಅಂತಾ ನನಗನಿಸಲ್ಲ. ಆದರೆ, ಹೈಕಮಾಂಡ್ ತೀರ್ಮಾನ ಮಾಡಿದ್ದರಿಂದ ರಾಜೀನಾಮೆ ಕೊಡುವ ಅನಿವಾರ್ಯತೆಯಿದೆ. ಯಾರು ಸಿಎಂ ಆಗುತ್ತಾರೆ ಅಂತಾ ಭಗವಂತನಿಗೆ ಗೊತ್ತು ಎಂದು ಹೇಳಿದರು.


ಉದಯವಾಹಿನಿ ಚಿತ್ರ

### ರಾಷ್ಟ್ರೀಯ ಅಧ್ಯಕ್ಷರ ಭೇಟಿ ವಿಚಾರ

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರು ಬಂದು ಹೋಗಿದ್ದಾರೆ. ಸಂಘಟನಾತ್ಮಕ ಸಭೆ ಮಾಡಿದ್ದಾರೆ. ಕಾರ್ಯಕರ್ತರು, ಸಚಿವರು, ಸಂಸದರ ಜೊತೆ ಸಭೆ ಮಾಡಿದ್ದಾರೆ. ಸಂಘಟನೆಗಾಗಿ ಇಷ್ಟು ಆಳವಾಗಿ ಇಳಿಯುತ್ತಾರೆ. ಅಂದುಕೊಂಡಿರಲಿಲ್ಲ. ಮುಂಬರುವ ದಿನಗಳಲ್ಲಿ ಇಡೀ ದೇಶದಲ್ಲಿ ಬಿಜೆಪಿ ಸಂಘಟನೆಯನ್ನು ಬಲಪಡಿಸುತ್ತೇವೆ' ಎಂಬ ಭರವಸೆಯನ್ನು ವಿಜಯೇಂದ್ರ ನೀಡಿದರು.

### ರೈತರು ಸಂಕಷ್ಟದಲ್ಲಿದ್ದಾರೆ

ಮುಂಗಾರು ಪೂರ್ವ ಅನಾಹುತದಿಂದ ರಾಜ್ಯದಲ್ಲಿ ರೈತರು ಸಂಕಷ್ಟಕ್ಕೊಳಗಾಗಿದ್ದಾರೆ. ಶಿವಮೊಗ್ಗ ಜಿಲ್ಲೆಯೊಂದರಲ್ಲೇ 11 ಲಕ್ಷ ಅಡಿಕೆ ಮರಗಳು ಧರೆಗುರುಳಿವೆ. ಸಚಿವರಾಗಲಿ, ರಾಜ್ಯ ಸರ್ಕಾರವಾಗಲಿ ಈ ಬಗ್ಗೆ ಗಮನ ಹರಿಸಿಲ್ಲ.

ರಾಜ್ಯ ಸರ್ಕಾರದ ನಿರ್ಲಕ್ಷ್ಯದಿಂದ ರಾಜ್ಯದಲ್ಲಿ ರಸಗೊಬ್ಬರದ ಕೊರತೆ ಎದುರಾಗಿದೆ. ಈ ಬಗ್ಗೆ ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸುವ ಯತ್ನ ನಡೆದಿದೆ. ಎಲ್ಲಾ ವಿಷಯಗಳ ಕುರಿತು ಪಕ್ಷ ಸೂಕ್ತ ಹೋರಾಟ ನಡೆಸಲಿದೆ ಎಂದು ಕಿಡಿಕಾರಿದರು.

**ಸಿಎಂ ಸಿದ್ದರಾಮಯ್ಯ ಅಷ್ಟು ಸುಲಭವಾಗಿ ರಾಜೀನಾಮೆ ಕೊಡ್ತಾರೆ ಅಂತಾ ನನಗನಿಸಲ್ಲ**



### ವಿಜಯೇಂದ್ರ ಟೀಕಾಸ್ತ್ರ

### ಮೋದಿ ಪ್ರಧಾನಿಯಾಗಿ 12 ವರ್ಷ ಪೂರೈಕೆ:

ನರೇಂದ್ರ ಮೋದಿಯವರು ಪ್ರಧಾನಿಯಾಗಿ 12 ವರ್ಷ ಪೂರೈಸಿದ್ದಾರೆ. ದೇಶದಲ್ಲಿ ಚುನಾಯಿತರಾಗಿ ಅತಿ ಹೆಚ್ಚು ಅವಧಿಗೆ ಪ್ರಧಾನಿ ಕಾರ್ಯನಿರ್ವಹಿಸಿದ ದಾಖಲೆ ಮಾಡಿದ್ದಾರೆ. ದೇಶದಲ್ಲಿ ಯುವ ಜನತೆ ಭರವಸೆ ಕಳೆದುಕೊಂಡಿದ್ದರು, ಅಂತಹ ಸಂದರ್ಭದಲ್ಲಿ ದೇಶದ ಜನರ ವಿಶ್ವಾಸ ಗಳಿಸಿದ್ದಾರೆ. ಭಾರತವನ್ನು ನಾಲ್ಕನೇ ದೊಡ್ಡ ಆರ್ಥಿಕ ಶಕ್ತಿಯನ್ನಾಗಿ ಮಾಡಿದ್ದಾರೆ. ಒಂದೇ ಒಂದು ಭ್ರಷ್ಟಾಚಾರ ಆರೋಪ ಕೇಂದ್ರ ಸರ್ಕಾರ ಹಾಗೂ ಮೋದಿಯವರ ಮೇಲೆ ಇಲ್ಲ. ಜಾಗತಿಕ ಸವಾಲುಗಳ ನಡುವೆ ದೇಶವನ್ನು ಸದೃಢವಾಗಿ ಕಟ್ಟಿದ್ದಾರೆ. ಪ್ರಧಾನ ಮಂತ್ರಿಯಾಗಿ ಸಾರ್ವಕಾಲಿಕ ದಾಖಲೆ ಮುರಿಯುತ್ತಾರೆ. 12 ವರ್ಷ ಪೂರೈಸಿದ ಪ್ರಧಾನಮಂತ್ರಿಯವರಿಗೆ ಅಭಿನಂದನೆ ಸಲ್ಲಿಸುತ್ತೇನೆ. 2047ರ ವಿಕಸಿತ ಭಾರತಕ್ಕಾಗಿ ಪ್ರಧಾನಿ ಮೋದಿ ಕೆಲಸ ಮಾಡುತ್ತಿದ್ದಾರೆ' ಎಂದು ಅವರು ತಿಳಿಸಿದರು.

## ನಕಲಿ ಅಂಕಪಟ್ಟಿ ಜಾಲ: ಪ್ರಮುಖ ಆರೋಪಿಗೆ ಜಾಮೀನು ನಿರಾಕರಿಸಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ನಕಲಿ ಅಂಕಪಟ್ಟಿಗಳನ್ನು ಸೃಷ್ಟಿಸಿದ ಗಂಭೀರ ಸೈಬರ್ ವಂಚನೆ ಪ್ರಕರಣದ ಪ್ರಮುಖ ಆರೋಪಿಯಾಗಿರುವ ನವದೆಹಲಿ ನಿವಾಸಿಗೆ ಜಾಮೀನು ನೀಡಲು ನಿರಾಕರಿಸಿರುವ ಹೈಕೋರ್ಟ್, ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿದೆ. ಪ್ರಕರಣದ ಪ್ರಮುಖ ಆರೋಪಿ ರಾಜೀವ್ ಸಿಂಗ್ ಅರೋರಾ ಎಂಬವರು ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ತ್ಯಾಗರಾಜ ಎನ್.ಇನಾವಳಿ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ. ಪ್ರಕರಣದ ಇತರೆ ಆರೋಪಿಗಳಿಗೆ ಜಾಮೀನು ನೀಡಿದ್ದು, ನನಗೂ ಜಾಮೀನು ಮಂಜೂರು ಮಾಡಬೇಕು ಎಂಬ ಅರ್ಜಿದಾರರ ವಾದವನ್ನು ತಿರಸ್ಕರಿಸಿದ ನ್ಯಾಯಪೀಠ, ನಕಲಿ ಅಂಕಪಟ್ಟಿಗಳನ್ನು ಸೃಷ್ಟಿಸಿದ ಮುಖ್ಯ ಆರೋಪ ಅರ್ಜಿದಾರರ ಮೇಲಿದೆ. ಆದರೆ, ಇತರೆ ಆರೋಪಿಗಳ ಮೇಲೆ ಕೇವಲ ಅವುಗಳನ್ನು ಹಂಚಿಕೆ ಮಾಡಿದ ಆರೋಪವಿದೆ. ಆದ್ದರಿಂದ ಪ್ರಕರಣದ ಇತರೆ ಆರೋಪಿಗಳಿಗೆ ಜಾಮೀನು ಸಿಕ್ಕಿದೆ ಎಂಬ ಕಾರಣದಿಂದ ಅರ್ಜಿದಾರರಿಗೂ ಜಾಮೀನು ನೀಡುವುದಕ್ಕೆ ಸಾಧ್ಯವಿಲ್ಲ ಎಂದು ಹೇಳಿದೆ. ಅಲ್ಲದೆ, ವಿಚಾರಣಾ ನ್ಯಾಯಾಲಯದಲ್ಲಿ ಪ್ರಕರಣ ವಿಳಂಬವಾಗುತ್ತಿರುವುದಕ್ಕೆ ತನಿಖಾ ಸಂಸ್ಥೆ ಕಾರಣವಲ್ಲ, ಬದಲಿಗೆ ಸಹ-ಆರೋಪಿಗಳು ಸಕಾಲಕ್ಕೆ ಕೋರ್ಟ್‌ಗೆ ಹಾಜರಾಗದಿರುವುದೇ ಕಾರಣವಾಗಿದೆ. ಅರ್ಜಿದಾರ ಆರೋಪಿ ರಾಜ್ಯದ ವ್ಯಾಪ್ತಿಯಿಂದ ಹೊರಗಿರುವ ನವದೆಹಲಿಯ ಖಾಯಂ ನಿವಾಸಿಯಾಗಿದ್ದಾನೆ. ಒಂದು ವೇಳೆ ಜಾಮೀನು ಮಂಜೂರಾದರೆ ಮುಂದಿನ ವಿಚಾರಣೆಗೆ ಹಾಜರುಪಡಿಸುವುದು ಕಷ್ಟಸಾಧ್ಯವಾಗುತ್ತದೆ ಎಂದು ಪೀಠ ತಿಳಿಸಿದೆ.ಅಲ್ಲದೆ, ಈ ಹಿಂದೆ ಸಲ್ಲಿಸಲಾಗಿದ್ದ ಜಾಮೀನು ಅರ್ಜಿ ವಜಾಗೊಂಡ ಬಳಿಕ ಜಾಮೀನು ಮಂಜೂರು ಮಾಡುವುದಕ್ಕೆ ಹೊಸ ಪೂರಕ ಸನ್ನಿವೇಶಗಳು ಅಥವಾ ಬದಲಾದ ಪರಿಸ್ಥಿತಿಗಳು ಕಂಡುಬಂದಿಲ್ಲ ಎಂದು ತಿಳಿಸಿದ ನ್ಯಾಯಪೀಠವು ಅರ್ಜಿಯನ್ನು ವಜಾಗೊಳಿಸಿದೆ ಆದೇಶಿಸಿದೆ.

## ಬೆಂಗಳೂರಿನಲ್ಲಿ ಮೇ 31ರಂದು ಪರಮ್ ಕಲ್ಚರ್ ವತಿಯಿಂದ ಕಲಾ ಸಂವಾದ 5 ಕಾರ್ಯಕ್ರಮ

• ಉದಯವಾಹಿನಿಬೆಂಗಳೂರು:

ಕಲೆ, ಸಂಸ್ಕೃತಿ ಮತ್ತು ಸಮಾಜದ ವಿವಿಧ ಆಯಾಮಗಳನ್ನು ಕಲಾ ಪ್ರದರ್ಶನಗಳ ಮೂಲಕ ಅನ್ವೇಷಿಸುವ ನಿಟ್ಟಿನಲ್ಲಿ 'ಪರಮ್ ಕಲ್ಚರ್' ವತಿಯಿಂದ ಮತ್ತೊಂದು ನವೀನ ಕಾರ್ಯಕ್ರಮ ಆಯೋಜಿಸಲಾಗಿದೆ ಸಾರ್ವಜನಿಕ ವೇದಿಕೆಯ ಸರಣಿ ಕಾರ್ಯಕ್ರಮಗಳ ಭಾಗವಾಗಿ 'ಕಲಾ ಸಂವಾದ 05' ಕಾರ್ಯಕ್ರಮವು ಮೇ 31ರಂದು ಭಾನುವಾರ ಸಂಜೆ ಬೆಂಗಳೂರಿನ 'ಮೀನಾಕ್ಷಿ ರಂಗಮಂಚ' ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಎಂಬ ವಿಶಿಷ್ಟ ವಿಷಯದ ಅಡಿಯಲ್ಲಿ ಮೂಡಿಬರಲಿದ್ದು, ಶಾಸ್ತ್ರೀಯ ನೃತ್ಯವನ್ನು ಕೇವಲ ಪ್ರದರ್ಶನವಾಗಿ ಮಾತ್ರವಲ್ಲದೆ ಕಥಾವಾಚನ ಮತ್ತು ಸಾಂಸ್ಕೃತಿಕ ಆವಿಷ್ಕಾರದ ಪ್ರಭಾವಿ ಮಾಧ್ಯಮವಾಗಿ ಪ್ರೇಕ್ಷಕರ ಮುಂದೆ ಅನಾವರಣಗೊಳಿಸಲಿದೆ.

ವಿಶ್ವದಾದ್ಯಂತ ಅಪಾರ ಪ್ರಶಂಸೆ ಗಳಿಸಿರುವ ಭಾಣಿಕಾಅಭಿಮನ್ಯು ಮತ್ತು ಶಕುಂತಲಾದಂತಹ ಬೃಹತ್ ನೃತ್ಯ ರೂಪಕಗಳಸೃಷ್ಟಿಯ ಹಿಂದಿರುವ ಕಥೆ, ಚಿತ್ರಕಥೆ, ಸಂಗೀತ, ನೃತ್ಯ ಸಂಯೋಜನೆ, ವೇಷಭೂಷಣ, ರಂಗವಿನ್ಯಾಸ, ಬೆಳಕು ಹಾಗೂ ಧ್ವನಿ ಸಂಯೋಜನೆಯ ರೋಚಕ ಜಗತ್ತನ್ನು ಕಲಾಪ್ರೇಮಿಗಳಿಗೆ ಹತ್ತಿರದಿಂದ ಪರಿಚಯಿಸುವುದು ಈ ಸಂವಾದದ ಮುಖ್ಯ ಉದ್ದೇಶವಾಗಿದೆ. ಪ್ರಸಿದ್ಧ ಕಲಾ ದಂಪತಿಗಳಾದ ನಿರುಪಮಾ ರಾಜೇಂದ್ರ ಮತ್ತು ಟಿ.ಡಿ. ರಾಜೇಂದ್ರ ಅವರೊಂದಿಗೆ ಖ್ಯಾತ ಸಂಗೀತ ನಿರ್ದೇಶಕ ಪ್ರವೀಣ್ ಡಿ. ರಾವ್, ಈ ಸಂವಾದದಲ್ಲಿ ಭಾಗವಹಿಸಲಿದ್ದಾರೆ.

## ಬೆಂಗಳೂರಿನಲ್ಲಿ ಮಳೆ ಅಬ್ಬರ; ಕೆರೆಗಳಂತಾದ ರಸ್ತೆಗಳು, ಜನಜೀವನ ಅಸ್ತವ್ಯಸ್ತ!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜಧಾನಿ ಬೆಂಗಳೂರಿನಲ್ಲಿ ಮಂಗಳವಾರ ರಾತ್ರಿ ಮಳೆರಾಯ ಅಬ್ಬರಿಸಿದ್ದು, ಪ್ರಮುಖ ರಸ್ತೆಗಳು ಜಲಾವೃತವಾಗಿ ಕೆರೆಗಳಂತೆ ಬದಲಾಗಿವೆ. ಇದರಿಂದ ಭಾರಿ ಸಂಚಾರ ದಟ್ಟಣೆ ಉಂಟಾಗಿ ವಾಹನ ಸವಾರರು ಪರದಾಡಿದರು. ಸಂಜೆ ಜಿಟಿಜಿಟಿಯಾಗಿ ಆರಂಭವಾದ ಮಳೆ ನೋಡನೋಡುತ್ತಿದ್ದಂತೆ ಜೋರು ಗಾಳಿ ಸಹಿತ ಅಬ್ಬರದ ಮಳೆಯಾಯಿತು. ಟೌನ್ ಹಾಲ್, ಮೆಜೆಸ್ಟಿಕ್, ಮಾರ್ಕೆಟ್, ವಿಧಾನಸೌಧ, ಆರ್‌ಆರ್ ನಗರ, ಜ್ಞಾನಭಾರತಿ ಸುತ್ತಮುತ್ತ ಭಾರಿ ಮಳೆಯಾಗಿ ವಾಹನ ಸವಾರರು ಪರದಾಡಿದ್ದಾರೆ. ರಾಜರಾಜೇಶ್ವರಿ ನಗರದ ಮೈಸೂರು ರಸ್ತೆ, ಜ್ಞಾನ ಭಾರತಿ ಮೆಟ್ರೋ ನಿಲ್ದಾಣದ ಬಳಿ ರಸ್ತೆಯಲ್ಲಿ ಭಾರಿ ಪ್ರಮಾಣದ ನೀರು ನಿಂತ ಹಿನ್ನೆಲೆಯಲ್ಲಿ ವಾಹನ ಸವಾರರು ತೊಂದರೆ ಅನುಭವಿಸುವಂತಾಯಿತು.

ಇನ್ನು ಗಾಳಿ ಸಹಿತ ಮಳೆಗೆ ನೇರಳೆ ಮಾರ್ಗದಲ್ಲಿ ನಮ್ಮ ಮೆಟ್ರೋ ಹಳಿ ಮೇಲೆ ಮರದ ಕೊಂಬೆಯೊಂದು ಬಿದ್ದಿದ್ದರಿಂದ ಮೆಟ್ರೋ ಸಂಚಾರದಲ್ಲಿ ವ್ಯತ್ಯಯ ಉಂಟಾಗಿತ್ತು. ಐಟಿಪಿಎಲ್ ಮತ್ತು ಸತ್ಯಸಾಯಿ ಪ್ರಶಾಂತ್ ನಿಲಯಂ ನಡುವೆ ಹಳಿಯ ಮೇಲೆ ಮರದ ಕೊಂಬೆ ಬಿದ್ದ ಹಿನ್ನೆಲೆ ವೈಟ್‌ಫೀಲ್ಡ್ ಮತ್ತು ಗರುಡಾಚಾರ್ ಪಾಳ್ಯ ನಡುವೆ ರೈಲು ಸಂಚಾರ ತಾತ್ಕಾಲಿಕವಾಗಿ ಸ್ಥಗಿತ ಮಾಡಲಾಗಿತ್ತು.

ಕೆಲಕಾಲ ಪ್ರಯಾಣಿಕರು ಪರದಾಡಿದರು. ಇನ್ನು ಪೂರ್ಣಿಮಾ ಥಿಯೆಟರ್ ಬಳಿ ರಸ್ತೆ ಕಾಣದೇ ಡಿವೈಡರ್ ಮೇಲೆ ಚಾಲಕ ಕಾರು ಹತ್ತಿಸಿದ್ದ. ಡಿವೈಡರ್‌ನಿಂದ ಕಾರು ಹೊರತೆಗೆಯಲು ಹರಸಾಹಸ ಪಡಬೇಕಾಯಿತು. ಶಿವಾನಂದ ಸರ್ಕಲ್ ಬಳಿಯ ಬೆಂಗಳೂರು ಕೆಫೆಗೆ ಮಳೆ ನೀರು ನುಗ್ಗಿ ಅವಾಂತರ ಸೃಷ್ಟಿಸಿತ್ತು.

ಮಳೆ ಅಬ್ಬರ ಮುಂದುವರಿಯುವ ಸಾಧ್ಯತೆ ಹಿನ್ನೆಲೆಯಲ್ಲಿ ಹಲವು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ನೀಡಲಾಗಿದೆ. ಇನ್ನು ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ಗುಡುಗು, ಮಿಂಚು, ಬಿರುಗಾಳಿ ಸಹಿತ ಆಲಿಕಲ್ಲು ಮಳೆಯಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆಯಿಂದ ಆರೆಂಜ್ ಅಲರ್ಟ್ ನೀಡಲಾಗಿದೆ. ಕಲಬುರಗಿ, ವಿಜಯಪುರ, ಬಾಗಲಕೋಟೆ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ನೀಡಲಾಗಿದೆ.

## ಸಿಎಂ ಸಿದ್ದರಾಮಯ್ಯ ಪದತ್ಯಾಗ; ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮಹತ್ವದ ಸಭೆ

• ಉದಯವಾಹಿನಿ,ಬೆಂಗಳೂರು


ಉದಯವಾಹಿನಿ ಚಿತ್ರ

ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜಿನಾಮೆ ನೀಡಲಿದ್ದಾರೆ ಎಂಬ ಮಾತುಗಳ ನಡುವೆಯೇ ಇತ್ತ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಮಹತ್ವದ ಸಭೆ ನಡೆಸಿದೆ.

ರಾಜ್ಯ ಸರ್ಕಾರಕ್ಕೆ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮೀಕ್ಷಾ ವರದಿ ಸಲ್ಲಿಕೆ ಕುರಿತು ಚರ್ಚಿಸಲು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಬುಧವಾರ ಸಭೆ ನಡೆಸಿತು ಎಂದು ಮೂಲಗಳು ತಿಳಿಸಿವೆ.

ರಾಜ್ಯದಲ್ಲಿ ನಾಯಕತ್ವ ಬದಲಾವಣೆಯ ಕುರಿತು ರಾಜಕೀಯ ವಲಯದಲ್ಲಿ ಭಾರೀ ಊಹಾಪೋಹಗಳು ಹರಿದಾಡುತ್ತಿರುವ ಹಿನ್ನೆಲೆಯಲ್ಲೇ ಈ ಬೆಳವಣಿಗೆ ನಡೆದಿದೆ.

ಊಹಾಪೋಹಗಳ ಪ್ರಕಾರ, ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದಿನ ಕೆಲವೇ ದಿನಗಳಲ್ಲಿ ರಾಜೀನಾಮೆ ನೀಡಿ, ತಮ್ಮ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ರಾಜ್ಯದ ಆಡಳಿತದ ಹೊಣೆ ಹಸ್ತಾಂತರಿಸಬಹುದು ಎನ್ನಲಾಗಿದೆ.

ಇದೇ ಕಾರಣದಿಂದಾಗಿ ಮುಂದಿನ ಮೂರುರಿಂದ ನಾಲ್ಕು ದಿನಗಳಲ್ಲಿ ನಡೆಯಬೇಕಿದ್ದ ಹಿಂದುಳಿದ ವರ್ಗಗಳಿಗೆ ಸಂಬಂಧಿಸಿದ ಸಭೆಯನ್ನು ಬುಧವಾರವೇ ಕರೆಯಲಾಗಿದೆ ಎಂದು ಸರ್ಕಾರದ ಮೂಲಗಳು ತಿಳಿಸಿವೆ.

ಆಯೋಗ ನಡೆಸಿದ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆಯು ರಾಜ್ಯದ ಹಿಂದುಳಿದ ವರ್ಗಗಳಿಗೆ ಸಂಬಂಧಿಸಿದ ನೀತಿಗಳ ಮೇಲೆ ಮಹತ್ವದ ಪರಿಣಾಮ ಬೀರುವ ಸಾಧ್ಯತೆ ಇದೆ.

ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳು ಮತ್ತು ದಲಿತರನ್ನು ಒಳಗೊಂಡ ಅಹಿಂದ ರಾಜಕೀಯದ ಸುತ್ತಲೇ ಸಿದ್ದರಾಮಯ್ಯ ಅವರ ರಾಜಕೀಯ ನಡೆದುಕೊಂಡಿರುವುದರಿಂದ ಈ ವರದಿ ಅತ್ಯಂತ ಮಹತ್ವದ್ದಾಗಿದೆ. ಮುಖ್ಯಮಂತ್ರಿಗಳು ಆಯೋಗದ ವರದಿಗೆ ಅನುಮೋದನೆ ನೀಡುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಇತರ ಹಲವು ಕೈಗಾರಿಕೆಗಳಿಗಿಂತ ಭಿನ್ನವಾಗಿ ಹೋಟೆಲ್ ಸಂಸ್ಥೆಗಳು ಈಗಾಗಲೇ ಕಾರ್ಮಿಕರಿಗೆ ಆಹಾರ, ವಸತಿ, ಸಮವಸ್ತ್ರ ಮತ್ತು ತೊಳೆಯುವ ಭತ್ಯೆ ಸೇರಿದಂತೆ ಹಲವಾರು ಸೌಲಭ್ಯಗಳನ್ನು ಒದಗಿಸುತ್ತಿವೆ.

ಕನಿಷ್ಠ ವೇತನ ಪರಿಷ್ಕರಣೆಯನ್ನು ಜಾರಿಗೆ ತರುವ ಸಂದರ್ಭದಲ್ಲಿ ನಮ್ಮ ಉದ್ಯಮವನ್ನು ಪ್ರತ್ಯೇಕವಾಗಿ ವರ್ಗೀಕರಿಸಲು ಕರ್ನಾಟಕ ಸರ್ಕಾರಕ್ಕೆ ಮನವಿ ಮಾಡಿದ್ದೆವು.

## ನಿರ್ಮಾಣ ಹಂತದ ಕಾಂಪೌಂಡ್ ಗೋಡೆ ಕುಸಿತ; ಓರ್ವ ಕಾರ್ಮಿಕ ಸಾವು, ಮತ್ತೊಬ್ಬರಿಗೆ ಗಾಯ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ನಿರ್ಮಾಣ ಹಂತದಲ್ಲಿರುವ ಅಪಾರ್ಟ್‌ಮೆಂಟ್ ಕಟ್ಟಡದ ಕಾಂಪೌಂಡ್ ಗೋಡೆ ಕುಸಿದು 17 ವರ್ಷದ ಕಾರ್ಮಿಕ ಸಾವನ್ನಪ್ಪಿದ್ದು, ಮತ್ತೊಬ್ಬ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತನನ್ನು ರಾಯಚೂರು ಜಿಲ್ಲೆಯ ಪಂಚಮುಖಿ ಗ್ರಾಮದ ಭೀಮೇಶ್ ಎಂದು ಗುರುತಿಸಲಾಗಿದೆ. ಗುಂಜಾಳ ಗ್ರಾಮದ 32 ವರ್ಷದ ದೂಲಯ್ಯ, ಗಾಯಗೊಂಡ ಕಾರ್ಮಿಕನನ್ನು ಹತ್ತಿರದ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ. ಚಿಕ್ಕಬಾನಸವಾಡಿಯ ನಿರ್ಮಾಣ ಸ್ಥಳದಲ್ಲಿ ಮಧ್ಯಾಹ್ನ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ಇತ್ತೀಚಿನ ಮಳೆಯ ನಂತರ ಕಾಂಪೌಂಡ್ ಗೋಡೆಯ ಬಳಿ ಸಂಗ್ರಹವಾಗಿದ್ದ ಮಳೆನೀರು ಮತ್ತು ಮಣ್ಣನ್ನು ಆರು ಕಾರ್ಮಿಕರು ತೆರವುಗೊಳಿಸುತ್ತಿದ್ದರು. ಮಧ್ಯಾಹ್ನ 2 ಗಂಟೆ ಸುಮಾರಿಗೆ, ಗೋಡೆ ಇದ್ದಕ್ಕಿದ್ದಂತೆ ಕಾರ್ಮಿಕರ ಮೇಲೆ ಕುಸಿದು ಬಿದ್ದಿದೆ. ಮೂವರು ಕಾರ್ಮಿಕರು ಸುರಕ್ಷಿತವಾಗಿ ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾದರು, ಆದರೆ ಭೀಮೇಶ್ ಮತ್ತು ದೂಲಯ್ಯ ಅವಶೇಷಗಳ ಅಡಿಯಲ್ಲಿ ಸಿಲುಕಿಕೊಂಡು ಗಂಭೀರವಾಗಿ ಗಾಯಗೊಂಡರು.


ಉದಯವಾಹಿನಿ ಚಿತ್ರ

ಭೀಮೇಶ್ ನಂತರ ಆಸ್ಪತ್ರೆಯಲ್ಲಿ ನಿಧನರಾದರು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಸ್ನ್ಯಾಪ್‌ಚಾಟ್‌ನಲ್ಲಿ ಪರಿಚಯ, ಪ್ರೀತಿಸಿ ಮದುವೆ ಎರಡೇ ತಿಂಗಳಲ್ಲಿ ಪತ್ನಿ ಬೇಡ ಎಂದ ಪತಿ

• ಉದಯವಾಹಿನಿ,ಬೆಂಗಳೂರು

ಸ್ನ್ಯಾಪ್‌ಚಾಟ್‌ನಲ್ಲಿ ಪರಿಚಯವಾಗಿ ಒಂದು ವರ್ಷದ ಪ್ರೀತಿಗೆ ಮದುವೆಯಾದ ಎರಡೇ ತಿಂಗಳಲ್ಲಿ ಸಣ್ಣಪುಟ್ಟ ಗಲಾಟೆಯಾಗಿ ಪತಿ ಪತ್ನಿಯನ್ನೇ ಬೇಡ ಎಂದು ತಿರಸ್ಕರಿಸಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ನನಗೆ ಗಂಡ ಬೇಕು ಎಂದು ನೊಂದ ಪತ್ನಿ ಪೊಲೀಸ್ ಠಾಣೆ ಮೆಟ್ಟಿಲೇರಿದ್ದಾರೆ. ನರ್ಸಿಂಗ್ ಕೆಲಸ ಮಾಡಿಕೊಂಡಿದ್ದ ಮಹಿಳೆ ಒಂದೂವರೆ ವರ್ಷದ ಹಿಂದೆ ಸ್ನ್ಯಾಪ್‌ಚಾಟ್‌ನಲ್ಲಿ ಪರಿಚಯವಾಗಿದ್ದ ಚೇತನ್ ಜೊತೆ 2 ತಿಂಗಳ ಜೊತೆ ವಿವಾಹವಾಗಿದ್ದರು. ಮೂಲತಃ ಬೆಂಗಳೂರು ಉತ್ತರ ತಾಲ್ಲೂಕಿನ ರಾವುತಹಳ್ಳಿಯ ನಿವಾಸಿಯಾಗಿರುವ ಚೇತನ್ ಹಾಗೂ ಖಾಸಗಿ ಕಂಪನಿಯಲ್ಲಿ ಕೆಲಸಕ್ಕೆ ತೆರಳುತ್ತಿದ್ದ ಮಹಿಳೆಯ ನಡುವಿನ ಪರಿಚಯ ಪ್ರೀತಿಗೆ ತಿರುಗಿತ್ತು. ಇನ್ನೂ ತಂದೆ-ತಾಯಿ ಇಲ್ಲದ ಮಹಿಳೆಯನ್ನು ಮದುವೆಯಾಗಿದ್ದ ಚೇತನ್, ಮನೆಯಲ್ಲಿ ತಂದೆ ತಾಯಿಗೆ ಗೌರವ ಕೊಡಲ್ಲ ಎಂಬ ಕಾರಣಕ್ಕೆ ಇಬ್ಬರ ನಡುವೆ ಜಗಳವಾಗಿದೆ.

## ದೃಷ್ಟಿಹೀನ ಸ್ನೇಹಿತೆ ಬಳಿ ಇದ್ದ 49.5 ಲಕ್ಷ ರೂ. ನಗದು, ಚಿನ್ನ ಕದ್ದ ಖದೀಮ ದಂಪತಿ ಬಂಧನ!

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಅಮಾನವೀಯ ಘಟನೆಯೊಂದು ನಡೆದಿದ್ದು, ದೃಷ್ಟಿಹೀನ ಸ್ನೇಹಿತೆಯ ಬಳಿ ಇದ್ದ ಹಣ ಹಾಗೂ ಚಿನ್ನಾಭರಣಗಳು ಕದ್ದು, ದುರುಪಯೋಗಪಡಿಸಿಕೊಂಡ ಆರೋಪದ ಮೇಲೆ ಖದೀಮ ದಂಪತಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ಮೇ 6 ರಂದು ರಾಜರಾಜೇಶ್ವರಿ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಜೂನ್ 2024 ರಲ್ಲಿ, ದೂರುದಾರರು ಬ್ಯಾಂಕ್ ಲಾಕರ್‌ನಿಂದ ಚಿನ್ನದ ಆಭರಣಗಳನ್ನು ಬೇರೆ ಲಾಕರ್‌ಗೆ ವರ್ಗಾಯಿಸುವ ಉದ್ದೇಶದಿಂದ ತೆಗೆದಿದ್ದರು. ನಂತರ ತಮ್ಮ ಸ್ನೇಹಿತರ ಮನೆಯ ಕಪಾಟಿನಲ್ಲಿ 49.50 ಲಕ್ಷ ರೂ. ನಗದು ಮತ್ತು ಆಭರಣಗಳನ್ನಿಟ್ಟು, ಕೀಲಿಯನ್ನು ತಮ್ಮ ಬಳಿಯೇ ಇಟ್ಟುಕೊಂಡಿದ್ದರು.

## ಇಂಧನ ದರ ಏರಿಕೆ ಎಫೆಕ್ಟ್: ರಾಜ್ಯದಲ್ಲಿ ಎಲೆಕ್ಟ್ರಿಕ್ ವಾಹನಗಳ ಬಳಕೆ ಹೆಚ್ಚಳ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಹಾಗೂ ಹೆದ್ದಾರಿ ಪ್ರದೇಶಗಳಲ್ಲಿ ಫಾಸ್ಟ್ ಚಾರ್ಜಿಂಗ್ ಕೇಂದ್ರಗಳಿಗೆ ಬೇಡಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಸೌರಶಕ್ತಿ ಆಧಾರಿತ ಹೊಸ ಚಾರ್ಜಿಂಗ್ ಘಟಕಗಳನ್ನು ಸ್ಥಾಪಿಸಲು ಸರ್ಕಾರ ಯೋಜನೆ ರೂಪಿಸುತ್ತಿದೆ. ಕರ್ನಾಟಕದಲ್ಲಿ ಎಲೆಕ್ಟ್ರಿಕ್ ವಾಹನಗಳ ಬಳಕೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ಪರಿಣಾಮ ರಾಜ್ಯದ ವಿದ್ಯುತ್ ಬಳಕೆಯ ಮೇಲೂ ಅದರ ನೇರ ಪರಿಣಾಮ ಕಾಣಿಸತೊಡಗಿದೆ.

ಕಳೆದ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಚಾರ್ಜಿಂಗ್‌ನಿಂದಾಗಿ ವಿದ್ಯುತ್ ಬೇಡಿಕೆಯಲ್ಲಿ ಸುಮಾರು 2 ಶೇಕಡಾ ಏರಿಕೆ ದಾಖಲಾಗಿದ್ದು, ಇದರ ಬೆನ್ನಲ್ಲೇ ಇಂಧನ ಇಲಾಖೆ ಹಾಗೂ ಎಸ್ಕಾಂಗಳು ಕ್ರಮಗಳನ್ನು ಕೈಗೊಳ್ಳುತ್ತಿವೆ.

ವಿಶೇಷವಾಗಿ ಬೆಂಗಳೂರು ಹಾಗೂ ಹೆದ್ದಾರಿ ಪ್ರದೇಶಗಳಲ್ಲಿ ಫಾಸ್ಟ್ ಚಾರ್ಜಿಂಗ್ ಕೇಂದ್ರಗಳಿಗೆ ಬೇಡಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಸೌರಶಕ್ತಿ ಆಧಾರಿತ ಹೊಸ ಇಗಿ ಚಾರ್ಜಿಂಗ್ ಘಟಕಗಳನ್ನು ಸ್ಥಾಪಿಸಲು ಸರ್ಕಾರ ಯೋಜನೆ ರೂಪಿಸುತ್ತಿದೆ.


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಎಲೆಕ್ಟ್ರಿಕ್ ವಾಹನಗಳ ಬಳಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕಳೆದ ಎರಡು ತಿಂಗಳಲ್ಲಿ ವಿದ್ಯುತ್ ಬಳಕೆಯಲ್ಲಿ ಸುಮಾರು 2 ಶೇಕಡಾ ಏರಿಕೆ ದಾಖಲಾಗಿರುವುದಾಗಿ ಎಸ್ಕಾಂಗಳು ತಿಳಿಸಿವೆ. ಈ ಹಿನ್ನೆಲೆಯಲ್ಲಿ ಇಂಧನ ಇಲಾಖೆ ಖಾಸಗಿ ಕಂಪನಿಗಳೊಂದಿಗೆ ಕೈಜೋಡಿಸಿ ಸೌರಶಕ್ತಿ ಆಧಾರಿತ ಫಾಸ್ಟ್ ಚಾರ್ಜಿಂಗ್ ಕೇಂದ್ರಗಳನ್ನು ಸ್ಥಾಪಿಸಲು ಮುಂದಾಗಿದ್ದು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ ಹಾಗೂ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿ ಸಂಸ್ಥೆಗಳ ಜೊತೆ ಈಗಾಗಲೇ ಸಹಭಾಗಿತ್ವ ಮುಂದುವರಿದಿದೆ.

ಎಸ್ಕಾಂ ಹಿರಿಯ ಅಧಿಕಾರಿಯೊಬ್ಬರು ಮಾತನಾಡಿ, ವಸತಿ, ಕೈಗಾರಿಕೆ, ವಾಣಿಜ್ಯ ಹಾಗೂ ವಿಭಾಗಗಳಲ್ಲಿ ಬಳಕೆದಾರರು ಸೇರಿದ್ದು, ಎಲ್ಲಾವಿಭಾಗಗಳಲ್ಲೂ ವಿದ್ಯುತ್ ಬಳಕೆ ಏರಿಕೆಯಾಗುತ್ತಿದೆ ಎಂದು ತಿಳಿಸಿದ್ದಾರೆ.

ಇದರ ನಡುವೆ, ವಿದ್ಯುತ್ ಬಳಕೆಯ ನಿಖರ ಪ್ರಮಾಣ ಅಂದಾಜಿಸಲು ಪ್ರತ್ಯೇಕ ಮೀಟರ್ ವ್ಯವಸ್ಥೆ ಜಾರಿಗೆ ತರಬೇಕೆಂದು ರಾಜ್ಯ ಲೋಡ್ ಡಿಸ್ಪ್ಯಾಚ್ ಸೆಂಟರ್ ಮತ್ತೆ ಒತ್ತಾಯಿಸಿದೆ. ಬಹುತೇಕ ಗ್ರಾಹಕರು ಮನೆ ಬಳಕೆಯ ಮೀಟರ್‌ನಲ್ಲೇ ಚಾರ್ಜಿಂಗ್ ಮಾಡುತ್ತಿರುವುದರಿಂದ ನಿಖರ ಡೇಟಾ ಸಿಗುತ್ತಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ.

ಪ್ರತ್ಯೇಕ ಮೀಟರ್ ಇದ್ದರೆ ಬಳಕೆಯ ವಿದ್ಯುತ್ ಪ್ರಮಾಣ, ಬೇಡಿಕೆಯ ಏರಿಕೆ ಹಾಗೂ ಭವಿಷ್ಯದ ನೀತಿ ರೂಪಣೆಗೆ ಅಗತ್ಯ ಮಾಹಿತಿಯನ್ನು ನಿಖರವಾಗಿ ಪಡೆಯಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ.

**ಎರಡು ತಿಂಗಳಲ್ಲಿ ವಿದ್ಯುತ್ ಬೇಡಿಕೆ ಶೇ.2ರಷ್ಟು ಏರಿಕೆ..!**

> ಈಗಿನ ವಾಹನಗಳಲ್ಲಿ 30ರಿಂದ 90 ಸಾಮರ್ಥ್ಯದ ಬ್ಯಾಟರಿಗಳು ಇರುವುದರಿಂದ ಡಿಸಿ ಫಾಸ್ಟ್ ಚಾರ್ಜಿಂಗ್ ಅವಶ್ಯಕತೆ ಹೆಚ್ಚಾಗಿದೆ. ಗ್ರಾಹಕರು ಕೇವಲ 30 ನಿಮಿಷಗಳಲ್ಲಿ ಸಂಪೂರ್ಣ ಚಾರ್ಜ್ ಆಗುವ ವ್ಯವಸ್ಥೆ ಬಯಸುತ್ತಿರುವುದರಿಂದ ಹೆಚ್ಚಿನ ಸೌರ ಪ್ಯಾನೆಲ್ ಪ್ರದೇಶಗಳ ಅಗತ್ಯವಿದೆ .

> ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಈ ಏರಿಕೆ ಕಂಡುಬಂದಿದ್ದು, ಹೊಸ ವಾಹನಗಳಿಗಿಂತ ಈಗಾಗಲೇ ಬಳಕೆಯಲ್ಲಿರುವ ಚಾರ್ಜಿಂಗ್ ಅವಶ್ಯಕತೆಯೇ ವಿದ್ಯುತ್ ಬೇಡಿಕೆ ಹೆಚ್ಚಲು ಪ್ರಮುಖ ಕಾರಣವಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

### ವಾಹನಗಳ ಬುಕ್ಕಿಂಗ್ ಏರಿಕೆ

**ಹಸಿರು ಸಂಚಾರದ ಬಗ್ಗೆ ಜನರಲ್ಲಿ ಜಾಗೃತಿ ಹೆಚ್ಚುತ್ತಿರುವುದು ಹಾಗೂ ಜಾಗತಿಕ ತೈಲ ಬಿಕ್ಕಟ್ಟಿನ ಪರಿಣಾಮ ವಾಹನಗಳ ಬುಕ್ಕಿಂಗ್‌ಗಳಲ್ಲೂ ಏರಿಕೆ ಕಂಡುಬರುತ್ತಿದೆ. ಇದರಿಂದ ರಾಜ್ಯದ ವಿವಿಧ ಭಾಗಗಳಲ್ಲಿ, ವಿಶೇಷವಾಗಿ ರಾಷ್ಟ್ರೀಯ ಹೆದ್ದಾರಿಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ವೇಗದ ಚಾರ್ಜಿಂಗ್ ಕೇಂದ್ರಗಳ ಬೇಡಿಕೆ ಹೆಚ್ಚಾಗಿದೆ.**

ಉದಯ ವಾಹಿನಿ
ಪ್ರಾದೇಶಿಕ
ಗುರುವಾರ
28 ಮೇ 2026
03

# ವಿವಿಧ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ತಾಲ್ಲೂಕು ಶಾಖೆಯಿಂದ ಪ್ರತಿಭಟನೆ

• ಉದಯವಾಹಿನಿ, ಗೌರಿಬಿದನೂರು

ವಿವಿಧ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿ ನಗರದ ತಾಲ್ಲೂಕು ಕಚೇರಿಯ ಮುಂಭಾಗದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ತಾಲೂಕು ಶಾಖೆಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ರೈತ ಸಂಘದ ತಾಲ್ಲೂಕು ಅಧ್ಯಕ್ಷ ಗುಂಡಾಪುರ ಲೋಕೇಶ್ ಗೌಡ ಮಾತನಾಡಿ, ಕಳೆದ ಮೂರು ತಿಂಗಳಿಂದ ಸುಮಾರು 2,876 ರೈತರ ಅರ್ಜಿಗಳು ಯಾವುದೇ ಇತ್ಯರ್ಥವಿಲ್ಲದೆ ಬಾಕಿ ಉಳಿದಿವೆ. ಈ ಅರ್ಜಿಗಳನ್ನು ಕೂಡಲೇ ವಿಲೇವಾರಿ ಮಾಡಬೇಕು, ಕಂದಾಯ ಸಚಿವರು ರೈತರ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ, ಮುಂದಿನ ದಿನಗಳಲ್ಲಿ ರಾಜ್ಯವ್ಯಾಪಿ ಬೃಹತ್ ಪ್ರತಿಭಟನೆಗಳನ್ನು ಹಮ್ಮಿಕೊಳ್ಳಲಾಗುವುದು, ಈಗಾಗಲೇ ರಾಜ್ಯದ ಹಲವು ಕಡೆ ರೈತರು ಪ್ರತಿಭಟನೆ ನಡೆಸುತ್ತಿದ್ದು, ಸರ್ಕಾರವು ಈ ವಿಚಾರದಲ್ಲಿ ತೋರುತ್ತಿರುವ ನಿರ್ಲಕ್ಷ್ಯ ಸರಿಯಲ್ಲವೆಂದರು.




ಸರ್ಕಾರವು ಡಿಜಿಟಲ್ ಪದ್ಧತಿಯ ಬದಲು ಹಳೆಯ ಮ್ಯಾನುವಲ್ ಪದ್ಧತಿಯ ಮೂಲಕ ರೈತರ ಕೆಲಸಗಳನ್ನು ತುರ್ತಾಗಿ ಪೂರ್ಣಗೊಳಿಸಬೇಕು. ಪರವಾನಿಗೆ ಭೂ–ಮಾಪಕರ ಮುಷ್ಕರದ ಹಿನ್ನೆಲೆಯಲ್ಲಿ ಕಳೆದ ಮೂರು ತಿಂಗಳಿಂದ ತಾಲ್ಲೂಕಿನಲ್ಲಿ ರೈತರ ಜಮೀನುಗಳ ಹದ್ದುಬಸ್ತು, 11–ಇ ನಕ್ಷೆ ಹಾಗೂ ತತ್ಕಾಲ್ ಪೋಡಿ ಅರ್ಜಿಗಳು ವಿಲೇವಾರಿಯಾಗದೆ ಬಾಕಿ ಉಳಿದಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ತಿಳಿಸಿದರು. ತಾಲ್ಲೂಕಿನಲ್ಲಿ 2,876 ಮತ್ತು ಜಿಲ್ಲೆಯಾದ್ಯಂತ ಸುಮಾರು 16,071 ಅರ್ಜಿಗಳು ಭೂಮಾಪನ ಇಲಾಖೆಯಲ್ಲಿ ವಿಲೇವಾರಿಯಾಗದೆ ಬಾಕಿ ಇವೆ. ಪರವಾನಿಗೆ ಭೂ–ಮಾಪಕರ ಮುಷ್ಕರ ದಿಂದಾಗಿ ಸರ್ವೇ ಕೆಲಸಗಳು ಸಂಪೂರ್ಣ ಸ್ಥಗಿತಗೊಂಡಿವೆ.

ಪ್ರಸ್ತುತ ಮುಂಗಾರು ಪೂರ್ವ ಮಳೆ ಸುರಿದಿದ್ದು, ರೈತರು ತಮ್ಮ ಜಮೀನುಗಳಲ್ಲಿ ಉಳುಮೆ ಕಾರ್ಯ ಆರಂಭಿಸಿ, ಬಿತ್ತನೆಗೆ ಸಿದ್ಧತೆ ನಡೆಸುತ್ತಿದ್ದಾರೆ. ಆದರೆ, ಭೂಮಿ ಅಳತೆ ಮತ್ತು ದಾಖಲೆಗಳು ಸರಿಯಿಲ್ಲದ ಕಾರಣ ರೈತರು ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ದೂರಿದರು. ಈ ವಿಷಯವನ್ನು ಈಗಾಗಲೇ ತಾಲ್ಲೂಕಿನ ಶಾಸಕರು ಹಾಗೂ ಉಸ್ತುವಾರಿ ಸಚಿವರ ಗಮನಕ್ಕೆ ತರಲಾಗಿದೆ. ಸರ್ಕಾರ ತಕ್ಷಣ ಮಧ್ಯಪ್ರವೇಶಿಸಿ, ಭೂ–ಮಾಪಕರ ಬೇಡಿಕೆಗಳನ್ನು ಈಡೇರಿಸಿ, ಬಾಕಿ ಉಳಿದಿ ರುವ ಎಲ್ಲಾ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಬೇಕು.

ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಬೃಹತ್ ಪ್ರತಿಭಟನೆ ನಡೆಸುವ ಎಚ್ಚರಿಕೆ ನೀಡಿದರು. ರೈತ ಸಂಘದಿಂದ ಮುಖ್ಯ ಮಂತ್ರಿಗಳಿಗೆ ಹಾಗೂ ಕಂದಾಯ ಸಚಿವರಿಗೆ ತಲುಪಿಸುತೆ ಮನವಿ ಪತ್ರವನ್ನು ತಹಶೀಲ್ದಾರ್ ಅರವಿಂದ್.ಕೆ.ಎಂ ಅವರಿಗೆ ನೀಡಿದರು. ರೈತ ಮುಖಂಡರಾದ ಮುದ್ದರಂಗಪ್ಪ, ರಾಜಣ್ಣ, ಗೋಪಿ, ನರಸರೆಡ್ಡಿ, ನಂದನ್, ಮಲ್ಲಿಕಾರ್ಜುನ್, ಪ್ರಸನ್ನ ಕುಮಾರ್, ಮಂಜಣ್ಣ, ಗೋವಿಂದರಾಜು, ಶ್ರೀನಿವಾಸ, ಬಿ.ಸಿ.ಗಂಗಾಧರ್ ಇದ್ದರು.

# ತುಮಕೂರು–ರಾಯದುರ್ಗ ರೈಲ್ವೆ ಯೋಜನೆ: ಮೂಡಿದ ಆಶಾಭಾವ

• ಉದಯವಾಹಿನಿ, ಕೊಡಿಗೇನಹಳ್ಳಿ






ಹಲವು ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ತುಮಕೂರು–ರಾಯದುರ್ಗ ರೈಲ್ವೆ ಕಾಮಗಾರಿಗಾಗಿ ಮಧುಗಿರಿಯ ಬಿ.ಸಿ. ಪಾಳ್ಯದ ರೈಲ್ವೆಸ್ಟೇಷನ್ ಸ್ಥಳದಲ್ಲಿ ಗಿಡ, ಮರ ತೆರವುಗೊಳಿಸಿ ಸ್ವಚ್ಛಗೊಳಿಸಿರುವುದು ಜನರಲ್ಲಿ ಕಾಮಗಾರಿ ಆರಂಭದ ಬಗ್ಗೆ ಆಶಾಭಾವನೆ ಮೂಡಿಸಿದಂತಾಗಿದೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರದ 206 ಕಿ.ಮೀ. ಉದ್ದದ ಈ ಭಾಗದ ಮಹತ್ವಾಕಾಂಕ್ಷಿ ಯೋಜನೆಯಾದ ತುಮಕೂರು ರಾಯದುರ್ಗ ರೈಲ್ವೆ ಕಾಮಗಾರಿಗೆ 2012ರಲ್ಲಿ ಚಾಲನೆ ನೀಡಿತ್ತು. ಆದರೆ ಸೀಮಾಂದ್ರದಲ್ಲಿ ಕಾಮಗಾರಿ ಪೂರ್ಣಗೊಳ್ಳುವುದರ ಜತೆಗೆ ಕರ್ನಾಟಕ ಭಾಗದ ಪಾವಗಡದವರೆಗೂ ರೈಲ್ವೆ ಹಳಿ ಪೂರ್ಣಗೊಂಡು ಪ್ರಾಯೋಗಿಕವಾಗಿ ರೈಲು ಓಡಿಸಲಾಗಿದೆ. ಆದರೆ ಮಧುಗಿರಿ–ಕೊರಟಗೆರೆ ಭಾಗದಲ್ಲಿ ಕಾಮಗಾರಿ ನನೆಗುದಿಗೆ ಬಿದ್ದು ಕಂಬಿಗಳು ಕೂಡ ತುಕ್ಕು ಹಿಡಿದಿದ್ದರಿಂದ ಈ ಭಾಗದಲ್ಲಿ ರೈಲು ಓಡುವುದು ಕನಸಿನ ಮಾತು ಎಂದು ಜನ ಅನುಮಾನ ವ್ಯಕ್ತಪಡಿಸಿದ್ದರು.

ಈ ಭಾಗದಲ್ಲಿ ಶಾಶ್ವತ ನೀರಾವರಿ ಸೌಲಭ್ಯದ ಕೊರತೆ ಜೊತೆಗೆ ಕೈಗಾರಿಕೆಗಳು ಇಲ್ಲದಿರುವ ಕಾರಣ ಇಲ್ಲಿನ ಜನರು ಉದ್ಯೋಗ ಅರಸಿ ನಗರಗಳತ್ತ ಗುಳೆ ಹೊರಟರೆ, ಇನ್ನು ಕೆಲವರು ಬಸ್‌ಗಳಲ್ಲಿ ಸಂಚರಿಸಿ ಹೈರಾಣಾಗುತ್ತಿದ್ದಾರೆ. ರೈಲು ಕಾಮಗಾರಿ ಪೂರ್ಣಗೊಂಡು ಸಂಚಾರ ಆರಂಭಿಸಿದರೆ ಈ ಭಾಗ ಒಂದಷ್ಟು ಅಭಿವೃದ್ಧಿ ಜೊತೆಗೆ ಸಂಚರಿಸಲು ಅನುಕೂಲವಾಗಲಿದೆ ಎನ್ನುವುದು ಇಲ್ಲಿನ ಜನರ ಆಶಯ.

ತುಮಕೂರು– ಕೊರಟಗೆರೆ ನಡುವೆ ಬೆಳೆದರ ಹತ್ತಿರ ನಿರ್ಮಾಣವಾಗುತ್ತಿರುವ ಸೇತುವೆ ಕಾಮಗಾರಿ ಇನ್ನೂ ಪೂರ್ಣವಾಗಿಲ್ಲ. ಪ್ರತಿದಿನ ಸಾವಿರಾರು ವಿದ್ಯಾರ್ಥಿಗಳು, ಕಾರ್ಮಿಕರು, ವ್ಯಾಪಾರಸ್ಥರು ಮತ್ತು ಸಾರ್ವಜನಿಕರು ಈ ರಸ್ತೆ ಮೂಲಕ ಸಂಚರಿಸುತ್ತಾರೆ. ಕಾಮಗಾರಿ ವಿಳಂಬದಿಂದ ಜನರು ಹಲವು ಸಂಕಷ್ಟ ಅನುಭವಿಸುತ್ತಿದ್ದಾರೆ. ಶೀಘ್ರ ರೈಲ್ವೆ ನಿಲ್ದಾಣ ಹಾಗೂ ಟ್ರ್ಯಾಕ್ ಕಾಮಗಾರಿ ಪೂರ್ಣಗೊಳಿಸಿದರೆ ಹಲವು ವರ್ಷಗಳಿಂದ ಅಭಿವೃದ್ಧಿಗಾಗಿ ಕಾಯುತ್ತಿರುವ ಕೊರಟಗೆರೆ ಮತ್ತು ಮಧುಗಿರಿ ಭಾಗದ ಜನರ ಆಸೆ ಈಡೇರಿದಂತಾಗುತ್ತದೆ.ರೈಲ್ವೆ ಕಾಮಗಾರಿಗೆ ಬೇಕಾದ ಭೂ ಸ್ವಾಧೀನದ ನಂತರ ಇಲಾಖೆಯಿಂದ ಟೆಂಡರ್ ಕರೆಯಲಾಗಿತ್ತು.

ಈಗ ಟೆಂಡರ್ ಪೂರ್ಣಗೊಂಡಿದ್ದು, ಕೊರಟಗೆರೆಯಿಂದ ಮಡಕಶಿರಾವರೆಗೆ ಎಸ್.ಆರ್.ಸಿ. ಕಂಪನಿ ಅವರಿಗೆ ಟೆಂಡರ್ ಆಗಿದೆ. ಅವರು ಈಗ ಕಾಮಗಾರಿ ಆರಂಭಿಸಲು ಎಲ್ಲಾ ಸಿದ್ಧತೆ ಕೈಗೊಂಡಿದ್ದು. ಕೆಲವೇ ದಿನಗಳಲ್ಲಿ ಕಾಮಗಾರಿ ಆರಂಭವಾಗಲಿದೆ ಎಂದು ರೈಲ್ವೆ ಅಧಿಕಾರಿಯೊಬ್ಬರು ತಿಳಿಸಿದರು.



> ಮಧುಗಿರಿ ಭಾಗದಲ್ಲಿ ರೈಲ್ವೆ ಯೋಜನೆ ಪೂರ್ಣಗೊಂಡು ರೈಲು ಓಡಾಡುವುದು ನೋಡುತ್ತೇವೆಯೇ ಎಂಬ ಅನುಮಾನ ಕಾಡುತ್ತಿತ್ತು. ಸಚಿವ ವಿ. ಸೋಮಣ್ಣ ಅವರ ಕಾಳಜಿಯಿಂದ ನನೆಗುದಿಗೆ ಬಿದ್ದಿರುವ ಕಾಮಗಾರಿಗೆ ಜೀವ ಬಂದಿರುವುದು ಭರವಸೆ ಮೂಡಿಸಿದಂತಾಗಿದೆ. ದಯಾನಂದರೆಡ್ಡಿ, ಗುಂಡಗಲ್ಲು

> ಭವಿಷ್ಯದಲ್ಲಿ ಅಭಿವೃದ್ಧಿ ದೃಷ್ಟಿಯಿಂದ ರೈಲು ಸಂಚಾರ ಅಗತ್ಯ. ತುಮಕೂರು– ಬೆಂಗಳೂರು ಜನರಿಗೆ ಆಂಧ್ರಕ್ಕೆ ಸಂಪರ್ಕಿಸುವ ಈ ಮಾರ್ಗದ ಕಾಮಗಾರಿ ಶೀಘ್ರ ಪೂರ್ಣಗೊಂಡರೆ ವಿದ್ಯಾರ್ಥಿಗಳು, ಕಾರ್ಮಿಕರು, ವ್ಯಾಪಾರಸ್ಥರು, ಪ್ರಯಾಣಿಕರಿಗೆ ಹೆಚ್ಚು ಸಹಕಾರಿ. ಸಿ.ಎಚ್.ಉಮೇಶ್, ಮಧುಗಿರಿ

**ರೈಲು ಓಡುವುದು ಕನಸಿನ ಮಾತು ಎಂದು ಜನ ಅನುಮಾನ**

### ಜಾಲತಾಣಗಳಲ್ಲಿ ಹರಿದಾಡಿದ ಪೋಸ್ಟ್

ಸೀಮಾಂಧ್ರದ ಜತೆಗೆ ಪಾವಗಡ ಭಾಗದಲ್ಲಿ ರೈಲ್ವೆ ಕಾಮಗಾರಿ ಪೂರ್ಣಗೊಂಡರೂ, ಮಧುಗಿರಿ ಮತ್ತು ಕೊರಟಗೆರೆ ಭಾಗದಲ್ಲಿ ಯಾಕೆ ಕಾಮಗಾರಿ ಇನ್ನೂ ಆರಂಭವಾಗಿಲ್ಲ ಎಂಬುದನ್ನು ತಿಳಿಸುವಂತೆ ಕೇಂದ್ರ ರೈಲ್ವೆ ಸಚಿವ ಹಾಗೂ ಸಂಸದ ವಿ. ಸೋಮಣ್ಣ ಅವರನ್ನು ಕೆಲವರು ಪ್ರಶ್ನೆ ಮಾಡಿರುವ ಪೋಸ್ಟ್ ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿತ್ತು.

# ಬಿಸಿಲಿನ ಬೇಗೆಗೆ ಕೆರೆಯಲ್ಲಿ ಮಿಂದೆದ್ದ ಸೀಳುನಾಯಿಗಳು

• ಉದಯವಾಹಿನಿ, ಗುಂಡ್ಲುಪೇಟೆ

ಬಿರು ಬಿಸಿಲ ಬೇಗೆಯ ನಡುವೆ ಸೀಳು ನಾಯಿಗಳ ಗುಂಪು ಮೈ ತಣಿಸಿಕೊಳ್ಳಲು ಕಾಡಂಚಿನ ಗ್ರಾಮದ ಕೆರೆಯಲ್ಲಿ ಮಿಂದೆದ್ದ ದೃಶ್ಯ ತಾಲ್ಲೂಕಿನ ಬಂಡೀಪುರ ಹುಲಿ ಸಂರಕ್ಷಿತಾ ಪ್ರದೇಶದ ಕಣಿಯನಪುರ ಕಾಲೋನಿಯ ಮಹದೇಶ್ವರ ದೇವಸ್ಥಾನದ ಬಳಿ ಸೆರೆಯಾಗಿದೆ. ಬಂಡೀಪುರ ಹುಲಿ ಸಂರಕ್ಷಿತಾ ಪ್ರದೇಶಕ್ಕೆ ಹೊಂದಿಕೊಂಡಂತಿರುವ ಗ್ರಾಮದ ಕೆರೆಯಲ್ಲಿ ಆಗಾಗ್ಗೆ ಕಾಣಿಸಿಕೊಳ್ಳುವ ಸೀಳು ನಾಯಿಗಳ ತಂಡ ಗ್ರಾಮಸ್ಥರಿಗೆ ದರ್ಶನ ನೀಡುತ್ತಿವೆ, ಕೆಲ ದಿನಗಳ ಹಿಂದಷ್ಟೇ




ದಾಹ ನೀಗಿಸಿಕೊಳ್ಳುತ್ತಿದ್ದ ಜಿಂಕೆಯನ್ನ ಬೇಟೆಯಾಡಿ ಭಕ್ಷಿಸಿದ್ದ ಸೀಳು ನಾಯಿಗಳು ಪ್ರತಿನಿತ್ಯ ಮಧ್ಯಾಹ್ನದ ವೇಳೆಗೆ ಕೆರೆಯ ಬಳಿ ಜಮಾಯಿಸಿ ಹೊಂಚುಹಾಕಿ ಅಡಗಿ ಕುಳಿತಿರುತ್ತವೆ ಎಂಬುದು ಸ್ಥಳೀಯರ ಮಾತಾಗಿದೆ. ಒಟ್ಟಾರೆಯಾಗಿ ಇತ್ತೀಚಿಗೆ ಸುರಿದ ಮಳೆಯಿಂದ ಬಂಡೀಪುರ ಕಾನನವು ಹಚ್ಚಹಸಿರಿನಿಂದ ಕಂಗೊಳಿಸುತ್ತಿದ್ದ ನೋಡುಗರ ಕಣ್ಮನ ಸೆಳೆಯುತ್ತಿದ್ದರೆ ಸಫಾರಿಗೆ ತೆರಳಿದ ಪ್ರವಾಸಿಗರಿಗೆ ದರ್ಶನ ನೀಡುತ್ತಿರುವ ಹುಲಿ ಚಿರತೆ ಕರಡಿ ಆನೆಗಳು ಮಂತ್ರಮುಗ್ದರನ್ನಾಗಿಸಿವೆ.

**ಜಿಂಕೆಯನ್ನ ಬೇಟೆಯಾಡಿ ಭಕ್ಷಿಸಿದ್ದ ಸೀಳು ನಾಯಿಗಳು**

> ಗ್ರಾಮದ ಕೂಗಳತೆ ದೂರದಲ್ಲಿರುವ ಮಹದೇಶ್ವರ ದೇವಸ್ಥಾನದ ಕೆರೆಗೆ ಜಿಂಕೆಗಳು ಹಾಗೂ ಇತರ ಪ್ರಾಣಿಗಳು ನೀರನ್ನ ಹರಸಿ ಬರುತ್ತವೆ , ಸೀಳು ನಾಯಿಗಳ ಗುಂಪು ಪ್ರತಿನಿತ್ಯ ಕೆರೆಯ ಸನಿಹದಲ್ಲೇ ಸಂಚರಿಸುವ ದೃಶ್ಯಗಳು ಸಾಮಾನ್ಯವಾಗಿ ಕಾಣಸಿಗುತ್ತಿವೆ. ಗಿರೀಶ್ ಕಣಿಯನಪುರ

## ಜೂಜಾಟ: 6 ಮಂದಿ ಬಂಧನ

• ಉದಯವಾಹಿನಿ, ಚಿಂತಾಮಣಿ

ತಾಲ್ಲೂಕಿನ ಕೆಂಚಾರ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಹೊಸಹುಡ್ಯ ಗ್ರಾಮದ ಬಳಿ ಸಾರ್ವಜನಿಕ ಸ್ಥಳದಲ್ಲಿ ಇಸ್ಪೀಟ್ ಆಡುತ್ತಿದ್ದ ಅಡ್ಡೆ ಮೇಲೆ ಪೊಲೀಸರು ದಾಳಿ ನಡೆಸಿ, 6 ಮಂದಿ ಆರೋಪಿಗಳನ್ನು ಬಂಧಿಸಿದ್ದಾರೆ. ಈ ಸಂಬಂಧ ಕೆಂಚಾರ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಆಂಧ್ರಪ್ರದೇಶದ ಅನ್ನಮಯ್ಯ ಜಿಲ್ಲೆಯ ತಂಬಾಳಪಲ್ಲಿ ತಾಲ್ಲೂಕಿನ ನವಾಬಕೋಟೆ ಗ್ರಾಮದ ಡಿ. ಮಂಜುನಾಥ, ಶ್ರೀರಾಮ, ಚೇಳೂರು ತಾಲ್ಲೂಕಿನ ದೇಶಮಾರಹಳ್ಳಿಯ ವೆಂಕಟರವಣಪ್ಪ ಮತ್ತು ಗಸರೆಡ್ಡಿ, ಕುರ್ಲಪಲ್ಲಿ ಗ್ರಾಮದ ಗಂಗುಲಪ್ಪ, ಕೋಲಾರ ಜಿಲ್ಲೆಯ ಕೆಜಿಎಫ್ ತಾಲ್ಲೂಕು ಗಾಂಡಹಳ್ಳಿಯ ಎನ್. ಶ್ರೀನಿವಾಸ, ಚಿಂತಾಮಣಿ ತಾಲ್ಲೂಕಿನ ಇರಗಂಪಲ್ಲಿ ಗ್ರಾಮದ ಅಂಜಪ್ಪ ಬಂಧಿತರು. 13,100 ನಗದು, 52 ಇಸ್ಪೀಟ್ ಎಲೆಗಳು ಹಾಗೂ ಮೊಬೈಲ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

# ಬಕ್ರೀದ್ ಹಿನ್ನೆಲೆ ಪೊಲೀಸರಿಂದ ಪಥಸಂಚಲನ

• ಉದಯವಾಹಿನಿ, ಹುಳಿಯಾರು

ಮುಂಬರುವ ಬಕ್ರೀದ್ ಹಬ್ಬದ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಾಗೂ ಸಾರ್ವಜನಿಕರಲ್ಲಿ ಸುರಕ್ಷತಾ ಭಾವನೆ ಮೂಡಿಸುವ ಉದ್ದೇಶದಿಂದ ಹುಳಿಯಾರಿನಲ್ಲಿ ಪೊಲೀಸರು ಹಾಗೂ ಗೃಹ ರಕ್ಷಕ ಸಿಬ್ಬಂದಿ ಪಥಸಂಚಲನ (ರೂಟ್ ಮಾರ್ಚ್) ನಡೆಸಿದರು.




ಚಿಕ್ಕನಾಯಕನಹಳ್ಳಿ ವೃತ್ತ ನಿರೀಕ್ಷಕರರದ ಜನಾರ್ಧನ್ ಅವರ ನೇತೃತ್ವದಲ್ಲಿ ನಡೆದ ಈ ಪಥಸಂಚಲನವು ಪಟ್ಟಣದ ಪ್ರಮುಖ ರಸ್ತೆಗಳಾದ ಬಿ. ಹೆಚ್. ರಸ್ತೆ, ರಾಮ್ ಗೋಪಾಲ್ ಸರ್ಕಲ್, ಬಸ್ ನಿಲ್ದಾಣ ಸೇರಿದಂತೆ ಪ್ರಮುಖ ಬೀದಿಗಳಲ್ಲಿ ಸಾಗಿತು. ತಿಪಟೂರು ಉಪವಿಭಾಗದ ವಿವಿಧ ಪೊಲೀಸ್ ಠಾಣೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಈ ಪಥಸಂಚಲನದಲ್ಲಿ ಜಂಟಿಯಾಗಿ ಪಾಲ್ಗೊಂಡಿದ್ದರು. ಹುಳಿಯಾರು, ಹಂದನಕೆರೆ, ಹೊನ್ನವಳ್ಳಿ, ನೊಣವಿನಕೆರೆ, ತಿಪಟೂರು ಟೌನ್, ತಿಪಟೂರು ಗ್ರಾಮಾಂತರ, ಚಿಕ್ಕನಾಯಕನಹಳ್ಳಿ ಹಾಗೂ ಕೆ. ಬಿ. ಕ್ರಾಸ್ ಸೇರಿದಂತೆ ಒಟ್ಟು 8 ಆರಕ್ಷಕ ಠಾಣೆಗಳ ಠಾಣಾಧಿಕಾರಿಗಳು, ಸಿಬ್ಬಂದಿಗಳು ಹಾಗೂ ಗೃಹ ರಕ್ಷಕ (ಹೋಂ ಗಾರ್ಡ್ಸ್) ಸಿಬ್ಬಂದಿ ಶಿಸ್ತುಬದ್ಧವಾಗಿ ಹೆಜ್ಜೆ ಹಾಕಿದರು.

ಪಥಸಂಚಲನದ ವೇಳೆ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿದ ವೃತ್ತ ನಿರೀಕ್ಷಕ ಜನಾರ್ಧನ್ ಅವರು, ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕರು ಯಾವುದೇ ವದಂತಿಗಳಿಗೆ ಕಿವಿಗೊಡಬಾರದು. ಸೌಹಾರ್ದತೆಯಿಂದ ಹಬ್ಬವನ್ನು ಆಚರಿಸಬೇಕು. ಕಾನೂನು ಕೈಗೆತ್ತಿಕೊಳ್ಳುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ಹಾಗೂ ಶಾಂತಿಯ ಸಂದೇಶ ನೀಡಿದರು.

ಈ ವೇಳೆ ಪಥಸಂಚಲನ ನಡೆಸುತ್ತಿದ್ದ ಪೊಲೀಸ್ ಸಿಬ್ಬಂದಿಗೆ ಮಾರ್ಗ ಮಧ್ಯೆ ಸ್ಥಳೀಯ ಸಾಮಾಜಿಕ ಕಾರ್ಯಕರ್ತರು ಕುಡಿಯುವ ನೀರು ಹಾಗೂ ಹಣ್ಣುಗಳನ್ನು ವಿತರಿಸುವ ಮೂಲಕ ಮಾನವೀಯತೆ ಮೆರೆದರು.

# ಬಿಡದಿ ಟೌನ್ ಷಿಪ್ – ಎಚ್‌ಡಿಕೆ ಹುಟ್ಟುಹಾಕಿದ ಕೂಸು – ದಂತೂರು ವಿಶ್ವನಾಥ್

## ಉಪನಗರ ಯೋಜನೆಗಳಿಗೆ ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡರೇ ವಿರೋಧ ವ್ಯಕ್ತಪಡಿಸುತ್ತಿರುವದು ಆಶ್ಚರ್ಯ

• ಉದಯವಾಹಿನಿ, ರಾಮನಗರ

ಜಿಲ್ಲೆಯ ಅಭಿವೃದ್ಧಿ ದೃಷ್ಟಿಯಿಂದ ಕಾರ್ಯಗತಗೊಳಿಸಲಾಗುತ್ತಿರುವ ಬಿಡದಿ ಟೌನ್ ಷಿಪ್ ಯೋಜನೆಯು ಕುಮಾರಸ್ವಾಮಿ ಅವರು ಮುಖ್ಯಮಂತ್ರಿಗಳಾಗಿದ್ದಾಗ ಹುಟ್ಟು ಹಾಕಿದ ಕೂಸು ಎಂದು ಕಾಂಗ್ರೆಸ್ ಮುಖಂಡ ದಂತೂರು ವಿಶ್ವನಾಥ್ ಹೇಳಿದರು.

ನಗರದ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಇಪ್ಪತ್ತು ವರ್ಷಗಳ ಹಿಂದೆ ಎಚ್‌ಡಿಕೆ ಸಿಎಂ ಆಗಿದ್ದಾಗ ಐದು ಟೌನ್ ಷಿಪ್ ನಿರ್ಮಾಣಕ್ಕೆ ಅಧಿಸೂಚನೆ ಹೊರಡಿಸಿದ್ದರು. ಆದರೆ ಇದೀಗ ಉಪನಗರ ಯೋಜನೆಗಳಿಗೆ ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡರೇ ವಿರೋಧ ವ್ಯಕ್ತಪಡಿಸುತ್ತಿರುವದು ಆಶ್ಚರ್ಯವಾಗುತ್ತಿದೆ ಎಂದರು. ಇಡಿ ರಾಜ್ಯದಲ್ಲಿ ಜೆಡಿಎಸ್ ಪಕ್ಷವನ್ನು ಜನತೆ ತಿರಸ್ಕರಿಸಿರುವುದನ್ನು ಅರ್ಥಮಾಡಿಕೊಳ್ಳಬೇಕು.




ದೇವೇಗೌಡರ ಕುಟುಂಬದ ಕುಡಿ ಜೈಲಿಗೆ ಏಕೆ ಹೋದರು ಎಂಬುದು ಜನರಿಗೆ ಗೊತ್ತಿದೆ. ಇದನ್ನು ಅರ್ಥ ಮಾಡಿಕೊಂಡು ಇನ್ನಾದರೂ ರೈತರನ್ನು ಎತ್ತಿಕಟ್ಟುವ ಕೆಲಸದಿಂದ ಹಿಂದೆ ಸರಿಯಬೇಕು. ಇಪ್ಪತ್ತು ವರ್ಷಗಳ ಹಿಂದೆ ಬಿಡದಿ ಉಪನಗರ ಯೋಜನೆಗೆ ಕುಮಾರಸ್ವಾಮಿ ಅನುಮೋದಿಸಿ ರೆಡ್ ಜ್ಹೋನ್ ಎಂದು ಘೋಷಿಸಿದ್ದರಿಂದ ಅಲ್ಲಿನ ರೈತರು ಕೋಳಿ, ಕುರಿ ಸಾಕಾಣಿಕೆ ಷೆಡ್ ಹಾಕಿಕೊಳ್ಳಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಕಿಡಿಕಾರಿದರು.

ತಮ್ಮ ರಾಜಕೀಯ ಶಕ್ತಿ ಪ್ರದರ್ಶನಕ್ಕೆ ಒಂದು ಕಡೆಯಿಂದ ಮತ್ತೊಂದು ಕಡೆಗೆ ಅಲೆಯುತ್ತಿರುವ ಕುಮಾರಸ್ವಾಮಿ ಅವರಿಂದ ಕಾಂಗ್ರೆಸ್ ಕಾರ್ಯಕರ್ತರು ಕಲಿಯುವುದು ಏನೂ ಇಲ್ಲ. ಬಿಜೆಪಿಯಿಂದ ಅಧಿಕಾರ ಪಡೆದು ಕೊಟ್ಟ ಮಾತು ಉಳಿಸಿಕೊಳ್ಳಲಿಲ್ಲ. ಕಾಂಗ್ರೆಸ್ ಬೆಂಬಲ ಪಡೆದು ಸಿಎಂ ಆಗಿ ತಮ್ಮ ಬೆನ್ನಿಗೆ ನಿಂತವರನ್ನೆ ನಿಂದಿಸುತ್ತಿದ್ದಾರೆ ಎಂದ ಅವರು, 2028ಕ್ಕೆ ಡಿಕೆಶಿ ಮಾಜಿ ಆಗುತ್ತಾರೆ ಎಂಬ ಹೇಳಿಕೆ ವಿರುದ್ಧ ಹರಿಹಾಯ್ದ ಅವರು ಯಾರನ್ನು ಮಾಜಿ ಮಾಡಬೇಕೆಂಬು ಜನರು ತೀರ್ಮಾನ ಮಾಡುತ್ತಾರೆ ಎಂದು ವಾಗ್ದಾಳಿ ನಡೆಸಿದರು. ಬಮೂಲ್ ನಿರ್ದೇಶಕ ಲಿಂಗೇಶ್ ಕುಮಾರ್,

ಗ್ಯಾರಂಟಿ ಸಮಿತಿ ತಾಲ್ಲೂಕು ಅಧ್ಯಕ್ಷ ವಿ.ಎಚ್.ರಾಜು, ಪ್ರಾಧಿಕಾರದ ಅಧ್ಯಕ್ಷ ಚೇತನ್ ಕುಮಾರ್, ಪ್ರಾಧಿಕಾರದ ಮಾಜಿ ಅಧ್ಯಕ್ಷ ಸಿಎನ್ ಆರ್ ವೆಂಕಟೇಶ್, ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಜಯಣ್ಣ ಮತ್ತಿತರರು ಉಪಸ್ಥಿತರಿದ್ದರು.

### ಅಧಿಕಾರಿಗಳ ವಿರುದ್ಧ ಕ್ರಮ

ಗ್ರಾಮ ಸಭೆಗಳಲ್ಲಿ ನಡೆದ ಫಲಾನುಭವಿಗಳ ಆಯ್ಕೆ ಪಂಚಾಯತ್ ರಾಜ್ ಇಲಾಖೆಯ ಸುತ್ತೋಲೆಗೆ ವಿರುದ್ಧವಾಗಿದೆ. ನೈಜ ನಿವೇಶನ ರಹಿತರನ್ನು ಬಿಟ್ಟು ಉಳ್ಳವರಿಗೆ ನಿವೇಶನ ನೀಡಲಾಗಿದೆ. ಕೂಡಲೇ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಲಿ ಪಟ್ಟಿ ರದ್ದುಪಡಿಸಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ, ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ತಾಲ್ಲೂಕಿನಲ್ಲಿ ಸರ್ಕಾರಿ ಜಾಗ ಒತ್ತುವರಿ, ಸ್ಮಶಾನ ಸಮಸ್ಯೆ, ಗ್ರಾಮಗಳಲ್ಲಿ ರಸ್ತೆ ಸೇರಿದಂತೆ ಇತರ ಸಮಸ್ಯೆಗಳನ್ನು ಬಗೆಹರಿಸಲು ಅಧಿಕಾರಿಗಳು ಮುಂದಾಗುತ್ತಿಲ್ಲ ಎಂದು ದೂರಿದರು.

**ಕಾರ್ಯನಿರ್ವಾಹಕ ಅಧಿಕಾರಿ ಹಾಲಿ ಪಟ್ಟಿ ರದ್ದುಪಡಿಸಿ**

> ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಪ್ರತಿಭಟನೆ ಕುರಿತು ವಾರದ ಹಿಂದೆಯೇ ತಿಳಿಸಲಾಗಿದೆ. ಆದರೆ, ಪ್ರತಿಭಟನಾ ಸ್ಥಳಕ್ಕೆ ಅಧಿಕಾರಿಗಳು ಬಂದಿಲ್ಲ. ಇದು ಅಧಿಕಾರಿಗಳಿಗೆ ಬಡವರ ಮೇಲಿನ ಅಸಹನೆ ತೋರಿಸುತ್ತದೆ. ಅನೂಡಿ ನಾಗರಾಜ್

# ತಾಲ್ಲೂಕು ಆಡಳಿತದ ವಿರುದ್ಧ ಪ್ರತಿಭಟನೆ




• ಉದಯವಾಹಿನಿ, ಗೌರಿಬಿದನೂರು

ಬಡವರಿಗೆ ಹಂಚಿಕೆ ಮಾಡಬೇಕಾದ ನಿವೇಶನಗಳನ್ನು ತಾಲ್ಲೂಕು ಆಡಳಿತವು ಅಕ್ರಮ ಮತ್ತು ಅನ್ಯಾಯವಾಗಿ ಉಳ್ಳವರಿಗೆ ಹಂಚಿಕೆ ಮಾಡಿದೆ ಎಂದು ಆರೋಪಿಸಿ ಸಿಐಟಿಯು ವತಿಯಿಂದ ತಾಲ್ಲೂಕು ಪಂಚಾಯಿತಿ ಕಚೇರಿ ಎದುರು ಬೃಹತ್ ಪ್ರತಿಭಟನೆ ನಡೆಯಿತು. ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಗಂಗಪ್ಪ ಮಾತನಾಡಿ, ತಾಲ್ಲೂಕಿನಲ್ಲಿ ಆಡಳಿತ ವ್ಯವಸ್ಥೆಯು ಸಂಪೂರ್ಣವಾಗಿ ಕುಸಿದಿದೆ. ಶಾಸಕರ ಮಾತು ಅಧಿಕಾರಿಗಳಿಗೆ ವೇದವಾಕ್ಯವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. 'ರಾಜಕಾರಣಿಗಳು ಏನು ಬೇಕಾದರೂ ಹೇಳುತ್ತಾರೆ. ಆದರೆ ಅಧಿಕಾರಿಗಳು ಸ್ವಲ್ಪ ಯೋಚನೆ ಮಾಡಿ ಕಾನೂನು ಚೌಕಟ್ಟಿನಲ್ಲಿ ಕೆಲಸ ಮಾಡಬೇಕು. ನಿವೇಶನಗಳನ್ನು ನಿವೇಶನ ರಹಿತರಿಗೆ ಹಂಚಿಕೆ ಮಾಡದೆ, ಬೇಕಾಬಿಟ್ಟಿಯಾಗಿ ಉಳ್ಳವರಿಗೆ ಹಂಚಿಕೆ ಮಾಡಲಾಗಿದೆ. ನ್ಯಾಯ ಕೇಳಲು ಹೋದರೆ ಪೊಲೀಸರಿಂದ ಬೆದರಿಕೆ ಹಾಕುವ ಕೆಲಸ ನಡೆಯುತ್ತಿದೆ. ಈ ಬೆದರಿಕೆ ಮತ್ತು ದಬ್ಬಾಳಿಕೆಗಳಿಗೆ ಬಗ್ಗುವುದಿಲ್ಲ' ಎಂದು ಕಿಡಿಕಾರಿದರು.

ಬಡವರಿಗೆ ರಕ್ಷಣೆ ನೀಡಿ ಕಾನೂನು ರಕ್ಷಿಸಬೇಕಾದ ಪೊಲೀಸರು ಜನ ಪ್ರತಿನಿಧಿಗಳ ಮಾತು ಕೇಳಿಕೊಂಡು ಅಮಾಯಕರ ವಿರುದ್ಧ ನಡೆದುಕೊಳ್ಳುತ್ತಿರುವುದು ಸರಿಯಲ್ಲ.

ಚಿಕ್ಕಕುರುಗೋಡು ಗ್ರಾಮದ ಗ್ರಾಮಸಭೆಯಲ್ಲಿ ನ್ಯಾಯ ಕೇಳಿದ 11 ಜನ ಬಡವರ ಮೇಲೆ ಪ್ರಕರಣಗಳನ್ನು ದಾಖಲಿಸಲಾಗಿದ್ದು, ಅವುಗಳನ್ನು ಹಿಂಪಡೆಯಬೇಕು. ಜನಸಾಮಾನ್ಯರ ಮೇಲಿನ ಪೊಲೀಸರ ದೌರ್ಜನ್ಯ ಮುಂದುವರಿದರೆ, ತಾಲ್ಲೂಕಿನ ಜನರು ಪ್ರತಿಭಟನೆ ಹಾದಿ ಹಿಡಿಯಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಗ್ರಾಮ ಸಭೆಗಳಲ್ಲಿ ನಡೆದ ಫಲಾನುಭವಿಗಳ ಆಯ್ಕೆ ಪಂಚಾಯತ್ ರಾಜ್ ಇಲಾಖೆಯ ಸುತ್ತೋಲೆಗೆ ವಿರುದ್ಧವಾಗಿದೆ. ನೈಜ ನಿವೇಶನ ರಹಿತರನ್ನು ಬಿಟ್ಟು ಉಳ್ಳವರಿಗೆ ನಿವೇಶನ ನೀಡಲಾಗಿದೆ. ಕೂಡಲೇ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಲಿ ಪಟ್ಟಿ ರದ್ದುಪಡಿಸಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ, ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು. ಬಡವರಿಗೆ ರಕ್ಷಣೆ ನೀಡಿ ಕಾನೂನು ರಕ್ಷಿಸಬೇಕಾದ ಪೊಲೀಸರು ಜನ ಪ್ರತಿನಿಧಿಗಳ ತಾಲ್ಲೂಕಿನಲ್ಲಿ ಸರ್ಕಾರಿ ಜಾಗ ಒತ್ತುವರಿ, ಸ್ಮಶಾನ ಸಮಸ್ಯೆ, ಗ್ರಾಮಗಳಲ್ಲಿ ರಸ್ತೆ ಸೇರಿದಂತೆ ಇತರ ಸಮಸ್ಯೆಗಳನ್ನು ಬಗೆಹರಿಸಲು ಅಧಿಕಾರಿಗಳು ಮುಂದಾಗುತ್ತಿಲ್ಲ ಎಂದು ದೂರಿದರು.

# ಮಿನಿ ನ್ಯೂಸ್

## ಸಿಡಿಲು ಬಡಿದು ಬೆಂಗಳೂರಿನ ಟೆಕ್ಕಿ ಸಾವು

• ಉದಯವಾಹಿನಿ, ಮೈಸೂರು

ಮೈಸೂರು ಜಿಲ್ಲೆಯ ಯೆಲಿವಾಳ ಬಳಿ ಸಿಡಿಲು ಬಡಿದು ಬೆಂಗಳೂರಿನ 43 ವರ್ಷದ ಟೆಕ್ಕಿಯೊಬ್ಬರು ಮೃತಪಟ್ಟಿದ್ದಾರೆ. ಮೃತ ಟೆಕ್ಕಿಯನ್ನು ಹೊಸೊಕ್ಲು ರೋಷನ್ ಬಾಲಕೃಷ್ಣ ಎಂದು ಗುರುತಿಸಲಾಗಿದ್ದು, ಅವರು ಮೂಲತ ಕೊಡಗು ಜಿಲ್ಲೆಯವರು. ಆದರೆ ಬೆಂಗಳೂರಿನ ಜಾಲಹಳ್ಳಿಯಲ್ಲಿರುವ ಅಪಾರ್ಟ್‌ಮೆಂಟ್‌ನಲ್ಲಿ ವಾಸಿಸುತ್ತಿದ್ದರು. ರೋಷನ್ ಐಟಿ ಕಂಪನಿಯ ಉದ್ಯೋಗಿಯಾಗಿದ್ದು, ಮೈಸೂರಿನಲ್ಲಿರುವ ತಮ್ಮ ಕುಟುಂಬದ ಕಾಫಿ ತೋಟವನ್ನೂ ನಿರ್ವಹಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಸೋಮವಾರ ಸಂಜೆ 5 ಗಂಟೆಗೆ ರೋಷನ್ ಮತ್ತು ಅವರ ಕುಟುಂಬ ಯೆಲಿವಾಳ ಬಳಿ ತಮ್ಮ ತೋಟಕ್ಕೆ ಭೇಟಿ ನೀಡಿದಾಗ ಈ ಘಟನೆ ಸಂಭವಿಸಿದೆ. ರೋಷನ್ ಹಣ್ಣುಗಳನ್ನು ಕೀಳಲು ಮಾವಿನ ಮರದ ಬಳಿ ಹೋದಾಗ ಸಿಡಿಲು ಬಡಿದು ಸ್ಥಳದಲ್ಲೇ ಕುಸಿದು ಬಿದ್ದರು ಎಂದು ವರದಿಯಾಗಿದೆ. ಕುಟುಂಬ ಸದಸ್ಯರು ತಕ್ಷಣ ಅವರನ್ನು ಹತ್ತಿರದ ಎನ್‌ಜಿ ಆಸ್ಪತ್ರೆಗೆ ಮತ್ತು ನಂತರ ಜಯದೇವ ಆಸ್ಪತ್ರೆಗೆ ಕರೆದೊಯ್ದರು. ಆದರೆ ಅಲ್ಲಿ ವೈದ್ಯರು ಅವರು ಮೃತಪಟ್ಟಿದ್ದಾರೆ ಎಂದು ಘೋಷಿಸಿದರು.

## ಊಲವಾಡಿ ಕಲ್ಯಾಣಿಗೆ ಜೀವಕಳೆ




• ಉದಯವಾಹಿನಿ, ಚಿಂತಾಮಣಿ

ತಾಲ್ಲೂಕಿನ ಊಲವಾಡಿ ಗ್ರಾಮದಲ್ಲಿನ ಪುರಾತನ ಕಲ್ಯಾಣಿಯನ್ನು ತಾಲ್ಲೂಕು ಆಡಳಿತದ ವತಿಯಿಂದ ಸ್ವಚ್ಛಗೊಳಿಸಲಾಯಿತು. ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಎಸ್. ಆನಂದ್ ಮಾತನಾಡಿ ಪುರಾತನ ಕಾಲದ ಕಲ್ಯಾಣಿಗಳನ್ನು ಸ್ವಚ್ಛ ಮಾಡಲಾಗುತ್ತಿದೆ. ಕಲ್ಯಾಣಿಗಳಲ್ಲಿ ನೀರು ತುಂಬಿದರೆ, ಜನ, ಜಾನುವಾರುಗಳು, ಪ್ರಾಣಿ, ಪಕ್ಷಿಗಳಿಗೆ ಅನುಕೂಲವಾಗುತ್ತದೆ ಎಂದು ಹೇಳಿದರು.

ಹಿಂದಿನ ಕಾಲದಲ್ಲಿ ಹಿರಿಯರು ನಿರ್ಮಿಸಿದ ಕಲ್ಯಾಣಿಗಳು ಇಂದಿಗೂ ಸುಸಜ್ಜಿತ ಮತ್ತು ಸುಭದ್ರವಾಗಿವೆ. ಸಾರ್ವಜನಿಕರು ಕಲ್ಯಾಣಿಗಳ ನೀರನ್ನು ಉಪಯೋಗಿಸುತ್ತಿದ್ದರು. ಜನ–ಜಾನುವಾರಗಳು ಕಲ್ಯಾಣಿಗಳಿಂದ ನೀರು ಕುಡಿದು ಆರೋಗ್ಯವಂತರಾಗಿದ್ದರು. ನೀರು ಭೂಮಿಯೊಳಗೆ ಇಂಗುವುದರಿಂದ ಅಂತರ್ಜಲ ವೃದ್ಧಿಯಾಗುತ್ತಿತ್ತು ಎಂದರು.

ಕೃಷಿ ಇಲಾಖೆ ಉಪ ನಿರ್ದೇಶಕಿ ಭವ್ಯರಾಣಿ, ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ಕವಿತಾ ಮತ್ತು ಕೆ.ಆರ್–ಮಂಜುನಾಥ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸುರೇಶ್, ಕಾರ್ಯದರ್ಶಿ ಶಂಕರಪ್ಪ ಸಿಬ್ಬಂದಿ ಲೀಲಾವತಿ, ರಾಧಮ್ಮ ಹಾಗೂ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ನರೇಗಾ ಯೋಜನೆಯ ಎಲ್ಲಾ ಸಿಬ್ಬಂದಿ, ಕರವಸೂಲಿಗಾರರು, ಗ್ರಾಮ ಪಂಚಾಯಿತಿ ಸಿಬ್ಬಂದಿ ಭಾಗವಹಿಸಿದ್ದರು.

## ಮಂಚೇನಹಳಿ; ದಲಿತರ ಮನೆ ತೆರವಿಗೆ ಆಕ್ರೋಶ




• ಉದಯವಾಹಿನಿ, ಮಂಚೇನಹಳ್ಳಿ

ತಾಲ್ಲೂಕಿನ ಗಿಡಗಾನಹಳ್ಳಿ ಸರ್ವೆ ಸಂಖ್ಯೆ 30ರಲ್ಲಿ ನಿರ್ಮಿಸಿಕೊಳ್ಳಲಾಗಿದ್ದ ವಾಸದ ಮನೆಗಳನ್ನು ಬಲವಂತವಾಗಿ ತೆರವುಗೊಳಿಸಲಾಗಿದೆ ಎಂದು ಆರೋಪಿಸಿ ಇಲ್ಲಿನ ತಹಶೀಲ್ದಾರ್ ಕಚೇರಿ ಆವರಣದಲ್ಲಿ ದಲಿತ ಸಂಘರ್ಷ ಸಮಿತಿ ವತಿಯಿಂದ ಪ್ರತಿಭಟನೆ ನಡೆಯಿತು. ದಲಿತ ಮುಖಂಡ ಶ್ರೀರಂಗಚಾರಿ ಮಾತನಾಡಿ, ತಾಲ್ಲೂಕು ಆಡಳಿತವು ಏಕಪಕ್ಷೀಯವಾಗಿ ಈ ನಿರ್ಧಾರ ಕೈಗೊಂಡಿದೆ. ದಶಕಗಳಿಂದ ವಾಸಿಸುತ್ತಿರುವ ದಲಿತರ ಮನೆಗಳನ್ನು ತೆರವುಗೊಳಿಸುವ ಮೂಲಕ ಆಡಳಿತವು ಅವರ ಬದುಕನ್ನು ಬೀದಿಗೆ ತಳ್ಳುವ ಕೆಲಸ ಮಾಡಿದೆ ಎಂದು ದೂರಿದರು.

## ನೀಟ್ ಮರು ಪರೀಕ್ಷೆ ನಡೆಸುತ್ತಿರುವ ಕೇಂದ್ರದ ವಿರುದ್ಧ ಯುವ ಕಾಂಗ್ರೆಸ್ ಪ್ರತಿಭಟನೆ

• ಉದಯವಾಹಿನಿ, ರಾಮನಗರ




ದೇಶದಾದ್ಯಂತ ನೀಟ್ ಮರು ಪರೀಕ್ಷೆ ನಡೆಸುತ್ತಿರುವುದನ್ನು ಖಂಡಿಸಿ ಕೇಂದ್ರ ಸರ್ಕಾರದ ವಿರುದ್ಧ ವಿದ್ಯಾರ್ಥಿ ಕಾಂಗ್ರೆಸ್ ಘಟಕದ ನೂರಾರು ಕಾರ್ಯಕರ್ತರು ನಗರದ ಬಿಎಂ ರಸ್ತೆಯಲ್ಲಿ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.ನೂರಾರು ವಿದ್ಯಾರ್ಥಿಗಳು ಮತ್ತು ಕಾಂಗ್ರೆಸ್ ಕಾರ್ಯಕರ್ತರು ಐಜೂರು ವೃತ್ತದಲ್ಲಿ ರಸ್ತೆ ತಡೆ ನಡೆಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಸರ್ಕಾರದ ಸಚಿವರುಗಳ ಬೇಜವಾಬ್ದಾರಿಯಿಂದ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದ್ದು, ಇದಕ್ಕೆ ಕೇಂದ್ರ ಸರ್ಕಾರವೇ ಜವಾಬ್ದಾರಿಯಾಗಿದೆ. ತಮ್ಮ ಹೊಣೆಗಾರಿಕೆ ಹೊತ್ತು ಪ್ರಧಾನಿ ನರೇಂದ್ರ ಮೋದಿಯವರು ಸಂಬಂಧಿಸಿದ ಸಚಿವರ ರಾಜೀನಾಮೆ ಪಡೆಯಬೇಕು ಎಂದು ಅಗ್ರಹಪಡಿಸಿದರು.

ಲಕ್ಷಾಂತರ ವಿದ್ಯಾರ್ಥಿಗಳ ಬದುಕಿನಲ್ಲಿ ಕೇಂದ್ರ ಸರ್ಕಾರ ಚಲ್ಲಾಟ ಆಡುತ್ತಿದೆ. ಹಗಲಿರುಳು ಕಷ್ಟಪಟ್ಟು ಪರೀಕ್ಷೆ ಬರೆದಿದ್ದ ವಿದ್ಯಾರ್ಥಿಗಳ ಆತ್ಮಸ್ಥೈರ್ಯ ಮರು ಪರೀಕ್ಷೆಯ ಸಂದರ್ಭದಲ್ಲಿ ಕುಗ್ಗಿ ಹೋಗುತ್ತಿದೆ. ಇದಕ್ಕೆ ಕೇಂದ್ರ ಸರ್ಕಾರದ ಶಿಕ್ಷಣ ಸಚಿವರು ಹೊಣೆ. ಅಲ್ಲದೆ ಪ್ರಶ್ನೆ ಪತ್ರಿಕೆ ಸೋರಿಕೆಯ ತಪ್ಪಿತಸ್ಥರನ್ನು ಯಾವುದೇ ಕಾರಣಕ್ಕೂ ತಪ್ಪಿಸಿಕೊಳ್ಳಲು ಬಿಡದೆ ಅವರ ಮೇಲೆ ಕಠಿಣ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ಆಗ್ರಹಿಸಿದರು.ಜಿಲ್ಲಾ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ಚಂದ್ರಸಾಗರ್, ಯುವ ಕಾಂಗ್ರೆಸ್ ಮುಖಂಡರಾದ ಅನಿಲ್ ಜೋಗಿಂದರ್, ಸುನಿಲ್, ಮುಷಿರ್, ವೆಂಕಟೇಶ್, ಪಾರ್ಥ ಮತ್ತಿತರರು ಇದ್ದರು.

ಅಂತರಾಳದಿಂದ..
EDITORIAL

# ವಿರಳ ಖನಿಜ ಸಂಬಂಧಿತ ಒಪ್ಪಂದ ಐತಿಹಾಸಿಕ ನಡೆ



ಹೊಸದಿಲ್ಲಿಯಲ್ಲಿ ಮಂಗಳವಾರ ನಡೆದ ಕ್ವಾಡ್ ದೇಶಗಳ ವಿದೇಶಾಂಗ ಸಚಿವರ ಶೃಂಗ ಸಭೆಯ ಪಾರ್ಶ್ವದಲ್ಲಿ ಭಾರತ ಮತ್ತು ಅಮೆರಿಕದ ವಿದೇಶಾಂಗ ಸಚಿವರುಗಳು ಅತ್ಯಂತ ಮಹತ್ವದ ದ್ವಿಪಕ್ಷೀಯ ಒಪ್ಪಂದಕ್ಕೆ ಅಂಕಿತ ಹಾಕಿದ್ದಾರೆ. ವಿರಳ ಖನಿಜಗಳ ಗಣಿಗಾರಿಕೆ, ಸಂಸ್ಕರಣೆ, ಪೂರೈಕೆಗೆ ಸಂಬಂಧಿಸಿದಂತೆ ಉಭಯ ದೇಶಗಳು ಐತಿಹಾಸಿಕ ಒಪ್ಪಂದ ಮಾಡಿಕೊಂಡಿದ್ದು ಇದು ಕೇವಲ ಕೈಗಾರಿಕೆ, ಆರ್ಥಿಕ ಕ್ಷೇತ್ರ ಮಾತ್ರವಲ್ಲದೆ ರಾಜತಾಂತ್ರಿಕವಾಗಿಯೂ ಐತಿಹಾಸಿಕವಾದುದಾಗಿದೆ. ವಿರಳ ಲೋಹಗಳ ಕ್ಷೇತ್ರದಲ್ಲಿ ಚೀನ ವಿಶ್ವದಲ್ಲಿಯೇ ಮುಂಚೂಣಿಯಲ್ಲಿದ್ದು ದಶಕಗಳಿಂದ ಪಾರಮ್ಯ ಸಾಧಿಸಿದೆ. ಕಳೆದೊಂದು ದಶಕದಿಂದೀಚೆಗೆ ತಂತ್ರಜ್ಞಾನ ಕ್ಷೇತ್ರದಲ್ಲಿನ ಕ್ರಾಂತಿಕಾರಿ ಬೆಳವಣಿಗೆ ಪರಿಣಾಮ ವಿರಳ ಲೋಹಗಳಿಗೆ ವಿಶ್ವದಾದ್ಯಂತ ಬೇಡಿಕೆ ಸೃಷ್ಟಿಯಾಗಿದೆ.

## ಉದ್ಯಮಕ್ಕೆ ಹೆಚ್ಚಿನ ಉತ್ತೇಜನ

ಭಾರತ ಸರಕಾರ ಕಳೆದೊಂದು ವರ್ಷದಿಂದೀಚೆಗೆ ಸೆಮಿ ಕಂಡಕ್ಟರ್ ಉದ್ಯಮಕ್ಕೆ ಹೆಚ್ಚಿನ ಉತ್ತೇಜನ ನೀಡಿದ್ದು ದೇಶದಲ್ಲಿ ಘಟಕಗಳನ್ನು ತೆರೆಯಲಾರಂಭಿಸಿದೆ.
ಈ ಸೆಮಿಕಂಡಕ್ಟರ್‌ಗಳ ತಯಾರಿಕೆಗೆ ಅತ್ಯಂತ ಅಗತ್ಯವಾಗಿರುವ ಈ ವಿರಳ ಲೋಹಗಳಿಗಾಗಿ ಭಾರತ ವಿದೇಶಗಳನ್ನು ಅವಲಂಬಿಸುವುದು ಅನಿವಾರ್ಯವಾಗಿದೆ.
ಸರ ಕಾರ ಈ ದಿಸೆಯಲ್ಲಿ ಪ್ರಯತ್ನ ನಡೆಸುತ್ತಲೇ ಬಂದಿದ್ದು ಈಗ ಅಮೆರಿಕ ದೊಂದಿಗೆ ಮಾಡಿಕೊಂಡಿರುವ ಒಪ್ಪಂದ ಭಾರತದ ಪಾಲಿಗೆ ಭಾರೀ ಪ್ರಯೋಜನಗಳನ್ನು ತಂದು ಕೊಡಲಿದೆ. ಇದೇ ವೇಳೆ ಅಮೆರಿಕಕ್ಕೂ ತನ್ನ ಹಿತಾಸಕ್ತಿಯನ್ನು ಕಾಯ್ದುಕೊಳ್ಳಲು ಈ ಒಪ್ಪಂದ ನೆರವಾಗಲಿದ್ದು ಭಾರತದೊಂದಿಗಿನ ವ್ಯೂಹಾತ್ಮಕ ಪಾಲುದಾರಿಕೆಗೆ ಹೆಚ್ಚಿನ ಬಲವನ್ನು ತಂದುಕೊಡಲಿದೆ.

ಇದೇ ವೇಳೆ ಎಲೆಕ್ಟ್ರಾನಿಕ್ಸ್, ಎಲೆಕ್ಟ್ರಿಕ್ ವಾಹನಗಳು, ಬ್ಯಾಟರಿ ಚಾಲಿತ ಉಪಕರಣಗಳು ಹಾಗೂ ತಂತ್ರಜ್ಞಾನ ಕ್ಷೇತ್ರದಲ್ಲಿನ ಕ್ರಾಂತಿಕಾರಿ ಆವಿಷ್ಕಾರವಾದ ಕೃತಕ ಬುದ್ಧಿಮತ್ತೆ ತಂತ್ರಜ್ಞಾನದಲ್ಲಿ ಈ ವಿರಳ ಲೋಹಗಳು ವ್ಯಾಪಕವಾಗಿ ಬಳಕೆಯಾಗುತ್ತಿವೆ. ಇದೇ ಕಾರಣದಿಂದಾಗಿ ಸೆಮಿ ಕಂಡಕ್ಟರ್ ಉದ್ಯಮ ಕ್ಷೇತ್ರ ಮಹತ್ವದ ಪ್ರಗತಿ ಸಾಧಿಸುತ್ತಿದ್ದು ತಂತ್ರಜ್ಞಾನ ಕ್ಷೇತ್ರದಲ್ಲಿ ಪರಸ್ಪರ ಪೈಪೋಟಿಗಿಳಿದಿರುವ ರಾಷ್ಟ್ರಗಳು ಸೆಮಿ ಕಂಡಕ್ಟರ್ ವಲಯದಲ್ಲಿ ಸ್ವಾವಲಂಬನೆ ಸಾಧಿಸಲು ಆಸಕ್ತಿ ತೋರತೊಡಗಿವೆ.
ಆದರೆ ಈ ಕೈಗಾರಿಕೆಗೆ ಅತ್ಯಗತ್ಯವಾಗಿರುವ ವಿರಳ ಲೋಹಗಳಿಗಾಗಿ ಈ ಎಲ್ಲಾ ದೇಶಗಳು ಚೀನವನ್ನು ಅವಲಂಬಿಸುವ ಅನಿವಾರ್ಯತೆ ಎದುರಿಸುತ್ತಿವೆ. ಇನ್ನು ತಂತ್ರಜ್ಞಾನಾಧರಿತ ಆರ್ಥಿಕ ವ್ಯವಸ್ಥೆಗಳು ಪ್ರಮುಖ ಕೈಗಾರಿಕೆಗಳಿಗೆ ಅಗತ್ಯವಿರುವ ಮೂಲ ಸಂಪನ್ಮೂಲಗಳಿಗಾಗಿ ವಿದೇಶಗಳ ಅವಲಂಬನೆ ರಾಜತಾಂತ್ರಿಕವಾಗಿಯೂ ಒಂದಿಷ್ಟು ಅಪಾಯಕಾರಿಯಾಗಿರುವುದರಿಂದ ಅಮೆರಿಕ-ಭಾರತದ ನಡುವಣ ಈ ಒಪ್ಪಂದದಿಂದ ಈ ಕ್ಷೇತ್ರದಲ್ಲಿನ ಚೀನದ ಏಕಸ್ವಾಮ್ಯತೆಗೆ ಸಡ್ಡು ಹೊಡೆದಂತಾಗಿದೆ. ಭಾರತ-ಅಮೆರಿಕ ದೇಶಗಳ ಪಾಲಿಗೆ ಈ ಒಪ್ಪಂದ ಕೊಡುಕೊಳ್ಳುವ ಹಾಗೂ ತಂತ್ರಜ್ಞಾನ, ಕಾರ್ಯತಂತ್ರ ಭಾಗೀದಾರಿಕೆಯಲ್ಲಿ ಮೈಲಿಗಲ್ಲು ಎಂದು ಬಣ್ಣಿಸಲಾಗಿದೆ. ಈ ಒಪ್ಪಂದದ ಬಳಿಕ ಉಭಯ ದೇಶಗಳು ವಿರಳ ಖನಿಜಗಳ ಗಣಿಗಾರಿಕೆ, ಸಂಸ್ಕರಣೆ, ಪೂರೈಕೆ, ಮರುಬಳಕೆಯಲ್ಲಿ ಪರಸ್ಪರ ಸಹಭಾಗಿತ್ವ ಹೊಂದುವುದೇ ಅಲ್ಲದೆ ಈ ಕ್ಷೇತ್ರದಲ್ಲಿ ಹೂಡಿಕೆಗೂ ಅವಕಾಶ ಕಲ್ಪಿಸಿಕೊಡಲಿದೆ.

ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ದಿನೇದಿನೆ ಕ್ಷಿಪ್ರ ಬೆಳವಣಿಗೆಗಳನ್ನು ಕಾಣುತ್ತಿದ್ದು, ಅದಕ್ಕೆ ತಕ್ಕಂತೆ ದೇಶಗಳು ಸುಧಾರಣೆಗಳನ್ನು ಕಂಡುಕೊಳ್ಳುವುದು ಅತ್ಯಗತ್ಯವಾಗಿದೆ. ಮತ್ತೊಂದೆಡೆಯಿಂದ ಹೆಚ್ಚುತ್ತಲೇ ಸಾಗಿರುವ ಹವಾಮಾನ ಬದಲಾವಣೆಗೆ ಪರಿಹಾರವಾಗಿ ಪಳೆಯುಳಿಕೆ ಇಂಧನಗಳ ಬದಲಾಗಿ ನವೀಕರಿಸಬಹುದಾದ ಇಂಧನ ಇಲ್ಲವೇ ವ್ಯವಸ್ಥೆಗಳತ್ತ ದೇಶಗಳು ಮುಖ ಮಾಡುತ್ತಿರುವ ಈ ಕಾಲಘಟ್ಟದಲ್ಲಿ ಎಲೆಕ್ಟ್ರಿಕ್ ಚಾಲಿತ ವಾಹನಗಳು, ಸಾಧನ, ಸಲಕರಣೆಗಳಿಗೆ ಬೇಡಿಕೆ ಅಧಿಕಗೊಳ್ಳುತ್ತಿದೆ. ಇಂತಹ ಸನ್ನಿವೇಶದಲ್ಲಿ ದೀರ್ಘಾವಧಿಯ ಖನಿಜ ಪೂರೈಕೆ ಮತ್ತು ಈಗಿನ ತಂತ್ರಜ್ಞಾನಾಧರಿತ ಆರ್ಥಿಕ ವ್ಯವಸ್ಥೆಗೆ ಭಾರತ ಸರಕಾರ ಅಮೆರಿಕದೊಂದಿಗೆ ಮಾಡಿಕೊಂಡಿರುವ ಈ ಒಪ್ಪಂದ ಪೂರಕ ಮತ್ತು ಉತ್ತೇಜನಕಾರಿ.

# ರಾಮಾಯಣ



ತನ್ನ ಉದ್ದೇಶದಲ್ಲಿ ವಿಫಲನಾದ ರಾವಣನು ರಕ್ಕಸಿಯರಿಗೆ ಸೂಚನೆಯಿತ್ತು

• ಹಿಂದಿನ ಸಂಚಿಕೆಯಿಂದ 121ನೆಯ ಅಧ್ಯಾಯ

ಸ್ವಲ್ಪವಾದರೂ ಹಿತವುಂಟಾದರೆ ನಿದ್ದೆ ಬಂದೀತು, ಆದರೆ ರಕ್ಕಸಿಯರ ಭಯದಿಂದ ರಾಮನ ಪಾದಗಳನ್ನೇ ನೆನೆಯುತ್ತ. ಜನರ ಸಂಗವನ್ನು ತೊರೆದು, ತಾಪದಿಂದ ಬೆಂಡಾದ ತನ್ನ ದೇಹಕ್ಕೆ ನಿದ್ದೆಯೆಲ್ಲಿಯದು? ಹೀಗಾಗಿ ಇದು ಕನಸಲ್ಲ, ಆದರೂ ಕಣ್ಣೆದುರಿಗೇ ಕಾಣಿಸಿದ ಈ ನೋಟ ಭ್ರಾಂತಿಯೇ? ಮರೆವುತಿಳಿವಿನಲ್ಲಿ ಈ ಕೆಟ್ಟಕನಸೇ ಬಿದ್ದಿತೋ, ತುಂಬ ಭಯವಾಗುತ್ತಿದೆ ಇಂದ್ರ, ಬೃಹಸ್ಪತಿ, ಸೂರ್ಯದೇವ, ಗರುಡನೇ ಕಾಪಾಡಿ ಎಂದು ಧ್ಯಾನಿಸಿ, ರಾಮಲಕ್ಷ್ಮಣಸೀತೆಯರಿಗೆ ನೆಮ್ಮದಿಯನ್ನು ನೀಡಿ ಎಂದು ಮನಸ್ಸಿನಲ್ಲಿಯೇ ಜಾನಕಿಯು ಪ್ರಾರ್ಥಿಸಿದಳು. ಹಗಲಿರುಳೂ ರಘುವರನನ್ನು ಮನಸಿನಲ್ಲಿರಿಸಿಕೊಂಡದ್ದು ಎದುರಿಗೆ ರಕ್ಕಸಿಯರ ನಡುವೆ ಈ ಸತ್ಕಥೆಯನ್ನು ಕೇಳುವ ಭಾಗ್ಯ ಹೇಗೆ ಉಂಟಾಯಿತು ನನ್ನ ಮೇಲೆ ಕರುಣೆ ಹುಟ್ಟ ಜಗದೀಶನು ಈ ವಾನರರನನ್ನು ಕಳುಹಿಸಿದ್ದಾನೆಯೋ ಏನೋ - ಎಂದು ಆಲೋಚಿಸುತ್ತಿದ್ದ ಜನಕಜೆಯನ್ನು ಹನುಮಂತನು ನೋಡಿದ. ಆಕೆಯ ಮನಸ್ಸು ರಾಮಕಥೆಯ ಗುಂಗಿನಲ್ಲಿದೆ; ಬೇಗ ಹೋಗಿ ಆ ಅಮಲ ಮೂರ್ತಿಯ ಸದ್ಗುಣಗಳನ್ನು ಬಣ್ಣಿಸಿ ಆಕೆಯ ಶೋಕವನ್ನು ಹೋಗಲಾಡಿಸುತ್ತೇನೆಂದು ನಿರ್ಧರಿಸಿದ ಪವಮಾನಸುತನು ಮರದಿಂದ ಕೆಳಗಿಳಿದು ಸೀತೆಯ ಹತ್ತಿರ ಹೋಗಿ ಮತ್ತೆ ಮತ್ತೆ ನಮಸ್ಕರಿಸುತ್ತ ಕೈಮುಗಿದು ನಿಂತುಕೊಂಡು, ಕರುಕಲಾದ. ರೇಷ್ಮೆಯ ವಸ್ತ್ರವನ್ನುಟ್ಟು, ಮನೋಹರವಾದ ತಾವರೆಗಳಂತಹ ಕಣ್ಣುಗಳಿಂದ ಕೂಡಿ, ದೊಡ್ಡ ಸಾಹ ರೆಂಬೆಯನ್ನು ಹಿಡಿದುಕೊಂಡು ಚಿಂತೆಯಿಂದ ಕೊರಗುತ್ತಿರುವ ನೀನು 'ಯಾರು ತಾಯಿ? ದೇವಕನ್ಯೆಯೋ, ನಾಗದೇವತೆಯೋ, ಲಕ್ಷ್ಮಿಯೋ ಸರಸ್ವತಿಯೋ ಧಾರಿಣೀಸುತೆಯೋ ದಯವಿಟ್ಟು ತಿಳಿಸು ಎಂದು ಮತ್ತೆ ನಮಸ್ಕರಿಸಿದ.

ನಿಮ್ಮ ತಾಯ್ತಂದೆಯರು ಯಾರು? ಗಂಡಮಕ್ಕಳು ಎಲ್ಲಿದ್ದಾರೆ? ಶ್ರೀಲಕ್ಷ್ಮಿಗಳಲ್ಲದೆ ಮಿಕ್ಕ ಮನುಷ್ಯಸ್ತ್ರೀಗೆ ಇಂತಹ ಸಲ್ಲಕ್ಷಣಗಳಿಂದ ಸಹ ಚೆಲುವು ಇರಲು ಸಾಧ್ಯವೇ? ಮುನಿವೇಷದಿಂದ ರಕ್ಕಸನು ಕದ್ದೊಯ್ದ ಸೀತೆಯೇ ಇರಬೇಕೆಂದು ನನ್ನ ಮನಸಿಗೆ ತೋಚುತ್ತಿದೆ, ನೀನು ಇತನಾ ರಾಣಿ ತಾನೇ? ಹಿಂದೆ ಸನಕಾದಿಗಳ ಮಾತಿನಂತೆ ಕಿಂಕರರಿಗೆ ಅಭಯವನ್ನಿತ್ತು ಮನುಷ್ಯರೂಪವನ್ನು ಧರಿಸಿದ ಮಹಾಲಕ್ಷ್ಮಿಯೇ ಹೊರತು ನೀನು ಸಾಧಾರಣಳಲ್ಲ ಎಂದು ನನ್ನ ಅಂತರಾತ್ಮವು ಹೇಳುತ್ತಿದೆ. ಚಿಂತೆಯನ್ನು ಬಿಟ್ಟು ಅಭಯವನ್ನು ನೀಡು ಎಂದು ಬೇಡಿಕೊಂಡ. ರಘುವರನ ಹೆಸರನ್ನು ಹೇಳುತ್ತ ಮನಸಿಗೆ ಹರ್ಷವನ್ನು ತಂದ ಮಾರುತಿಯನ್ನು ನೋಡುತ್ತ ಸೀತೆಯು ಸಂಭ್ರಮದಿಂದ ತನ್ನ ವಿಷಯವನ್ನು ಹೇಳತೊಡಗಿದಳು: ಸಾಗರಸಮಾನ ಗಾಂಭೀರ್ಯದಿಂದ ಕೂಡಿದ ದಶರಥ ಮಹಾರಾಜನ ಸೊಸೆ ನಾನು, ಜನಕನ ಮಗಳು ಸೀತೆ, ಶ್ರೀರಾಮನೊಡನೆ ಅಯೋಧ್ಯೆಯಲ್ಲಿ ಸಂತಸದಿಂದಿದ್ದೆ. ಹನ್ನೆರಡು ವರ್ಷಗಳ ಕಾಲ ಸುಖಸಂತೋಷದಿಂದ ಬಾಳುತ್ತಿರಲು, ರಘುಪತಿಗೆ ಪಟ್ಟ ಕಟ್ಟಲು ಮಹಾರಾಜನು ಆಲೋಚಿಸಿದ, ಆಗ ನಮ್ಮ ಅತ್ತೆ ಕೈಕೇಯಿಯು ಬಂದು ತನ್ನ ಮಗ ಭರತನಿಗೆ ದೊರೆತನವನ್ನು ನೀಡದಿದ್ದರೆ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಹೆದರಿಸಲು, ಧರ್ಮಸ್ವರೂಪಿಯಾದ ದಶರಥಮಹಾರಾಜನು ತಾನು ಹಿಂದೆ ಆಕೆಗಿತ್ತಿದ್ದ ವರಗಳನ್ನು ನೆನೆಸಿಕೊಂಡು ಶೋಕದಿಂದಿರಲು, ತಂದೆಯು ಕೊಟ್ಟ ಮಾತನ್ನು ನಾನು ಸಲ್ಲಿಸುತ್ತೇನೆಂದು ರಘುವೀರನು ಕಾಡಿಗೆ ಹೊರಡಲು ಸೌಮಿತ್ರಿಯೂ ಹಿಂಬಾಲಿಸಿದ, ನಾನೂ ಕರ್ತವ್ಯಭಾವನೆಯಿಂದ ಗಂಡನನ್ನುಸರಿಸಿ, ಗೋದಾವರೀ ತೀರದ ಪಂಚವಟಿಯಲ್ಲಿ ಪತಿಸೇವಾನಿರತೆಯಾಗಿ ಎಲೆವನೆಯಲ್ಲಿದ್ದೆ. ಅಲ್ಲಿಗೆ ಬಂದ ದುರಾತ್ಮನಾದ ರಾವಣನು ನನ್ನನ್ನು ಕದ್ದು ತಂದು ಈ ವನದಲ್ಲಿರಿಸಿ ಎರಡು ತಿಂಗಳ ಗಡುವು ಕೊಟ್ಟಿದ್ದಾನೆ. ವಲ್ಲಭನ ಚರಣಗಳನ್ನು ಕಾಣದೆ ಜೀವಬಿಡಲು ಆಲೋಚಿಸಿದೆ, ಮಗನೇ ಎಂದು ಹೇಳಿದಳು. ಆಗ ಹನುಮಂತನು, ನಾನು ಮಾರುತಿ, ಸುರನರೋರಗಯಕ್ಷರು ಅನುದಿನವೂ ಯಾರನ್ನು ಪೂಜಿಸುವರೋ


ಮುಂದುವರೆಯುವುದು



ಅಂತರಂಗದ ಮಾತು

ಡಾ.ಸುಧಾಕರ.ಜಿ. ಲಕ್ಕವಳ್ಳಿ
ಲೇಖಕರು
ಸಾಮಾಜಿಕ ಚಿಂತಕರು

# ಅಖಾಡದ ಕಲಿಗಳಿಗೆ ಚರ್ಮ ರಕ್ಷೆ



ಗರಡಿ ಮನೆಯ ಕೆಮ್ಮಣ್ಣು ಪೈಲ್ವಾನನಿಗೆ ಪವಿತ್ರ ಮೃತ್ತಿಕೆ. ಆದರೆ ನಿರಂತರ ಮಲ್ಲಯುದ್ಧ ಮತ್ತು ಬೆವರ ಹನಿಗಳು ಚರ್ಮದ ಮೇಲೆ ನಿತ್ಯ ಪ್ರಹಾರ ಮಾಡುತ್ತವೆ. ಶಿಲೀಂಧ್ರ, ಸೋಂಕು, ಅಲರ್ಜಿ ಕೇವಲ ತುರಿಕೆಯಲ್ಲ ಅವು ಮಲ್ಲನ ಏಕಾಗ್ರತೆಯನ್ನೇ ಕಸಿದು ಸಾಧನೆಯ ಲಯ ತಪ್ಪಿಸುತ್ತವೆ.

ವೈಜ್ಞಾನಿಕವಾಗಿ ನೋಡಿದರೆ, ತಾಲೀಮಿನಿಂದ ದೇಹ ಸದಾ ಬೆಚ್ಚಗೆ, ತೇವದಿಂದ ಕೂಡಿರುತ್ತದೆ. ಇಂತಹ ವಾತಾವರಣ ಟಿನಿಯಾ ಶಿಲೀಂಧ್ರ ವೃದ್ಧಿಗೆ ಅನುಕೂಲ. ಇದು ಸ್ಪರ್ಶದಿಂದ ಕಾಡ್ಗಿಚ್ಚಿನಂತೆ ಹರಡಿ ಕುತ್ತಿಗೆ, ತೊಡೆ ಸಂಧಿಯಲ್ಲಿ ಕೆಂಪು ಚಕ್ರದ ಕಲೆ ಮೂಡಿಸುತ್ತದೆ. ಹಳಸಿದ ತೈಲ, ಮಜ್ಜಿಗೆ ಸೇರಿದ ಮಣ್ಣಿನ ಕಣಗಳು ಕಾಂಟ್ಯಾಕ್ಟ್ ಡರ್ಮಟೈಟಿಸ್ ಉಂಟುಮಾಡಿ ಮೈ ಸುಡುತ್ತವೆ. ಒದ್ದೆ ಲಂಗೋಟಿ, ಟವೆಲ್ ರೋಗಾಣುಗಳ ಕೋಟೆಯಾಗಿ ಸೋಂಕನ್ನು ಉಲ್ಬಣಗೊಳಿಸುತ್ತದೆ. ಇದಕ್ಕೆ ನಮ್ಮ ಸಂಪ್ರದಾಯದಲ್ಲೇ ಮದ್ದಿದೆ. ಹಿರಿಯರು ಮಣ್ಣಿಗೆ ಅರಿಶಿನ ಬೆರೆಸುತ್ತಿದ್ದರುಅರಿಶಿನದ ಕರ್ಕ್ಯುಮಿನ್ ಪ್ರಬಲ ಸೋಂಕುನಾಶಕ. ಬೇವಿನ ಎಣ್ಣೆ ಶಿಲೀಂಧ್ರನಾಶಕ ಗುಣದ ಕವಚ.

ತಾಲೀಮಿಗೆ ಮುನ್ನ ಸಾಸಿವೆ ಎಣ್ಣೆ ಲೇಪಿಸಿದರೆ ಚರ್ಮದ ಮೇಲೆ ಜೈವಿಕ ಪದರ ಮೂಡಿ ಕಲ್ಮಶ ತಡೆಯುತ್ತದೆ. ಬೇವಿನ ಸೊಪ್ಪಿನ ಬಿಸಿನೀರು ಸ್ನಾನ ಬ್ಯಾಕ್ಟೀರಿಯಾ ನಿವಾರಿಸುತ್ತದೆ. ಹೀಗೆ ಆಧುನಿಕ ವಿಜ್ಞಾನ ಮತ್ತು ಹಿರಿಯರ ಅನುಭವ ಕೈಜೋಡಿಸಿದರೆ ಪೈಲ್ವಾನನ ಮೈ ಬೆಂಕಿಯಲ್ಲಿ ಅರಳಿದ ಹೂವಾಗಿರುತ್ತದೆ. ಬಟ್ಟೆಯನ್ನು ಬಿಸಿಲಲ್ಲಿ ಒಣಗಿಸಿ, ಸೋಂಕಿಗೆ ವೈದ್ಯರ ಸಲಹೆ ಪಡೆಯಿರಿ. ಮಣ್ಣಿನ ಮೇಲಿನ ಭಕ್ತಿ, ಮೈಮೇಲಿನ ಜಾಗೃತಿ ಸಮನಾದಾಗಲೇ ಅಖಾಡದ ಕಲಿ ಅಜೇಯ.

# ಅಜೀರ್ಣ ಸಮಸ್ಯೆಯಿಂದ ಮುಕ್ತರಾಗೋಣ



ಕಲಾ ಸಾಹಿತ್ಯ

ವಿಶ್ವಾಸ್ ಡಿ. ಗೌಡ
ಲೇಖಕರು
ಸಾಮಾಜಿಕ ಚಿಂತಕ

ಇಂದಿನ ದಿನಗಳಲ್ಲಿ ಜನರ ಆಹಾರ ಪದ್ಧತಿ ಸಂಪೂರ್ಣ ಬದಲಾಗುತ್ತಿದೆ. ಸಮಯದ ಅಭಾವ, ಸರಿಯಾದ ಆಹಾರ ಸೇವಿಸದಿರುವುದು, ಪ್ರತಿ ಬಾರಿ ಅತಿಯಾಗಿ ತಿನ್ನುವುದು, ಅಪೌಷ್ಟಿಕ ಆಹಾರ ಸೇವನೆ, ಕರಿದ ಮತ್ತು ಮಸಾಲೆಯುಕ್ತ ಆಹಾರಗಳು ಜೀರ್ಣಕ್ರಿಯೆಯನ್ನು ಕುಂಠಿತಗೊಳಿಸುವುದಲ್ಲದೆ, ತೂಕ ಹೆಚ್ಚಾಗುವುದು ಮತ್ತು ಇತರ ಗಂಭೀರ ಕಾಯಿಲೆಗಳಿಗೆ ಕಾರಣವಾಗುತ್ತವೆ. ಇದು ಆರೋಗ್ಯದ ಕ್ಷೀಣತೆಗೆ ಕಾರಣವಾಗುತ್ತದೆ. ಮುಖ್ಯವಾಗಿ ಮಲಬದ್ಧತೆ, ಗ್ಯಾಸ್, ಅಸಿಡಿಟಿ, ಉಬ್ಬರ ಇತ್ಯಾದಿಗಳಿಂದ ದಿನವಿಡೀ ಕೆಲಸದಲ್ಲಿ ಗಮನ ಹರಿಸುವುದು ಕಷ್ಟವಾಗುತ್ತದೆ ಮತ್ತು ತಿಂದ ಆಹಾರವು ಬೇಗನೆ ಜೀರ್ಣವಾಗುವುದಿಲ್ಲ.

ಊಟ ಮಾಡುವಾಗ ಯಾವ ವಿಷಯಗಳನ್ನು ನೆನಪಿನಲ್ಲಿಟ್ಟುಕೊಳ್ಳಬೇಕು, ತಿನ್ನುವಾಗ ಮತ್ತು ಕುಡಿಯುವಾಗ ಯಾವ ವಿಶೇಷ ಕಾಳಜಿ ವಹಿಸಬೇಕು ಎಂದು ತಿಳಿಯಿರಿ. ಇದರಿಂದ ಹೊಟ್ಟೆಯ ಅಸ್ವಸ್ಥತೆಗಳು ನಮ್ಮನ್ನು ಕಾಡುವುದಿಲ್ಲ.

**ಆಹಾರ** ಆಹಾರದಲ್ಲಿ ಹೆಚ್ಚು ಸಂಸ್ಕರಿಸಿದ ಆಹಾರವನ್ನು ಸೇವಿಸುವುದನ್ನು ತಪ್ಪಿಸಿ, ಅಂದರೆ ಕರಿದ, ಮಸಾಲೆಯುಕ್ತ, ಅನೇಕ ಪದಾರ್ಥಗಳನ್ನು ಮಿಶ್ರಣ ಮಾಡಿದ, ಹೆಚ್ಚು ರುಚಿಕರವಾಗಿಸಲು ಹೆಚ್ಚು ಸಂಸ್ಕರಿಸಿದ ಆಹಾರ, ಫಾಸ್ಟ್ ಫುಡ್, ಬೇಕರಿ ಪದಾರ್ಥಗಳನ್ನು ತಪ್ಪಿಸಿ. ಸಾಧ್ಯವಾದಷ್ಟು ನೈಸರ್ಗಿಕ ಆಹಾರವನ್ನು ನೈಸರ್ಗಿಕ ರೂಪದಲ್ಲಿಯೇ ಸೇವಿಸಿ ಅಥವಾ ಅತಿ ಕಡಿಮೆ ಸಂಸ್ಕರಿಸಿದ ಆಹಾರವನ್ನು ಸೇವಿಸಿ.

**ನಿಯಮಿತತೆ** ಆಹಾರ ಸೇವನೆಯಲ್ಲಿ ನಿಯಮಿತತೆ ಮತ್ತು ಸಮಯವನ್ನು ಪಾಲಿಸುವುದು ಮುಖ್ಯ, ಅಕಾಲಿಕ ತಿನ್ನುವುದು, ಮನಸ್ಸಿಗೆ ಬಂದಾಗಲೆಲ್ಲ ತಿನ್ನುವುದು ಅಥವಾ ಆಗಾಗ್ಗೆ ಏನನ್ನಾದರೂ ಬಾಯಾಡಿಸುವುದು, ಈ ಎಲ್ಲಾ ಅಭ್ಯಾಸಗಳು ಜೀವನದ ಸಮಸ್ಯೆಗಳನ್ನು ಉಂಟುಮಾಡುತ್ತವೆ ಮತ್ತು ಇತರ ಕಾಯಿಲೆಗಳನ್ನು ಸಹ ಆಹ್ವಾನಿಸುತ್ತವೆ. ಒಮ್ಮೆ ಊಟ ಮಾಡಿದರೆ ಅಥವಾ ಸಾಕಷ್ಟು ತಿಂದಿದ್ದರೆ ಕನಿಷ್ಠ ಮೂರೂವರೆ ನಾಲ್ಕು ಗಂಟೆಗಳ ಕಾಲ ನೀರು, ಎಳೆನೀರು, ತಾಜಾ ನೀರುಮಜ್ಜಿಗೆ ಹೊರತುಪಡಿಸಿ ಬೇರೆ ಯಾವುದೇ ಆಹಾರವನ್ನು ಸೇವಿಸಬಾರದು. ಒಂದು ಕಡಲೆಕಾಯಿ ಅಥವಾ ಕಡಲೆಯ ಕಾಳನ್ನು ಸಹ ತಿನ್ನಬೇಡಿ.

### ನೀರು ಕುಡಿಯಿರಿ

ಊಟಕ್ಕೆ 50 ನಿಮಿಷಗಳ ಮೊದಲು ಯಾವಾಗಲೂ ನೀರು ಕುಡಿಯಿರಿ ಊಟದ ಜೊತೆಗೆ ಅಥವಾ ಊಟದ ನಂತರ ಕನಿಷ್ಠ 50 ನಿಮಿಷಗಳ ಕಾಲ ನೀರನ್ನು ಕುಡಿಯಬೇಡಿ. ಉತ್ತಮ ಆರೋಗ್ಯಕ್ಕಾಗಿ ದೇಹವನ್ನು ಯಾವಾಗಲೂ ಸಾಕಷ್ಟು ಜಲೀಕರಿಸಬೇಕು. ಏಕೆಂದರೆ, ಅಂತಹ ಸ್ಥಿತಿಯಲ್ಲಿ, ಜೀರ್ಣಕ್ರಿಯೆ ಸೇರಿದಂತೆ ದೇಹದ ಎಲ್ಲಾ ಕಾರ್ಯಗಳು ಸರಿಯಾಗಿ ಕಾರ್ಯನಿರ್ವಹಿಸುತ್ತವೆ. ನೀವು ದಿನವಿಡೀ ಸಾಕಷ್ಟು ನೀರು ಕುಡಿಯಬೇಕು. ಅಲ್ಲದೆ ನೀರಿನಂಶ ಹೆಚ್ಚಿರುವ ಆಹಾರಗಳನ್ನು ಸೇವಿಸಿ.

### ಶುಂಠಿ

ಆಹಾರದಲ್ಲಿ ಶುಂಠಿಯನ್ನು ಸೇರಿಸುವುದರಿಂದ ಅಜೀರ್ಣ ಮತ್ತು ಮಲಬದ್ಧತೆ ಕಡಿಮೆಯಾಗುತ್ತದೆ. ಶುಂಠಿ ಜೀರ್ಣಕ್ರಿಯೆಯನ್ನು ಬಲಪಡಿಸುತ್ತದೆ ಮತ್ತು ದೇಹದಲ್ಲಿನ ಕಾಯಿಲೆಗಳನ್ನು ಸಹ ಗುಣಪಡಿಸುತ್ತದೆ. ನೀವು ಹಸಿ ಶುಂಠಿಯನ್ನು ಅಗಿಯಬಹುದು ಅಥವಾ ಶುಂಠಿ ಟೀ, ಶುಂಠಿ ನೀರು, ಶುಂಠಿ ಕ್ಯಾಂಡಿ ತಿನ್ನಬಹುದು.

### ಮಜ್ಜಿಗೆ

ನೀವು ಯಾವುದೇ ಋತುವಿನಲ್ಲಿ ಮಜ್ಜಿಗೆ ಕುಡಿಯಬಹುದು. ಮಜ್ಜಿಗೆ ಪ್ರೊಬಯಾಟಿಕ್ ಆಹಾರವಾಗಿದೆ. ಮಜ್ಜಿಗೆ ಉತ್ತಮ ಬ್ಯಾಕ್ಟೀರಿಯಾಗಳಿಂದ ಸಮೃದ್ಧವಾಗಿದೆ. ಇದು ಜೀರ್ಣಕ್ರಿಯೆಯಲ್ಲಿ ಯಾವುದೇ ಸಮಸ್ಯೆಯನ್ನು ಉಂಟುಮಾಡುವುದಿಲ್ಲ. ಮಜ್ಜಿಗೆಯನ್ನು ಆಹಾರದಲ್ಲಿ ಸೇರಿಸುವುದರಿಂದ ಹೊಟ್ಟೆಯು ತಂಪಾಗಿರುತ್ತದೆ ಮತ್ತು ಆಹಾರವನ್ನು ತ್ವರಿತವಾಗಿ ಜೀರ್ಣಿಸುತ್ತದೆ. ಆಯುರ್ವೇದದಲ್ಲಿ ಯಾವಾಗಲೂ ಊಟದ ನಂತರ ಮಜ್ಜಿಗೆ ಕುಡಿಯುವುದು ಒಳ್ಳೆಯದು ಎಂದು ಪರಿಗಣಿಸಲಾಗಿದೆ.

### ಓಮಿನ ಕಾಳು

ಊಟವಾದ ನಂತರ ಅರ್ಧ ಚಮಚ ಓಂ ಕಾಳುಗಳನ್ನು ಜಗಿಯುವುದು ಹೊಟ್ಟೆಗೆ ಒಳ್ಳೆಯದು, ಅಥವಾ ಕಾಲು ಚಮಚ ಓಂ ಕಾಳು, ಕಾಲು ಚಮಚ ಜೀರಿಗೆ ಪುಡಿ, ಚಿಟಿಕೆ ಇಂಗು ಮತ್ತು ಚಿಟಿಕೆ ಕರಿ ಉಪ್ಪನ್ನು ಮಜ್ಜಿಗೆಗೆ ಬೆರೆಸಿ ಊಟದ ನಂತರ ಕುಡಿಯುವುದರಿಂದ ಜೀರ್ಣಕ್ರಿಯೆ ಸುಧಾರಿಸುತ್ತದೆ ಮತ್ತು ಎಲ್ಲಾ ಅಜೀರ್ಣ ಸಮಸ್ಯೆಗಳನ್ನು ನಿವಾರಿಸುತ್ತದೆ.

**ಶತಪಾದ** ಕೆಲವರಿಗೆ ಊಟವಾದ ತಕ್ಷಣ ಮಲಗುವ ಅಭ್ಯಾಸವಿರುತ್ತದೆ. ಆದರೆ ಸಮಯಕ್ಕೆ ಈ ಅಭ್ಯಾಸವನ್ನು ತಪ್ಪಿಸಿ. ತಿಂದ ನಂತರ ನಡೆಯುವುದು ಅಥವಾ ಹಗುರವಾದ ಚಟುವಟಿಕೆಗಳನ್ನು ಮಾಡುವುದು ಉತ್ತಮ. ಕನಿಷ್ಠ 10 ರಿಂದ 15 ನಿಮಿಷಗಳ ಕಾಲ ಸಾಮಾನ್ಯ ನಡಿಗೆ ಅವಶ್ಯಕ. ಇದು ಆಹಾರದ ಜೀರ್ಣಕ್ರಿಯೆಗೆ ಸಹಾಯ ಮಾಡುತ್ತದೆ ಮತ್ತು ನಂತರ ಮಲಬದ್ಧತೆ ಅಥವಾ ವಾಯುವಿಕಾರ ಸಮಸ್ಯೆಗಳನ್ನು ಉಂಟುಮಾಡುವುದಿಲ್ಲ.

# ನಿಯಮಿತವಾಗಿ ಲಿಚಿ ಹಣ್ಣು ಸೇವಿಸುವುದರಿಂದ ಆರೋಗ್ಯಕ್ಕೆ ಹಲವು ಪ್ರಯೋಜನಗಳು

ಲಿಚಿ. ಸಿಹಿ ಹಾಗೂ ರಸಭರಿತ ಉಷ್ಣವಲಯದ ಹಣ್ಣು. ಈ ಹಣ್ಣು ಗುಲಾಬಿ ಬಣ್ಣದ ಹೊರಗಿನ ಸಿಪ್ಪೆ ಹಾಗೂ ಬಿಳಿ ಬಣ್ಣದ ತಿರುಳು ಹೊಂದಿದೆ. ಮುಖ್ಯವಾಗಿ, ಬೇಸಿಗೆಯಲ್ಲಿ ಲಭ್ಯವಿರುವ ಈ ಹಣ್ಣಿನಲ್ಲಿ ವಿಟಮಿನ್ ಸಿ ಹಾಗೂ ಆಯಂಟಿಆಕ್ಸಿಡೆಂಟ್‌ಗಳು ಹೇರಳವಾಗಿವೆ. ರೋಗನಿರೋಧಕ ಶಕ್ತಿ ಹೆಚ್ಚಿಸಲು ಹಾಗೂ ದೇಹವನ್ನು ಹೈಡ್ರೀಕರಿಸಲು ತುಂಬಾ ಒಳ್ಳೆಯದೆಂದು ಆರೋಗ್ಯ ತಜ್ಞರು ತಿಳಿಸುತ್ತಾರೆ.

ದೇಹದ ಉಷ್ಣಾಂಶವನ್ನು ಕಡಿಮೆ ಮಾಡುವುದಲ್ಲದೆ, ದೇಹಕ್ಕೆ ಅಗತ್ಯವಾದ ಪೋಷಕಾಂಶಗಳನ್ನೂ ಸಹ ಲಿಚಿ ಒದಗಿಸುತ್ತದೆ. ಮೇ ಹಾಗೂ ಜೂನ್‌ನಲ್ಲಿ ಯಥೇಚ್ಛವಾಗಿ ಸಿಗುವ ಈ ಹಣ್ಣುಗಳನ್ನು ನಿಮ್ಮ ಆಹಾರದ ಭಾಗವಾಗಿಸಿದರೆ ಹಲವು ಆರೋಗ್ಯ ಪ್ರಯೋಜನಗಳಿವೆ. ಪ್ರಮುಖವಾಗಿ ಲಿಚಿ ಒತ್ತಡ, ಮಾಲಿನ್ಯದಂತಹ ಆಧುನಿಕ ಜೀವನಶೈಲಿಗೆ ಸಂಬಂಧಿಸಿದ ಸಮಸ್ಯೆಗಳಿಂದ ರಕ್ಷಿಸುತ್ತದೆ. ಲಿಚಿಯನ್ನು ಹಣ್ಣಾಗಿ ಮಾತ್ರವಲ್ಲದೆ ಜ್ಯೂಸ್ ಹಾಗೂ ಸಲಾಡ್‌ಗಳ ರೂಪದಲ್ಲಿಯೂ ಸೇವನೆ ಮಾಡಬಹುದು. ಚರ್ಮದ ಸೌಂದರ್ಯವನ್ನು ಹೆಚ್ಚಿಸಿಕೊಳ್ಳಲು ಬಯಸುವವರಿಗೆ ಲಿಚಿ ಅದ್ಭುತ ಪರಿಹಾರ ಎನ್ನುವುದು ತಜ್ಞರ ಮಾತು. **ಹೃದಯದ ಆರೋಗ್ಯಕ್ಕೆ ಅತ್ಯುತ್ತಮ:** ಲಿಚಿ ಹಣ್ಣಿನಲ್ಲಿರುವ ಪೊಟ್ಯಾಸಿಯಮ್ ರಕ್ತದೊತ್ತಡ ನಿಯಂತ್ರಣದಲ್ಲಿಡಲು ಹೆಚ್ಚು ಸಹಾಯ ಮಾಡುತ್ತದೆ. ಹೆಚ್ಚುವರಿಯಾಗಿ, ಹಣ್ಣಿನಲ್ಲಿರುವ ಉತ್ಕರ್ಷಣ ನಿರೋಧಕಗಳು ರಕ್ತ ಪರಿಚಲನೆಯನ್ನು ಸುಧಾರಿಸುತ್ತದೆ. ನಿಯಮಿತವಾಗಿ ಈ ಹಣ್ಣನ್ನು ಸೇವನೆ ಮಾಡುವುದರಿಂದ ಹೃದಯ ಸಂಬಂಧಿತ ಕಾಯಿಲೆಗಳ ಅಪಾಯ ಕಡಿಮೆ ಮಾಡುತ್ತದೆ ಎಂದು ಆರೋಗ್ಯ ತಜ್ಞರು ಹೇಳುತ್ತಾರೆ.

**ರೋಗನಿರೋಧಕ ಶಕ್ತಿ ವೃದ್ಧಿಸಲು:** ಲಿಚಿ ಹಣ್ಣಿನಲ್ಲಿ ವಿಟಮಿನ್ ಸಿ ಸಮೃದ್ಧವಾಗಿ ಕಂಡುಬರುತ್ತದೆ. ದೇಹದಲ್ಲಿ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ವೈರಲ್ ಸೋಂಕುಗಳು, ನೆಗಡಿಯಂತಹ ವಿವಿಧ ಸಮಸ್ಯೆಗಳು ಬರದಂತೆ ನಮ್ಮನ್ನು ರಕ್ಷಿಸುತ್ತದೆ. **ದೇಹದ ತೂಕ ನಿರ್ವಹಣೆಗೆ:** ದೇಹದ ತೂಕ ಇಳಿಸಿಕೊಳ್ಳಲು ಪ್ರಯತ್ನಿಸುವವರಿಗೆ ಲಿಚಿ ಹಣ್ಣು ಒಂದು ಅತ್ಯುತ್ತಮ ಆಯ್ಕೆ. ಈ ಹಣ್ಣುಗಳಲ್ಲಿ ಕಡಿಮೆ ಕ್ಯಾಲೋರಿಗಳನ್ನು ಹೊಂದಿರುತ್ತವೆ. ಜೊತೆಗೆ ಹೆಚ್ಚಿನ ನೀರಿನ ಅಂಶವನ್ನು ಒಳಗೊಂಡಿರುತ್ತದೆ. ದೇಹಕ್ಕೆ ತ್ವರಿತ ಶಕ್ತಿ ಒದಗಿಸುವುದರ ಜೊತೆಗೆ ಹಸಿವು ನಿಯಂತ್ರಿಸುವಲ್ಲಿ ಈ ಹಣ್ಣು ತುಂಬಾ ಸಹಾಯ ಮಾಡುತ್ತವೆ ಎನ್ನುತ್ತಾರೆ ತಜ್ಞರು.

**ಚರ್ಮದ ಸೌಂದರ್ಯಕ್ಕೆ:** ಲಿಚಿ ಹಣ್ಣಿನಲ್ಲಿರುವ ಆಲಿಗೊನಾಲ್ ಎಂದು ಕರೆಯಲ್ಪಡುವ ವಸ್ತು ಚರ್ಮದ ಮೇಲಿನ ಸುಕ್ಕುಗಳು ಹಾಗೂ ಕಲೆಗಳನ್ನು ಕಡಿಮೆ ಮಾಡಲು ತುಂಬಾ ಸಹಾಯ ಮಾಡುತ್ತದೆ. ಇದು ಸೂರ್ಯನ ಬೆಳಕಿನಿಂದ ಹಾನಿಗೊಳಗಾದ ಚರ್ಮವನ್ನು ಸರಿಪಡಿಸುವುದರ ಜೊತೆಗೆ ಚರ್ಮಕ್ಕೆ ನೈಸರ್ಗಿಕ ಹೊಳಪನ್ನು ನೀಡುವಲ್ಲಿ ಅತ್ಯುತ್ತಮವಾಗಿ ಪಾತ್ರ ವಹಿಸುತ್ತದೆ ಎಂದು ತಜ್ಞರು ವಿವರಿಸುತ್ತಾರೆ. **ಮೂಳೆ ಆರೋಗ್ಯ:** ಲಿಚಿ ಹಣ್ಣಿನಲ್ಲಿ ಮೆಗ್ನೀಸಿಯಮ್, ರಂಜಕ, ಮ್ಯಾಂಗನೀಸ್ ಹಾಗೂ ತಾಮ್ರದಂತಹ ಖನಿಜಗಳಿವೆ. ಈ ಖನಿಜಗಳು ಮೂಳೆ ಸಾಂದ್ರತೆ ಹೆಚ್ಚಿಸುತ್ತವೆ ಹಾಗೂ ಬಲವಾದ, ಆರೋಗ್ಯಕರ ಮೂಳೆಗಳನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತವೆ. ಲಿಚಿ ಹಣ್ಣುಗಳನ್ನು ನಿಯಮಿತವಾಗಿ ಸೇವನೆ ಮಾಡುವುದು ಒಳ್ಳೆಯದೆಂದು ವೈದ್ಯರು ಸಲಹೆ ನೀಡುತ್ತಾರೆ.

**ಜೀರ್ಣಕ್ರಿಯೆ ಸುಧಾರಿಸಲು:** ಲಿಚಿ ಹಣ್ಣುಗಳಲ್ಲಿ ನಾರಿನಂಶವು ಸಮೃದ್ಧವಾಗಿ ಕಂಡುಬರುತ್ತದೆ. ಲಿಚಿ ಮಲಬದ್ಧತೆಯನ್ನು ತಡೆಯಲು ಹೆಚ್ಚು ಸಹಾಯ ಮಾಡುತ್ತದೆ. ಜೀರ್ಣಾಂಗ ವ್ಯವಸ್ಥೆಯನ್ನು ಸ್ವಚ್ಛವಾಗಿರಿಸಲು ತುಂಬಾ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತದೆ. ಲಿಚಿ ಆಹಾರವನ್ನು ತ್ವರಿತವಾಗಿ ಜೀರ್ಣಿಸಿಕೊಳ್ಳಲು ತುಂಬಾ ಸಹಾಯ ಮಾಡುತ್ತದೆ. ವಿಟಮಿನ್ ಸಿ, ನಾರಿನಂಶ ಮತ್ತು ಪೊಟ್ಯಾಸಿಯಮ್ ಅಧಿಕವಾಗಿರುವ ಲಿಚಿ ಹಣ್ಣನ್ನು ಮಧುಮೇಹಿಗಳು ಮಿತವಾಗಿ ಸೇವಿಸಬೇಕು. ಜೊತೆಗೆ ಮಧುಮೇಹಿಗಳು ವೈದ್ಯರ ಸಲಹೆ ಪಡೆದುಕೊಳ್ಳುವುದು ಒಳ್ಳೆಯದು. ಖಾಲಿ ಹೊಟ್ಟೆಯಲ್ಲಿ ಅತಿಯಾಗಿ ಸೇವಿಸುವುದರಿಂದ ಮಕ್ಕಳಲ್ಲಿ ರಕ್ತದೊತ್ತಡ, ಗ್ಲೂಕೋಸ್ ಮಟ್ಟವನ್ನು ಇಳಿಕೆಯಾಗುವ ಅಪಾಯವಿರುತ್ತದೆ ಎಂದು ತಜ್ಞರು ತಿಳಿಸುತ್ತಾರೆ.



# ಡಿಜಿಟಲ್ ವ್ಯಸನದಿಂದ ಮಾನಸಿಕ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ

ನಮ್ಮ ಪ್ರೀತಿಪಾತ್ರರ ಜೊತೆ ಕುಳಿತಾಗಲೂ ಹೆಚ್ಚಾಗಿ ನಮ್ಮ ಸ್ಮಾರ್ಟ್‌ಫೋನ್‌ಗಳಲ್ಲಿ ಮುಳುಗಿ ಹೋಗಿರುತ್ತೇವೆ. ಊಟ ಮಾಡುವಾಗ ಇ - ಮೇಲ್‌ಗಳನ್ನು ಪರಿಶೀಲಿಸುವುದು ಇಲ್ಲವೇ ನಮ್ಮ ಮುಂದೆ ಯಾರೊಂದಿಗಾದರೂ ಮಾತನಾಡುವಾಗ ಸಂದೇಶಗಳನ್ನು ಟೈಪ್ ಮಾಡುವುದು ಸದ್ಯ ಸಾಮಾನ್ಯವಾಗಿ ಬಿಟ್ಟಿದೆ. ನಾವು ಬೆಳಗ್ಗೆ ಎದ್ದ ಕ್ಷಣದಿಂದ ರಾತ್ರಿ ಮಲಗುವವರೆಗೆ, ಕೈಯಲ್ಲಿ ಮೊಬೈಲ್ ಫೋನ್ ಇಲ್ಲದೇ ಒಂದು ಕ್ಷಣವೂ ಕಳೆಯುವುದಿಲ್ಲ.

ಇತ್ತೀಚಿನ ಸಂಶೋಧನೆಗಳ ಪ್ರಕಾರ, ಒಬ್ಬ ವ್ಯಕ್ತಿಯು ದಿನಕ್ಕೆ ಸರಾಸರಿ 8 ಗಂಟೆಗಳಿಗಿಂತ ಹೆಚ್ಚು ಕಾಲ ಡಿಜಿಟಲ್ ಸ್ಕ್ರೀನ್ ಮೂಲಕವೇ ಸಂವಹನ ನಡೆಸುವುದರಲ್ಲಿ ಕಳೆಯುತ್ತಾನೆ ಎಂದು ತಿಳಿದುಬರುತ್ತದೆ. ಈ ಅಂಕಿ - ಅಂಶವು ನಾವು ಮಲಗಲು ಅಥವಾ ಕೆಲಸ ಮಾಡಲು ಕಳೆಯುವ ಒಟ್ಟು ಸಮಯವನ್ನು ಮೀರುತ್ತದೆ ಎಂಬುದು ಗಮನಾರ್ಹವಾಗಿದೆ. ಇಂಟರ್ನೆಟ್ ಅನ್ನು ಮೊದಲು ಪರಿಚಯಿಸಿದಾಗ ಅದರ ಸೃಷ್ಟಿಕರ್ತರು ಈ ತಂತ್ರಜ್ಞಾನವು ಜೀವನವನ್ನು ಗಮನಾರ್ಹವಾಗಿ ಹೆಚ್ಚಿಸುತ್ತದೆ ಎಂದು ತಿಳಿದಿದ್ದರು. ಇತ್ತೀಚಿನ ನೀಲ್ಸನ್ ವರದಿಯು ಇಂದು ಸಂಪೂರ್ಣ ವ್ಯತಿರಿಕ್ತತೆಯನ್ನು ಬಹಿರಂಗಪಡಿಸುತ್ತದೆ.

ಸದ್ಯ ಜನರು ದಿನಕ್ಕೆ 8 ಗಂಟೆಗಳಿಗಿಂತ ಹೆಚ್ಚು ಕಾಲ ಡಿಜಿಟಲ್ ಸ್ಕ್ರೀನ್‌ಗಳನ್ನು ನೋಡುತ್ತಲೇ ಕಳೆಯುತ್ತಿದ್ದಾರೆ. ನಾವು ಮಲಗಲು ಅಥವಾ ಕೆಲಸ ಮಾಡಲು ಕಳೆಯುವುದಕ್ಕಿಂತ ಹೆಚ್ಚಿನ ಸಮಯವಾಗಿದೆ, ನಮ್ಮ ಸುತ್ತಲಿನ ಸುಂದರವಾದ ನೈಸರ್ಗಿಕ ದೃಶ್ಯಗಳಿಗಿಂತ ನಮ್ಮ ಕೈಯಲ್ಲಿರುವ ಸಣ್ಣ ಡಿಜಿಟಲ್‌ಪರದೆಗೆ ಆದ್ಯತೆ ನೀಡುತ್ತಿದ್ದಾರೆ. **ಮಾನಸಿಕ ಆರೋಗ್ಯದ ಮೇಲೆ ಪರಿಣಾಮ:** ಡಿಜಿಟಲ್ ವ್ಯಸನದಿಂದಾಗಿ ಜನರ ಮಾನಸಿಕ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಬೇರೆ ರೀತಿಯಲ್ಲಿ ತಿಳಿಸುವುದಾದರೆ, ನಾವು ಡಿಜಿಟಲ್ ಜಗತ್ತಿಗೆ ಸಂಪರ್ಕದಲ್ಲಿರುವಾಗ ನಿಜ ಜೀವನದಲ್ಲಿ ಸಂಪೂರ್ಣವಾಗಿ ಮುಳುಗಲು ಸಾಧ್ಯವಾಗುತ್ತಿಲ್ಲ. ಮೆದುಳು ಮುಂದಿನ ಅಧಿಸೂಚನೆಗಾಗಿ ನಿರಂತರವಾಗಿ ಎಚ್ಚರವಾಗಿರುವ ಕಾರಣ, ಅದು ವಿಶ್ರಾಂತಿಯಿಂದ ವಂಚಿತವಾಗುತ್ತದೆ. ಇದರ ಪರಿಣಾಮವಾಗಿ ಇದು



ವಯಸ್ಕರಲ್ಲಿ ಹೆಚ್ಚಿದ ಒತ್ತಡ, ಆತಂಕ, ನಿದ್ರಾಹೀನತೆ ಮತ್ತು ಒಂಟಿತನಕ್ಕೆ ಕಾರಣವಾಗುತ್ತದೆ. ಜೊತೆಗೆ ತಮ್ಮ ಆರಂಭಿಕ ವರ್ಷಗಳಲ್ಲಿ ಡಿಜಿಟಲ್ ಪರದೆಗಳಿಗೆ ಸೀಮಿತವಾಗಿ ಹೆಚ್ಚಿನ ಸಮಯವನ್ನು ಕಳೆಯುವ ಮಕ್ಕಳು ಹದಿಹರೆಯದವರನ್ನು ತಲುಪುವ ಹೊತ್ತಿಗೆ ಖಿನ್ನತೆಯ ಲಕ್ಷಣಗಳನ್ನು ಕಾಣಿಸಲು ಶುರುವಾಗಬಹುದು ಎಂದು ಸಂಶೋಧನೆ ಆತಂಕ ವ್ಯಕ್ತಪಡಿಸಿದೆ. **ಪ್ರಕೃತಿಯ ಮಡಿಲಲ್ಲಿ ಸ್ವಲ್ಪ ಕಳೆಯಿರಿ:** ಡಿಜಿಟಲ್ ವ್ಯಸನದಿಂದ ಉಂಟಾಗುವ ಮಾನಸಿಕ ಆರೋಗ್ಯ ಬಿಕ್ಕಟ್ಟಿಗೆ ನೈಸರ್ಗಿಕ ಪರಿಹಾರ ಲಭ್ಯವಿದೆ. ಇದನ್ನು ಸಾಧಿಸಲು ಯಾವುದೇ ದುಬಾರಿ ಚಿಕಿತ್ಸೆಗಳ ಅಗತ್ಯವಿಲ್ಲ. ಪ್ರಕೃತಿಯ ಮಧ್ಯೆ ನಡುವೆ ದಿನಕ್ಕೆ 10 ರಿಂದ 20 ನಿಮಿಷಗಳನ್ನು ಕಳೆಯುವುದರಿಂದ ಒಬ್ಬರ ಮಾನಸಿಕ ಸ್ಥಿತಿಯನ್ನು ಗಮನಾರ್ಹವಾಗಿ ಸುಧಾರಿಸಬಹುದು ಎಂದು ಅಧ್ಯಯನ ತಿಳಿಸುತ್ತದೆ. ಹಸಿರು ವಾತಾವರಣದಲ್ಲಿ ಸ್ವಲ್ಪ ಸಮಯ ಕಳೆಯಲು ಮನೆಯಿಂದ ಹೊರಗೆ ಹೆಜ್ಜೆ ಹಾಕುವುದರಿಂದ ಒತ್ತಡಕ್ಕೆ ಕಾರಣವಾಗುವ ಹಾರ್ಮೋನ್ 'ಕಾರ್ಟಿಸೋಲ್' ಮಟ್ಟವನ್ನು ಕಡಿಮೆ ಮಾಡುತ್ತದೆ. ಹೃದಯ ಬಡಿತವನ್ನು ನಿಯಂತ್ರಣಕ್ಕೆ ತರಲು ಸಹಾಯ ಮಾಡುತ್ತದೆ. ಪ್ರಕೃತಿಯಲ್ಲಿ ಒಂದು ಸಣ್ಣ ವಾಕಿಂಗ್ ಕೂಡ ಸ್ಮರಣಶಕ್ತಿ ಹಾಗೂ ಏಕಾಗ್ರತೆಯನ್ನು ಸುಮಾರು ಶೇ.20ರಷ್ಟು ಹೆಚ್ಚಿಸುತ್ತದೆ ಎಂದು ಸಂಶೋಧನೆ ಹೇಳುತ್ತದೆ.

**ನಿಮಗಾಗಿ ವಾರಕ್ಕೆ 120 ನಿಮಿಷ ಮೀಸಲಿಡಬೇಕು:** ವಾರಕ್ಕೆ ಕನಿಷ್ಠ ಎರಡು ಗಂಟೆಗಳ ಕಾಲ ಪ್ರಕೃತಿಯ ಮಡಲಿನಲ್ಲಿ ಸಮಯ ಕಳೆಯುವುದಕ್ಕೆ ಮೀಸಲಿಡುವ ವ್ಯಕ್ತಿಗಳು ಉತ್ತಮ ದೈಹಿಕ, ಮಾನಸಿಕ ಆರೋಗ್ಯವನ್ನು ಆನಂದಿಸುತ್ತಾರೆ ಎಂದು ಸಂಶೋಧನೆ ಬಹಿರಂಗಪಡಿಸುತ್ತದೆ. ಇದನ್ನು ಸಾಧಿಸಲು, ದಟ್ಟವಾದ ಕಾಡುಗಳು ಅಥವಾ ಪರ್ವತ ಪ್ರದೇಶಗಳಿಗೆ ಪ್ರಯಾಣಿಸುವ ಅಗತ್ಯವಿಲ್ಲ. ನಮಗೆ ಲಭ್ಯವಿರುವ ಉದ್ಯಾನಗಳು ಹಾಗೂ ಮರಗಳಿಂದ ಕೂಡಿದ ಬೀದಿಗಳು ನಿಧಾನವಾಗಿ ವಾಕ್ ಮಾಡಬಹುದು. ಅದಕ್ಕೆ ಸಮಾನವಾಗಿ ಪ್ರಯೋಜನಕಾರಿ ಫಲಿತಾಂಶಗಳನ್ನು ಲಭಿಸುತ್ತದೆ ಎಂದು ಸಂಶೋಧಕರು ತಿಳಿಸುತ್ತಾರೆ.ಜನರು ಮಾನಸಿಕ ಒತ್ತಡವನ್ನು

# ರೈತರಿಗೆ ಗುಣಮಟ್ಟದ ಬೀಜ ಒದಗಿಸಿ: ಶಾಸಕ ಪ್ರಭು ಚವ್ಹಾಣ

## ರೈತ ಸಂಪರ್ಕ ಕೇಂದ್ರಗಳು ರೈತರ ಸ್ನೇಹಿಯಾಗಲಿ | ಬಿತ್ತನೆ ಬೀಜ ವಿತರಣೆಗೆ ಶಾಸಕ ಪ್ರಭು ಚವ್ಹಾಣ ಚಾಲನೆ

• **ಉದಯವಾಹಿನಿ ಔರಾದ್:**

2026-27ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಔರಾದ(ಬಿ) ರೈತ ಸಂಪರ್ಕ ಕೇಂದ್ರದಲ್ಲಿ ರಂದು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ವರ್ಷ ಮುಂಗಾರು ಶೀಘ್ರ ಬರುವ ಮುನ್ಸೂಚನೆ ಇರುವುದರಿಂದ ರೈತರಿಗೆ ಬಿತ್ತನೆ ಸಮಯಕ್ಕೆ ಬೀಜಗಳು ಲಭ್ಯವಾಗಬೇಕು ಎನ್ನುವ ಉದ್ದೇಶದಿಂದ ಮುಂಚಿತವಾಗಿ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಲಾಗುತ್ತಿದೆ. ಮುಂಗಾರು ಹಂಗಾಮಿಗೆ ಅಗತ್ಯವಿರುವ ವಿವಿಧ ಬೆಳೆಗಳ ಬೀಜಗಳನ್ನು ಕೃಷಿ ಇಲಾಖೆಯ ಮೂಲಕ ವಿತರಿಸಲಾಗುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ನಿಗದಿತ ದರಕ್ಕಿಂತ ಹೆಚ್ಚು ಬೆಲೆಗೆ ಮಾರಾಟ ಮಾಡಬಾರದು. ಈ ಕುರಿತು ಅಧಿಕಾರಿಗಳು ಹಾಗೂ ಮಾರಾಟಗಾರರ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು. ರೈತರ ಸಂಪರ್ಕ ಕೇಂದ್ರಗಳಲ್ಲಾಗಲಿ, ಖಾಸಗಿ ಕೇಂದ್ರಗಳಲ್ಲಾಗಲಿ ಯಾವುದೇ ಕಾರಣಕ್ಕೂ ರೈತರಿಂದ ಹೆಚ್ಚುವರಿ ಹಣ ವಸೂಲಿ ಮಾಡುವಂತಿಲ್ಲ. ಇಂತಹ ಘಟನೆಗಳು ಎಲ್ಲಿಯಾದರೂ ನಡೆದರೆ ಅಂಥವರ ವಿರುದ್ಧ


ಉದಯವಾಹಿನಿ ಚಿತ್ರ

ಮುಲಾಜಿಲ್ಲದೇ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದರು. ಬಿತ್ತನೆ ಬೀಜ ಅಥವಾ ರಸಗೊಬ್ಬರ ನೀಡಿದ ನಂತರ ರೈತರಿಗೆ ಕಡ್ಡಾಯವಾಗಿ ರಸೀದಿ ನೀಡಬೇಕು ಎಂದು ನಿರ್ದೇಶನ ನೀಡಿದರು.

ಪ್ರತಿ ವರ್ಷ ಇಲ್ಲಿಂದ ಮಹಾರಾಷ್ಟ್ರ ಹಾಗೂ ತೆಲಂಗಾಣ ರಾಜ್ಯಗಳಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ಅಕ್ರಮ ಸಾಗಾಟ ನಡೆಯುತ್ತಿರುವುದು ಗಮನಕ್ಕೆ ಬಂದಿದೆ. ಗಡಿ ಭಾಗಗಳಲ್ಲಿ ಅಧಿಕಾರಿಗಳು ವಿಶೇಷ ತಪಾಸಣೆ ನಡೆಸಿ, ಅಕ್ರಮ ಸಾಗಾಟವನ್ನು ಸಂಪೂರ್ಣವಾಗಿ ತಡೆಗಟ್ಟಬೇಕು. ನಮ್ಮ ರೈತರಿಗೆ ಬಂದ ಬಿತ್ತನೆ ಬೀಜ, ರಸಗೊಬ್ಬರ ಅನ್ಯರ ಪಾಲಾಗಬಾರದು. ನಮ್ಮ ರೈತರಿಗೆ ಯಾವುದೇ ರೀತಿಯ ಅನ್ಯಾಯವಾಗಬಾರದು ಎಂದು ಖಡಕ್ ಸೂಚನೆ ನೀಡಿದರು.

ಔರಾದ(ಬಿ) ಕ್ಷೇತ್ರದಲ್ಲಿ ಹೆಚ್ಚಾಗಿ ಬೆಳೆಸಲಾಗುವ ಸೋಯಾ ಬೀನ್ ಹಾಗೂ ಮತ್ತಿತರೆ ಬೆಳೆಗಳ ಬಿತ್ತನೆ ಬೀಜಗಳನ್ನು ಸಮರ್ಪಕವಾಗಿ ಪೂರೈಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದ್ದೇನೆ. ಕ್ಷೇತ್ರದ ಪ್ರತಿಯೊಬ್ಬ ರೈತರಿಗೂ ಅಗತ್ಯ ಪ್ರಮಾಣದ ಬೀಜಗಳು ಸಿಗುವಂತೆ ಸಮರ್ಪಕ ವ್ಯವಸ್ಥೆ ಮಾಡಬೇಕು. ಯಾವುದೇ ರೈತ ಬೀಜಕ್ಕಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ಎಲ್ಲಾ ಗ್ರಾಮಗಳಲ್ಲಿ ಕಡ್ಡಾಯವಾಗಿ ಡೊಂಗೂರ ಸಾರಿಸಿ ಬಿತ್ತನೆ ಬೀಜ ವಿತರಿಸುವ ದಿನಾಂಕದ ಬಗ್ಗೆ ತಿಳಿಸಬೇಕು. ರೈತ ಸಂಪರ್ಕ ಕೇಂದ್ರಗಳು ರೈತರ ಸ್ನೇಹಿಯಾಗಿ ಕೆಲಸ ಮಾಡಬೇಕು. ರೈತರಿಗೆ ಯಾವುದೇ ರೀತಿಯ ಅನ್ಯಾಯವಾದರೆ ಸುಮ್ಮನಿರುವುದಿಲ್ಲ. ತಪ್ಪಿತಸ್ಥರು ಯಾರೇ ಇರಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಸಿದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಧೂಳಪ್ಪಾ ಮಾನೂರೆ ಮಾತನಾಡಿ ಎಲ್ಲಾ ರೈತರು ಒಂದೇ ಬೆಳೆಗೆ ಮೊರೆ ಹೋಗದೆ ಬೇರೆ-ಬೇರೆ ಬೆಳೆಗಳನ್ನು ಬಿತ್ತನೆ ಮಾಡಿದರೆ ಆರ್ಥಿಕ ಸಂಕಷ್ಟದಿಂದ ತಪ್ಪಿಸಿಕೊಳ್ಳಬಹುದು. ಹಾಗೆಯೇ 80 ಎಂ.ಎಂ ಮಳೆಯಾದ ನಂತರವೇ ಸೋಯಾಬೀನ್ ಬಿತ್ತನೆ ಮಾಡಬೇಕು. ದೊಡ್ಡ ಟ್ರ್ಯಾಕ್ಟರ್ ಗಳಿಂದ ಹೆಚ್ಚಿನ ಆಳಕ್ಕೆ ಬಿತ್ತನೆ ಮಾಡುವುದರಿಂದ ಮೊಳಕೆ ಒಡೆಯುವುದು ಕಷ್ಟ. ಹಾಗಾಗಿ ರೈತರು ಅಗತ್ಯ ಮುನ್ನೆಚ್ಚರಿಕೆಯೊಂದಿಗೆ ಬಿತ್ತನೆ ಕೈಗೊಳ್ಳಬೇಕು. ಎಲ್ಲಾ ಬೆಳೆಗಳಿಗೂ ತಪ್ಪದೇ ವಿಮೆ ಮಾಡಿಸಬೇಕು ಎಂದು ರೈತರಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕೃಷಿಕ ಸಮಾಜದ ಅಧ್ಯಕ್ಷ ಸಂತೋಷ ಹಜಾರೆ, ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಕೃಷಿಕ ಸಮಾಜದ ಸದಸ್ಯ ಗೋವಿಂದರಾವ ಇಂಗಳೆ, ಸಚಿನ ರಾಠೋಡ, ಸಂಜು ವಡೆಯಾರ್ ಸೇರಿದಂತೆ ಕೃಷಿ ಇಲಾಖೆಯ ಅಧಿಕಾರಿಗಳು, ರೈತ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ನಂತರ ಭಂಡಾರಕುಮಟಾ ರೈತ ಸಂಪರ್ಕ ಕೇಂದ್ರದಲ್ಲಿ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

> ಸೋಯಾಬೀನ್ 36,100 ಕ್ವಿಂಟಾಲ್ ಬೇಡಿಕೆಯ ಪೈಕಿ 31,218 ಕ್ವಿಂಟಾಲ್ ಬಂದಿದೆ. ಹೆಸರು 300 ಕ್ವಿಂಟಾಲ್ ಪೈಕಿ 220 ಕ್ವಿಂಟಾಲ್ ಬಂದಿದೆ. ಹೆಸರು 100 ಕ್ವಿಂಟಾಲ್ ಪೈಕಿ 25 ಕ್ವಿಂಟಾಲ್ ಹಾಗೂ 50 ಕ್ವಿಂಟಾಲ್ ಪೈಕಿ 13 ಕ್ವಿಂಟಾಲ್ ಬಂದಿದೆ. ಉಳಿದ ಎಲ್ಲಾ ಬಿತ್ತನೆ ಬೀಜಗಳು ಅಗತ್ಯಕ್ಕೆ ಅನುಗುಣವಾಗಿ ದಾಸ್ತಾನು ಮಾಡಿಕೊಳ್ಳಲಾಗಿದೆ. ರೈತರು ಆತಂಕಪಡಬೇಕಿಲ್ಲ ತಮಗೆ ತಿಳಿಸಿದ ದಿನಾಂಕದಂದು ಬಿತ್ತನೆ ಬೀಜ ಪಡೆಯಬೇಕು.
>
> -ಧೂಳಪ್ಪಾ ಮಾನೂರೆ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ

> ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ದರದ ಪಟ್ಟಿಯನ್ನು ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ಸ್ಪಷ್ಟವಾಗಿ ಕಾಣುವಂತೆ ಕಡ್ಡಾಯವಾಗಿ ಪ್ರದರ್ಶಿಸಬೇಕು. ಯಾವುದೇ ರೈತರಿಗೆ ದರದ ಬಗ್ಗೆ ಗೊಂದಲ ಅಥವಾ ಅನ್ಯಾಯವಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ರೈತರಿಗೆ ಪೂರೈಸುವ ಬಿತ್ತನೆ ಬೀಜಗಳು ಉತ್ತಮ ಗುಣಮಟ್ಟದಿಂದ ಕೂಡಿರಬೇಕು. ಈ ಬಗ್ಗೆ ಅಧಿಕಾರಿಗಳು ರೈತರಿಗೆ ಕೊಡುವ ಮುನ್ನ ಪರಿಶೀಲಿಸಬೇಕು. ಈ ವಿಷಯದಲ್ಲಿ ಯಾವುದೇ ರೀತಿಯ ದೂರುಗಳಿಗೆ ಅವಕಾಶ ಕೊಟ್ಟಲ್ಲಿ ಸುಮ್ಮನಿರುವುದಿಲ್ಲ.
>
> -ಪ್ರಭು ಚವ್ಹಾಣ ಶಾಸಕರು ಔರಾದ್

## ಮುಖ್ಯಮಂತ್ರಿ ಸಿದ್ಧರಾಮಯ್ಯರವರಿಗೆ ಮನವಿ

• **ಉದಯವಾಹಿನಿ ವಿಜಯಪುರ :**

ಅಖಿಲ ಕರ್ನಾಟಕ ಬೆಳೆ ಸುಕ್ಷೇದಾರರ ಸಂಘಟನೆಯ ತಿಕೋಟಾ ತಾಲ್ಲೂಕಾ ಘಟಕದ ಪದಾಧಿಕಾರಿಗಳೆಲ್ಲರೂ ಸೇರಿ 25/05/2026 ರ ಸೋಮವಾರ ದಿನ ಕೃ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ತಿಕೋಟಾ ತಾಲ್ಲೂಕಿನ ತಹಶೀಲ್ದಾರ್ ಇವರ ಮುಖಾಂತರ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಇವರಿಗೆ ಮನವಿ ಸಲ್ಲಿಸಿ ಮಾತನಾಡುತ್ತಾ ಸರಿ ಸುಮಾರು 8-10 ವರ್ಗಗಳಿಂದ ತಿಕೋಟಾ ತಾಲ್ಲೂಕಿನಲ್ಲಿ 56 ಜನ ಬೆಳೆ ಸಮೀಕ್ಷೆದಾರರಾಗಿ ಕೆಲಸ ಮಾಡುತ್ತಾ ಬಂದಿರುವ ನಮಗೆ ಹಂಗಾಮುವಾರು ನಮ್ಮನ್ನು ಕೆಲಸಕ್ಕೆ ನೇಮಕ ಮಾಡಿಕೊಳ್ಳದೇನೆ ಕನಿಷ್ಠ ವೇತನದ ನೀತಿ ಅಡಿಯಲ್ಲಿ ದಿನಗೂಲಿ ಕರ್ಮಿಕರನ್ನಾಗಿ ನೇಮಿಸಿಕೊಂಡು ವರ್ಷದ 12 ತಿಂಗಳುಗಳ ಕಾಲ ಕೆಲಸವನ್ನು ನೀಡುವಂತೆ ಆಗ್ರಸಲಾತು.

ಈ ವೇಳೆ ತಾಲ್ಲೂಕಾ ಅಧ್ಯಕ್ಷರಾದ ಭಾಗೇಶ ಮಲಕಪ್ಪ ರಾಮತೀರ್ಥ ಅವರು ಮನ ಪತ್ರವನ್ನು ಸಲ್ಲಿಸಿದರು. ಈ ಒಂದು ಕಾರ್ಯಕ್ರಮಕೆ ವಿಶೇಶ ಅತಿಥಿಯಾಗಿ ಆಗುಸಿದ ಸಂಘಟನೆಯ ರಾಜ್ಯ ಅಧ್ಯಕ್ಷರಾದ ಭೀಮಪ್ಪ ಲಕ್ಷ್ಮಣ ತಳವಾರ ಅವರು ಕೃ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳ ಜೊತೆ ಮಾತನಾಡಿ ಮಹಾ ಸ್ವಾಮಿ ಕರ್ನಾಟಕ ರಾಜ್ಯದಲ್ಲಿ ಬೆಳೆ ಸುಕ್ಷೇದಾರರಾದ ನಾವು 23,720 ಜನ ಕೆಲಸಗಾರರು ಕಾರ್ಯ ನಿರ್ವಸುತ್ತಿದ್ದೇವೆ. ನಮ್ಮ ಕೆಲಸಕ್ಕೆ ಸರ್ಕಾರ ನೀಡುವ


ಉದಯವಾಹಿನಿ ಚಿತ್ರ

ಸಂಬಳ ಯಾವ ಧದಲ್ಲೂ ಸರಿಯಾದುದಲ್ಲ, ಯಾಕೆಂದರೆ ದರ ಪರಿಶ್ಕರಣೆ ಅನ್ನೋದು ಎಲ್ಲದರಲ್ಲೂ ಮಾಡಿರುವಿರಿ ಆದರೆ ನಮಗೇಕೆ ಮಲತಾಯಿ ಧೋರಣೆ ಮಾಡುತ್ತಿರುರಿ ಎಂದು ಮಾತನಾಡಿದರು.

ಮನಯನ್ನು ಸ್ವೀಕರಿಸಿದ ಕೃ ಅಧಿಕಾರಿಗಳು ಈ ಒಂದು ಪ್ರಶ್ನೆಗೆ ಹೌದು ನೀವು ಪಡುತ್ತಿರುವ ಕಷ್ಟ ಕಾರ್ಪಣ್ಯಗಳ ಬಗ್ಗೆ ನಮಗೂ ಕೂಡಾ ಕನಿಕರದೆ, ನೀವುಗಳು ರೈತರ ಮತ್ತು ಸರ್ಕಾರದ ಮಧ್ಯೆ ಕೊಂಡಿಗಳಾಗಿ ಕೆಲಸ ಮಾಡುತ್ತಿರುರಿ, ನಿಮ್ಮ ಮನಯನ್ನು ನಾವು ಮುಂದೆ ಕಳಿಸುತ್ತೇವೆ ಎಂದು ಧನಾತ್ಮಕವಾಗಿ ಸಹಕರಿಸಿದರು. ಈ ಸಂದರ್ಭದಲ್ಲಿ ಅರುಣಕುಮಾರ ತಳವಾರ, ಬಂದೇ ನವಾಜ್ ಮುಲ್ಲಾ,ಚಂದನ ಕೋಳಿ, ನಾಗರಾಜ್ ಕೋರೆ,ಶಬ್ಬೀರ್ ಅತ್ತಾರ ಮತ್ತಿತರರು ಉಪಸ್ಥಿತರಿದ್ದರು.

## ಸ್ವಚ್ಛತೆಯಿಂದ ರೋಗಗಳು ದೂರ: ಕಸ ವಿಂಗಡಿಸಿ ಗಾಡಿಗೆ ಹಾಕಲು ಕರೆ

• **ಉದಯವಾಹಿನಿ ಚಿತ್ರದುರ್ಗ :**

ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಸಮುದಾಯದ ಸಹಭಾಗಿತ್ವ ಬಹು ಮುಖ್ಯವಾಗಿದೆ. ಸಾರ್ವಜನಿಕರು ಕಸವನ್ನು ಎಲ್ಲೆಂದರಲ್ಲಿ ಎಸೆಯದೆ, ಹಸಿ ಕಸ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ವಿಂಗಡಿಸಿ ಕಸದ ಗಾಡಿಗೆ ನೀಡುವ ಮೂಲಕ ಸ್ವಚ್ಛ ಪರಿಸರ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಬಿ. ಮೂಗಪ್ಪ ಅವರು ಕರೆ ನೀಡಿದರು. ಇಲ್ಲಿನ ಪ್ರಶಾಂತನಗರದಲ್ಲಿ ಹಮ್ಮಿಕೊಳ್ಳಲಾಗಿದ್ದ ಸ್ವಚ್ಛತಾ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಸವನ್ನು ಎಲ್ಲೆಂದರಲ್ಲಿ ಹಾಕಿದರೆ ಅದರಲ್ಲಿ ಟಾಕ್ಸಿಕ್ ಅಂಶ ವಿಷಾಣು ಉತ್ಪತ್ತಿಯಾಗಿ, ದುರ್ವಾಸನೆ ಸೂಸುವುದರ ಜೊತೆಗೆ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚಿರುತ್ತದೆ. ನಗರಸಭೆಯಿಂದ ಪ್ರತಿದಿನ ಮನೆ ಬಾಗಿಲಿಗೆ ಕಸದ ಗಾಡಿ ಬರುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದು ಮೂಗಪ್ಪ ತಿಳಿಸಿದರು.

ಎಲ್ಲೆಲ್ಲೂ ಬಂದಿದೆ ಪ್ಲಾಸ್ಟಿಕ್ ಬಳಕೆ, ಹದಗೆಡುತ್ತಿದೆ ಪರಿಸರ ಕೊಳಚೆ ಎಂದು ಕಳವಳ ವ್ಯಕ್ತಪಡಿಸಿದ ಅವರು, ಪ್ಲಾಸ್ಟಿಕ್ ನೂರು ವರ್ಷವಾದರೂ ಕೊಳೆಯುವುದಿಲ್ಲ. ಚರಂಡಿಗಳಲ್ಲಿ ಪ್ಲಾಸ್ಟಿಕ್ ಹಾಕುವುದರಿಂದ ನೀರು ಸರಾಗವಾಗಿ ಹರಿಯದೆ ನಿಂತು, ಪರಿಸರ ಕೊಳಚೆಯಾಗುತ್ತಿದೆ. ಆದ್ದರಿಂದ ಸಾರ್ವಜನಿಕರು ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕಿ, ಕಾಟನ್ ಬಟ್ಟೆಯ ಚೀಲಗಳನ್ನು ಬಳಸಬೇಕು ಎಂದು ಮನವಿ ಮಾಡಿದರು.ಪರಿಸರ ಇಂಜಿನಿಯರ್ ಜೆ. ಜಾಫರ್


ಉದಯವಾಹಿನಿ ಚಿತ್ರ

ಅವರು 'ಘನ ತ್ಯಾಜ್ಯ ನಿರ್ವಹಣೆ 2026' ರ ಕುರಿತು ಮಾಹಿತಿ ನೀಡಿದರು. ನಾಲ್ಕು ವಿಭಿನ್ನ ಕಲರ್ ಬಕೆಟ್‌ಗಳನ್ನು ಪ್ರದರ್ಶಿಸಿದ ಅವರು, ಕಸವನ್ನು ಹೇಗೆ ವಿಂಗಡಿಸಬೇಕು ಮತ್ತು ಯಾವ ಬಕೆಟ್‌ಗೆ ಯಾವ ಕಸವನ್ನು ಹಾಕಿ ಕಸದ ಗಾಡಿಗೆ ನೀಡಬೇಕು ಎಂಬುದನ್ನು ಸಾರ್ವಜನಿಕರಿಗೆ ಪ್ರಾತ್ಯಕ್ಷಿಕೆ ಮೂಲಕ ವಿವರಿಸಿದರು.


**ಜಾಗೃತಿ ಜಾಥಾ:** ಬಳಿಕ ಪ್ರಶಾಂತನಗರದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಾಗೃತಿ ಜಾಥಾದಲ್ಲಿ 'ನಮ್ಮ ಆರೋಗ್ಯ ನಮ್ಮ ಕೈಯಲ್ಲಿದೆ', 'ಕಸ ವಿಂಗಡಣೆ ನಮ್ಮೆಲ್ಲರ ಜವಾಬ್ದಾರಿ', 'ಕಸ ವಿಂಗಡಿಸಿ ಕಸದ ಗಾಡಿಗೆ ಹಾಕಿ', ರೋಗಮುಕ್ತ ಸಮಾಜಕ್ಕೆ ಕೈಜೋಡಿಸಿ ಎಂಬ ಘೋಷಣೆಗಳ ಮೂಲಕ ಸಮುದಾಯದಲ್ಲಿ ಅರಿವು ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಟಿ. ಶ್ರೀನಿವಾಸಮೂರ್ತಿ, ಹಿರಿಯ ಆರೋಗ್ಯ ನಿರೀಕ್ಷಕರಾದ ರುಕ್ಮಿಣಿ, ಬಾಬುರೆಡ್ಡಿ, ಕಿರಿಯ ಆರೋಗ್ಯ ನಿರೀಕ್ಷಕರಾದ ಜಯಪ್ರಕಾಶ್, ಹೀನ ಕೌಸರ್ ಹಾಗೂ ಕಮ್ಯುನಿಟಿ ಮೊಬಲೈಸರ್ಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

## ಅನಧಿಕೃತ ಜಾನುವಾರು ವಧೆ ಮತ್ತು ಸಾಗಾಟಕ್ಕೆ ಅವಕಾಶವಿಲ್ಲ ?

• **ಉದಯವಾಹಿನಿ ಮಂಗಳೂರು**

ಅನಧಿಕೃತ ಒಂಟೆ/ ಜಾನುವಾರುಗಳ ವಧೆ, ಸಾಗಾಟ ಹಾಗೂ ಅನಧಿಕೃತ ಮಾಂಸ ಮಾರಾಟವನ್ನು ತಡೆಗಟ್ಟಲು ಸೂಕ್ತ ಕ್ರಮವಹಿಸಲು ಜಿಲ್ಲಾಧಿಕಾರಿ ದರ್ಶನ್ ಹೆಚ್.ವಿ ಸೂಚಿಸಿದ್ದಾರೆ. ಅವರು ಮಂಗಳೂರು ಮಹಾನಗರಪಾಲಿಕೆ ಕಚೇರಿ ಸಭಾಂಗಣದಲ್ಲಿ ನಡೆದ ಬಕ್ರೀದ್ ಹಬ್ಬ ಆಚರಣೆ ಸಂದರ್ಭದಲ್ಲಿ ಅನಧಿಕೃತ ಜಾನುವಾರುಗಳ ವಧೆ ಹಾಗೂ ಜಾನುವಾರು ಸಾಗಾಣಿಕೆಯನ್ನು ತಡೆಗಟ್ಟುವ ಕುರಿತು ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಾನುವಾರು ಸಾಗಾಣಿಕೆ ಸಮಯದಲ್ಲಿ ಪರವಾನಗಿಯನ್ನು ಕಡ್ಡಾಯವಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ಪಡೆಯಬೇಕು. ಅನಧಿಕೃತ ಜಾನುವಾರು ಸಾಗಾಣಿಕೆಯನ್ನು ತಡೆಗಟ್ಟಲು ಎಲ್ಲಾ ಚೆಕ್ ಪೋಸ್ಟ್‌ಗಳಲ್ಲಿ ಜಾನುವಾರು ಸಾಗಾಟ ವಾಹನಗಳ ಮೇಲೆ ನಿಗಾ ವಹಿಸಬೇಕು. ಜಾನುವಾರು ಸಾಗಾಣಿಕೆ ಮಾಡುವಾಗ ಅಧಿಕೃತ ದಾಖಲೆಗಳಾದ ಪರವಾನಿಗೆ, ಜಾನುವಾರು ಮಾಲೀಕರ ವಿವರಗಳು, ಕೊಂಡುಕೊಳ್ಳುವ ಮಾಲೀಕರ ವಿವರ, ವಾಹನ



ಉದಯವಾಹಿನಿ ಚಿತ್ರ

ದಾಖಲಾತಿ, ಚಾಲಕರ ವಿವರ ಸೇರಿದಂತೆ ದಾಖಲೆಗಳನ್ನು ಇಟ್ಟುಕೊಳ್ಳುವುದು ಕಡ್ಡಾಯವಾಗಿರುತ್ತದೆ. ಈ ದಾಖಲಾತಿಗಳನ್ನು ಕಡ್ಡಾಯವಾಗಿ ಪರಿಶೀಲನೆ ನಡೆಸುವಂತೆ ಅವರು ಹೇಳಿದರು. ಯಾವುದೇ ಕಟ್ಟಡಗಳಲ್ಲಿ ಅನಧಿಕೃತ ಪ್ರಾಣಿ ವಧೆ ಕಂಡುಬಂದಲ್ಲಿ ಅಂತಹ ಕಟ್ಟಡಗಳನ್ನು ನಿಯಮಾನುಸಾರ ಮುಟ್ಟುಗೋಲು ಹಾಕಬೇಕು. ಅಕ್ರಮವಾಗಿ ಜಾನುವಾರುಗಳನ್ನು ಸಾಗಿಸುವುದು ಮತ್ತು ಹತ್ಯೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾ ಸಮಿತಿಯನ್ನು ರಚಿಸಲಾಗಿದ್ದು, ಈ ನಿಟ್ಟಿನಲ್ಲಿ ಸಮಿತಿ ಸದಸ್ಯರು ಕ್ರಮ ವಹಿಸಬೇಕು. ಸಂಬಂಧಿಸಿದ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.

## 5 ವರ್ಷದೊಳಗಿನ ಮಕ್ಕಳಿಗೆ ಪೊಲಿಯೋ ಲಸಿಕೆ ಕಡ್ಡಾಯ: ಅಪರ ಜಿಲ್ಲಾಧಿಕಾರಿ

• **ಉದಯವಾಹಿನಿ ಮಂಗಳೂರು**

ಜೂನ್ 28 ರಿಂದ ಜುಲೈ 1 ರವರೆಗೆ ರಾಷ್ಟ್ರೀಯ ಪಲ್ಸ್ ಪೊ?ಲಿಯೋ ಲಸಿಕಾ ಕಾರ್ಯಕ್ರಮವು ನಡೆಯಲಿರುವುದರಿಂದ ಜಿಲ್ಲೆಯಲ್ಲಿ 5 ವರ್ಷದೊಳಗಿನ ಮಕ್ಕಳಿಗೆ ಪೊಲಿಯೋ ಲಸಿಕೆ ಹಾಕಿಸಲು ಕ್ರಮವಹಿಸಬೇಕು.

ಈ ನಿಟ್ಟಿನಲ್ಲಿ ಎಲ್ಲಾ ಇಲಾಖೆಗಳು ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ರಾಜು ಕೆ ಸೂಚಿಸಿದ್ದಾರೆ. ಅವರು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೊಲಿಯೋ ಲಸಿಕಾ ಕಾರ್ಯಕ್ರಮದ ಜಿಲ್ಲಾ ಮಟ್ಟದ ಚಾಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು, ಮೇಲ್ವಿಚಾರಕರು ಲಸಿಕಾ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಮನೆಯಲ್ಲಿರುವ ನವಜಾತ ಶಿಶುಗಳನ್ನು ಗುರುತಿಸಿ ಅಂತಹ ಮಕ್ಕಳಿಗೆ


ಉದಯವಾಹಿನಿ ಚಿತ್ರ

ಕಡ್ಡಾಯವಾಗಿ ಪೊಲಿಯೋ ಲಸಿಕೆಯನ್ನು ನೀಡಬೇಕು. ತಾಯಂದಿರ ಸಭೆಗಳಲ್ಲಿ ಪಲ್ಸ್ ಪೊಲಿಯೋ ಲಸಿಕಾ ಕಾರ್ಯಕ್ರಮದ ಅರಿವು ಮೂಡಿಸಬೇಕು ಎಂದು ಅವರು ಹೇಳಿದರು. ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಲಸಿಕಾ ದಿನ ಮತ್ತು ಸ್ಥಳಗಳ ಮಾಹಿತಿಯನ್ನು ಪ್ರಚಾರ ಮಾಡಬೇಕು. ಎಲ್ಲಾ ಶಾಲೆಗಳು ಪಲ್ಸ್ ಪೊಲಿಯೋ ಕಾರ್ಯಕ್ರಮದ ಬಗ್ಗೆ ಪೊಲಿಯೋ ದಿನದ ಮುಂಚಿತವಾಗಿ ಜಾಥಾ ಮಾಡಿ ಜನರಲ್ಲಿ ಜಾಗೃತಿ ಮೂಡಿಸಬೇಕು. ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳು, ಗಣಿಗಾರಿಕೆ ಕಾರ್ಮಿಕರ ಮಕ್ಕಳು, ಹಾಗೂ ಇತರೇ ವಲಸೆ ಪ್ರದೇಶಗಳಲ್ಲಿ 0-5 ವರ್ಷದೊಳಗಿನ ಮಕ್ಕಳನ್ನು ಗುರುತಿಸಿ, ಆದ್ಯತೆ ನೀಡಿ ಲಸಿಕೆ ಹಾಕಿಸುವಂತೆ ಕ್ರಮವಹಿಸಬೇಕು ಎಂದು ಅವರು ಹೇಳಿದರು.

ಛಿಠಣಜ : ಕಾರ್ಯಕ್ರಮದ ಮೊದಲನೇ ದಿನ ಪೊಲಿಯೋ ಬೂತ್‌ಗಳಲ್ಲಿ ಹಾಗೂ 2 ದಿನ ಗ್ರಾಮಾಂತರ ಮತ್ತು 3 ದಿನ ನಗರ ಪ್ರದೇಶಗಳಲ್ಲಿ ಮನೆಮನೆ ಭೇಟಿಯ ಮೂಲಕ 0-5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೊಲಿಯೋ ಲಸಿಕೆ ನೀಡುವಂತೆ ವ್ಯವಸ್ಥೆ ಮಾಡಲಾಗಿದೆ. ಈ ವರ್ಷ 1,40,247 ಮಕ್ಕಳಿಗೆ ಲಸಿಕೆ ನೀಡಲು ಗುರಿ ನಿಗದಿಪಡಿಸಿದೆ ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

## ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರ ಸಭೆ ನಗರದ ಸಮಗ್ರ ಅಭಿವೃದ್ಧಿಗೆ ವೇಗ ನೀಡಲು ಸೂಚನೆ

• **ಉದಯವಾಹಿನಿ ಬಳ್ಳಾರಿ, :**

ನಗರದ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಇನ್ನಷ್ಟು ವೇಗ ನೀಡಬೇಕು ಹಾಗೂ ಸಾರ್ವಜನಿಕರಿಗೆ ಅನುಕೂಲವಾಗುವ ರೀತಿಯಲ್ಲಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರಬೇಕು ಎಂದು ಬಳ್ಳಾರಿ ನಗರ ಶಾಸಕ ಭರತ್ ರೆಡ್ಡಿ ಅಧಿಕಾರಿಗಳಿಗೆ ಸೂಚಿಸಿದರು. ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿಯಲ್ಲಿ ಮಂಗಳವಾರ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಗರದಲ್ಲಿ ನಡೆಯುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಕುರಿತು ಮಾಹಿತಿ ಪಡೆದು ಅಧಿಕಾರಿಗಳೊಂದಿಗೆ ಚರ್ಚಿಸಿದರು. ರಸ್ತೆ ಅಭಿವೃದ್ಧಿ, ಒಳಚರಂಡಿ ವ್ಯವಸ್ಥೆ, ಕುಡಿಯುವ ನೀರಿನ ಸೌಲಭ್ಯ, ಸಾರ್ವಜನಿಕ ಉದ್ಯಾನಗಳು ಹಾಗೂ ನಾಗರಿಕರಿಗೆ ಅಗತ್ಯ ಮೂಲಭೂತ ಸೌಕರ್ಯಗಳ ಕುರಿತು ವಿಶೇಷವಾಗಿ ಪರಿಶೀಲನೆ ನಡೆಸಿದರು. ನಗರದ ವೇಗವಾಗಿ ವಿಸ್ತರಿಸುತ್ತಿರುವ ಪ್ರದೇಶಗಳಿಗೆ ಅನುಗುಣವಾಗಿ ಯೋಜನೆಗಳನ್ನು ರೂಪಿಸಿ, ಜನರಿಗೆ


ಉದಯವಾಹಿನಿ ಚಿತ್ರ

> ನಗರದ ಸೌಂದರ್ಯೀಕರಣ ಹಾಗೂ ಸುಸಜ್ಜಿತ ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಬೇಕೆಂದು ಅಭಿವೃದ್ಧಿ ಕಾಮಗಾರಿಗಳಲ್ಲಿ ಗುಣಮಟ್ಟ ಕಾಪಾಡುವುದು ಅತ್ಯಂತ ಮುಖ್ಯ ಎಂದು ಹೇಳಿದರು. ಸರ್ಕಾರದ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ನಗರವನ್ನು ಮಾದರಿ ನಗರವನ್ನಾಗಿ ರೂಪಿಸುವ ನಿಟ್ಟಿನಲ್ಲಿ ಎಲ್ಲರೂ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.
>
> ಶಾಸಕ ಭರತ್ ರೆಡ್ಡಿ,

ಯಾವುದೇ ತೊಂದರೆ ಆಗದಂತೆ ಕಾಮಗಾರಿಗಳನ್ನು ಸಮಯಕ್ಕೆ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು. ಸಾರ್ವಜನಿಕರಿಂದ ಬರುತ್ತಿರುವ ದೂರುಗಳು ಹಾಗೂ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸಭೆಯಲ್ಲಿ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು, ನಾಮ ನಿರ್ದೇಶಿತ ಸದಸ್ಯರಾದ ಥಿಯೇಟರ್ ಶಿವು, ರಾಕಿ, ಭರತ್, ಆಯುಕ್ತ ಖಲೀಲಸಾಬ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ದುಷ್ಕೃತ್ಯಕ್ಕೆ ರಾಜ್ಯ ಸರ್ಕಾರವೇ ಕಾರಣ

• **ಉದಯವಾಹಿನಿ: ಕಾರವಾರ:**

ಭಟ್ಕಳದ ಮುರಿನಕಟ್ಟೆ ಧ್ವಂಸ ಪ್ರಕರಣಕ್ಕೆ ಸಂಬಂಧಿಸಿದಂತೆ, ಭಟ್ಕಳದಲ್ಲಿ ನಡೆದಿರುವ ಈ ದುಷ್ಕೃತ್ಯಕ್ಕೆ ರಾಜ್ಯ ಸರ್ಕಾರವೇ ಕಾರಣ ಎಂದು ಬಿಜೆಪಿ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಆರೋಪಿಸಿದ್ದಾರೆ.


ಉದಯವಾಹಿನಿ ಚಿತ್ರ

ಇಂದು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿ, ರಾಜ್ಯ ಸರ್ಕಾರವು ಅಲ್ಪಸಂಖ್ಯಾತರ ಮೇಲಿನ ಪ್ರಕರಣಗಳನ್ನು ಹಿಂಪಡೆದಿರುವುದು ಇಂತಹ ಕೃತ್ಯಗಳಿಗೆ ಪುಷ್ಟಿ ಕೊಟ್ಟಂತಾಗಿದೆ ಎಂದು ಕಾಗೇರಿ ದೂರಿದರು. ನಾವು ಏನು ಮಾಡಿದರೂ ನಡೆಯುತ್ತದೆ ಎಂಬ ಭ್ರಮೆಯಲ್ಲಿ ಕೆಲವರು ಇದ್ದಾರೆ. ಕೃತ್ಯ ತಡೆಯಲು ಹೋದ ಪೊಲೀಸರ ಮೇಲೆಯೇ ಹಲ್ಲೆಗೆ ಮುಂದಾಗುತ್ತಾರೆ ಎಂದರೆ ಇದರ ಅರ್ಥ ಏನು ಎಂದು ಪ್ರಶ್ನಿಸಿದರು.

## ಕೃಷ್ಣಾ ನೀರಿಗೆ 'ಮಹಾರಾಷ್ಟ್ರ' ಮೊಂಡಾಟ:ಕುಡಿವ ನೀರಿಗೆ ಹಾಹಾಕಾರ

• **ಉದಯವಾಹಿನಿ ಬಾಗಲಕೋಟೆ:**

ಉತ್ತರ ಕರ್ನಾಟಕದ ಜೀವನದಿ ಕೃಷ್ಣಾ ನದಿಗೆ ನೀರು ಬಿಡಿ ಎಂಬ ರಾಜ್ಯದ ಮನವಿಗೆ ಮಹಾರಾಷ್ಟ್ರದಿಂದ ಸ್ಪಂದನೆ ದೊರೆತಿಲ್ಲ. ಹೌದು, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿ ಕುಡಿವ ನೀರಿನ ತೀವ್ರ ಹಾಹಾಕಾರದ ಹಿನ್ನೆಲೆಯಲ್ಲಿ ಹಿಪ್ಪರಗಿ ಬ್ಯಾರೇಜ್‌ಗೆ ಕೊಯ್ನಾ ಜಲಾಶಯದಿಂದ 2 ಟಿಎಂಸಿ ನೀರು ಪೂರೈಸಿ ಎಂಬ ಬೇಡಿಕೆಗೆ ಮಹಾರಾಷ್ಟ್ರ ರಾಜ್ಯದಿಂದ ಸಕಾರಾತ್ಮಕ ಉತ್ತರ ದೊರೆತಿಲ್ಲ. ಬಿರು ಬೇಸಿಗೆಯಿಂದ ಹಿಪ್ಪರಗಿ ಬ್ಯಾರೇಜ್‌ನಲ್ಲಿ ನೀರಿನ ಮಟ್ಟ ಡೆಡ್ ಸ್ಟೋರೇಜ್ ತಲುಪಿದೆ.

6 ಟಿಎಂಸಿ ಸಾಮರ್ಥ್ಯದ ಬ್ಯಾರೇಜ್‌ನಲ್ಲಿ ಸದ್ಯ 0.50 ಟಿಎಂಸಿ ನೀರು ಸಂಗ್ರಹವಿದೆ. ಕುಡಿವ ನೀರು ಪೂರೈಸಲು ಸಾಧ್ಯವಾಗದ ಸ್ಥಿತಿಯಿದೆ. ಕೃಷ್ಣೆಯ ಉಗಮ ಸ್ಥಾನ ಮಹಾರಾಷ್ಟ್ರದ ಮಹಾಬಳೇಶ್ವರದಿಂದ ಅಂದಾಜು 140 ಕಿ.ಮೀ.

**ಮಹಾದಿಂದ ಸಕಾರಾತ್ಮಕ ಉತ್ತರವಿಲ್ಲ**


ಉದಯವಾಹಿನಿ ಚಿತ್ರ



ದೂರದಲ್ಲಿರುವ ಕೊಯ್ನಾ ಬಳಿ ನದಿಗೆ ಅಡ್ಡಲಾಗಿ ಅಣೆಕಟ್ಟೆ ನಿರ್ಮಿಸಲಾಗಿದೆ. ಅಲ್ಲಿಂದ ಹರಿದು ಬರುವ ನೀರು ಬೆಳಗಾವಿ, ಬಾಗಲಕೋಟೆ, ವಿಜಯಪುರ ಜಿಲ್ಲೆಯ ಮೂಲಕ ಆಂಧ್ರಪ್ರದೇಶಕ್ಕೆ ಹೋಗುತ್ತದೆ. ಕೊಯ್ನಾ ಡ್ಯಾಂನಿಂದ ಬೇಸಿಗೆಯಲ್ಲಿ ನೀರು ಬಿಡಿಸಿಕೊಳ್ಳುವ ಸಂಪ್ರದಾಯ ದಶಕಗಳಿಂದ ಚಾಲ್ತಿಯಲ್ಲಿದೆ. ಪ್ರತಿ ಟಿಎಂಸಿಗೆ ನಾಲ್ಕು ಲಕ್ಷ ರೂ. ನಂತೆ ಪಾವತಿಸಿ ನೀರು ಬಿಡಿಸಲಾಗುತ್ತದೆ.

ಸದ್ಯ ಕೊಯ್ನಾ ಜಲಾಶಯದಲ್ಲಿ ತೃಪ್ತಿಕರವಾದ ನೀರಿನ ಸಂಗ್ರಹವಿದೆ. ಹೀಗಾಗಿ 2 ಟಿಎಂಸಿ ನೀರು ಪೂರೈಸಲು ಮಹಾರಾಷ್ಟ್ರಕ್ಕೆ ಸಮಸ್ಯೆಯಿಲ್ಲ. ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿ ನೀರಿನ ಕೊರತೆಯಾದಾಗ ಕಾಡಿ ಬೇಡಿದರೂ ಮಹಾರಾಷ್ಟ್ರ ನೀರು ಬಿಡುವುದಿಲ್ಲ. ಕೊಯ್ನಾ ಜಲಾಶಯ ಪಾತ್ರದಲ್ಲಿ ಭಾರಿ ಮಳೆ ಸುರಿದು ಡ್ಯಾಂ ಭರ್ತಿಯಾಗುವ ಹಂತ ತಲುಪುತ್ತಿದ್ದಂತೆ ಏಕಾಏಕಿ ನೀರು ಬಿಡುಗಡೆ ಮಾಡುವ ಪ್ರವೃತ್ತಿ ಪಕ್ಕದ ರಾಜ್ಯಕ್ಕಿದೆ.

ಜಿಲ್ಲೆಯ ಹಿಪ್ಪರಗಿ ಬ್ಯಾರೇಜ್‌ನಲ್ಲಿ 6 ಟಿಎಂಸಿ ನೀರು ಸಂಗ್ರಹವಾಗುತ್ತದೆ.

ಬೆಳಗಾವಿ, ಬಾಗಲಕೋಟೆ ಜಿಲ್ಲೆಗಳ 2 ಲಕ್ಷಕ್ಕಿಂತ ಹೆಚ್ಚಿನ ಜನರಿಗೆ ಕುಡಿವ ನೀರು ಪೂರೈಸಲು ಬ್ಯಾರೇಜ್ ನೀರು ಆಧಾರ. ಅಂದಾಜು 60 ಸಾವಿರ ಎಕರೆ ಪ್ರದೇಶದ ಕೃಷಿಗೆ ಬ್ಯಾರೇಜ್ ನೀರು ಮೂಲ. ಕೆಲ ತಿಂಗಳುಗಳ ಹಿಂದೆ ಬ್ಯಾರೇಜ್‌ನ ಗೇಟ್ ಮುರಿದ ಪರಿಣಾಮ 2 ಟಿಎಂಸಿ ನೀರು ಹರಿದುಹೋಗಿದೆ. ದೊರೆಯದ ಸ್ಪಂದನೆ ನೀರು ಪೂರೈಸುವಂತೆ ಒಂದೂವರೆ ತಿಂಗಳ ಹಿಂದೆ ಜಲಸಂಪನ್ಮೂಲ ಇಲಾಖೆ ಅಪರ ಕಾರ್ಯದರ್ಶಿ ಮಹಾರಾಷ್ಟ್ರ ಸರಕಾರಕ್ಕೆ ಪತ್ರ ಬರೆದು ಮನವಿ ಮಾಡಿದ್ದರು. ರಾಜ್ಯ ಸರಕಾರದ ಪ್ರಧಾನ ಕಾರ್ಯದರ್ಶಿಯೂ ಮಹಾರಾಷ್ಟ್ರ ಸರಕಾರದೊಂದಿಗೆ ಮಾತನಾಡಿದ್ದಾರೆ. ಎರಡೂ ರಾಜ್ಯಗಳ ಮಧ್ಯದ ಸೌಹಾರ್ದ ಒಪ್ಪಂದದ ಪ್ರಕಾರ 2 ಟಿಎಂಸಿ ನೀರು ಬಿಡುಗಡೆಗೆ ಕೋರಲಾಗಿತ್ತು. ಈವರೆಗೂ ಮಹಾರಾಷ್ಟ್ರ ಸರಕಾರದಿಂದ ಕೊಯ್ನಾ ಜಲಾಶಯದಿಂದ ನೀರು ಬಿಡುವ ಬಗ್ಗೆ ಉತ್ತರ ಬಂದಿಲ್ಲ.

## ಮಿನಿ ನ್ಯೂಸ್

### ಕಾನೂನು ಅರಿವು ನೆರವು


ಉದಯವಾಹಿನಿ ಚಿತ್ರ

• **ಉದಯವಾಹಿನಿ ,ವಿಜಯಪುರ**

ವಿಜಯಪುರ ಜಿಲ್ಲೆಯ ಚಡಚಣ ತಾಲ್ಲೂಕಿನ ಬರಡೋಲ ಗ್ರಾಮದ ಶ್ರೀ ಶ್ರೀ ಶ್ರೀ ಜ್ಯೋತಿ ಪ್ರಕಾಶ ಮಹಾರಾಜರ ಜನ್ಮ ಶತಾಬ್ದಿ ನಿಮಿತ್ಯ ಆನಂದ ಆಶ್ರಮದಲ್ಲಿ ವಿಜಯಪುರ ಜಿಲ್ಲಾ ನ್ಯಾಯವಾದಿಗಳ ಸಂಘ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವಿಜಯಪುರ ಹಾಗೂ ಇಂಡಿ ತಾಲ್ಲೂಕು ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಇಂಡಿ ವಕೀಲರ ಸಂಘ ಮತ್ತು ಆನಂದಾಶ್ರಮ ಬರಡೂಲ ಇವರ ಸಂಯುಕ್ತ ಆಶ್ರಯದಲ್ಲಿ ಕಾನೂನು ಅರಿವು ನೆರವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದ ದಿವ್ಯ ಶಾನಿಧ್ಯವನ್ನು ಜ್ಯೋತಿ ಪ್ರಕಾಶ ಮಹಾರಾಜರ ವಹಿಸಿದ್ದರು. ಮತ್ತು ಸಹ ಸಾನಿಧ್ಯವನ್ನು ಆಶ್ರಮದ ಸಾಧು ಮಹಾರಾಜರು ವಹಿಸಿದ್ದರು. ಈ ಕಾರ್ಯಕ್ರಮವನ್ನು ತಾಲ್ಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರು ಹಾಗೂ ಹಿರಿಯ ದಿವಾನಿ ನ್ಯಾಯಾಧೀಶರಾದ ಶ್ರೀ ಕೋಟೆಪ್ಪ ಕಾಂಬಳೆ ಸಾಹೇಬರು ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿದರು. ಈ ಕಾರ್ಯಕ್ರಮದಲ್ಲಿ ಕಿರಿಯ ದಿವಾನಿ ನ್ಯಾಯಾಧೀಶರಾದ ಶ್ರೀ ವಿಕಾಸ ದಳವಾಯಿ ಸಾಹೇಬರು ಪಾಲ್ಗೊಂಡಿದ್ದರು. ಮತ್ತು ವಿಜಯಪುರ ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಶ್ರೀ ಡಿಜಿ ಬಿರಾದರ ಉಪಸ್ಥಿತರಿದ್ದರು. ವಿಶೇಷ ಉಪನ್ಯಾಸಕರಾಗಿ ಶ್ರೀ ಬಿ ಎಂ ಅವತಾಡೆ ವಕೀಲರು ಕಾನೂನು ಅರಿವು ಮತ್ತು ನೆರವಿನ ಕುರಿತು ಉಪನ್ಯಾಸ ನೀಡಿದರು.ಈ ಕಾರ್ಯಕ್ರಮದಲ್ಲಿ ನ್ಯಾಯವಾದಿಗಳಾದ ಶ್ರೀ ಎ ಎ ಗಜಕೋಶ. ಶ್ರೀ ಎಸ್ ಎಸ್ ಪಾಟೀಲ. ಕುಮಾರಿ ಲಕ್ಷ್ಮಿ ಪಾಂಡ್ರೆ. ಶ್ರೀಮತಿ ಎಸ್ ಬಿ ಪಾಟೀಲ. ಎಸ್ ಎಸ್ ಬಿರಾದಾರ. ಎಸ್ಆರ್ ಬಿರಾದಾರ. ವಕೀಲರು ಭಾಗವಹಿಸಿದ್ದರು. ಈ ಕಾರ್ಯಕ್ರಮದ ರೂವಾರಿಯಾದ ಶ್ರೀ ಜಿಎಸ್ ಪವಾರ್ ವಕೀಲರು ವಿಜಯಪುರ ಜಿಲ್ಲಾ ನ್ಯಾಯವಾದಿಗಳ ಸಂಘದ ಮಾಜಿ ಉಪಾಧ್ಯಕ್ಷರು ಸ್ವಾಗತ ಭಾಷಣ ಮತ್ತು ವಂದನಾರ್ಪಣೆ ನೆರವೇರಿಸಿ ಕೊಟ್ಟರು. ಈ ಕಾರ್ಯಕ್ರಮದ ನಿರೂಪಣೆಯನ್ನು ಗ್ರಾಮದ ಶಿಕ್ಷಕರಾದ ಎಸ್ ಕೆ ಮೈತ್ರಿ. ನಿರ್ವಹಿಸಿದರು. ಈ ಕಾರ್ಯಕ್ರಮದಲ್ಲಿ ನೂರಾರು ಮಹಿಳೆಯರು ರೈತರು ಯುವಕರು ಭಾ ಉಪಸ್ಥಿತರಿದ್ದರು.

### ಸಮಾಜದ ಕಟ್ಟಕಡೆಗೆ ವ್ಯಕ್ತಿಗೂ ತಲುಪಬೇಕು

• **ಉದಯವಾಹಿನಿ ಬಸವನಬಾಗೇವಾಡಿ :**

ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ವತಿಯಿಂದ ತಾಲೂಕು ಪಂಚಾಯತಿ ಕಾರ್ಯಾಲಯದಲ್ಲಿ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಜರುಗಿತು. ಸಭೆಯಲ್ಲಿ ಗ್ಯಾರಂಟಿ ಯೋಜನೆಗಳು ಸಮಾಜದ ಕಟ್ಟ ಕಡೆಗೆ ವ್ಯಕ್ತಿಗೂ ಕೂಡ ತಲುಪಬೇಕೆಂದು ಅಧಿಕಾರಿಗಳಿಗೆ ಸೂಚನೆಯನ್ನು ನೀಡಲಾಯಿತು. ಯೋಜನೆಯಿಂದ ಹೊರಗುಳಿದ ಅರ್ಹ ಫಲಾನುಭವಿಗಳನ್ನು ಗುರುತಿಸಿ ಯೋಜನೆಯನ್ನು ತಲುಪಿಸುವಂತಹ ಕಾರ್ಯ ಮಾಡಲು ಸೂಚಿಸಲಾಯಿತು. ಸಭೆ ಅಧ್ಯಕ್ಷತೆಯನ್ನು ತಾಲೂಕು ಗ್ಯಾರಂಟಿ ಯೋಜನೆಯ ಅಧ್ಯಕ್ಷ ಮೈಬೂಬ.ಲಾ.ನಾಯ್ಕೋಡಿ ವಹಿಸಿದ್ದರು. ಯೋಜನೆಯ ಸಹ ಕಾರ್ಯದರ್ಶಿ ವೆಂಕಟೇಶ ವಂದಾಲ, ಸದಸ್ಯರಾದ ಬಂಡೆಪ್ಪ ನಾಟಿಕಾರ, ಮಹಾಂತೇಶ ತಳೇವಾಡ, ಮಲ್ಲನಗೌಡ ಕೋಳೂರ, ಶಂಕರ ಚಕ್ರಮನಿ, ಕವಿತಾ ಮಣೂರು ಮಠ, ಮಹಾದೇವಿ ಮನಗೂಳಿ, ಮಲ್ಲವ್ವ ಮಾದರ, ಅಭಿಷೇಕ ಪಾಟೀಲ, ರೇವಣಸಿದ್ದಪ್ಪ ಡಿಗ್ಗಾವಿ, ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಡಿ.ಎ.ಪಿ ರಸಗೋಬ್ಬರ ಬದಲಾಗಿ ಸಂಯುಕ್ತ ಸಮತೋಲನಾ ಗೋಬ್ಬರ ಬಳಸಿ

• **ಉದಯವಾಹಿನಿ:ಚಿಂಚೋಳಿ:**


ಉದಯವಾಹಿನಿ ಚಿತ್ರ

ಉದ್ದು, ಹೆಸರು,ಸೋಯಾಬಿನ್ ತೋಗರಿ,ಹಾಗೂ ಕಬ್ಬು ಬೆಳೆಗಳಿಗೆ ರೈತರು 10:26:26, 20:20:13, 19:19:19: ಹಾಗೂ 15:15:15; ಈ ಗೋಬ್ಬರಗಳಲ್ಲಿ ಪೋಟ್ಯಶ್ ಮತ್ತು ಗಂಧಕ ಇರುವ ಕಾರಣ ಇಳುವರಿ ಅಧಿಕಾವಾಗುತ್ತದೆ ಹಾಗಾಗಿ ರೈತರು ಡಿ.ಎ.ಪಿ ಬದಲು ಸಂಯುಕ್ತ ರಸಗೋಬ್ಬರ ಬಳಸಬೇಕು ಎಂದು ಸಹಾಯಕ ಕೃ ನಿರ್ದೇಶಕ ಶೇಟ್ಟಿ ರಾಠೋಡ್ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆ ಹೋರಡಿಸಿದ ಅವರು,ಯೂರಿಯಾ ಖರೀಸುವ ರೈತರು ಕಡ್ಡಾಯವಾಗಿ ಎಫ್ಐಡಿ ಹೋದಿರಬೇಕು ರಸಗೋಬ್ಬರ ಮಳಿಗೆಗೆ ಹೋಗುವಾಗ ಆಧಾರ ಪ್ರತಿ ತೆಗೆದುಕೋಡು ಹೋಗಬೇಕು,ಕಳೆದ ವರ್ಷ ಕಸ್ಕೋಟ ಬೆಳ್ಳಿ ಅವರಿಸಿದ ಹೋಲದ ರೈತರು ಬಿತ್ತನೆ ಮರುದಿನ ಪೇಂಡಿಮೆಥಲಿನ ಕಳೆನಾಶ 03 ಮೀ ಲೀ ನೀರಿನಲ್ಲಿ ಬೇರಿಸಿ ಸಿಂಪಡಣೆ ಮಾಡಬೇಕು.

ನೀರಾವರಿ ಸೌಲಭ್ಯರುವ ರೈತರು ಬಿತ್ತನೆ ಮಾಡಬಹುದು,ಭೂ ಸಂಪೂರ್ಣ ಹಸಿಯಾಗದೆ ಮಳೆ ಆಶ್ರೀತ ರೈತರು ಬಿತ್ತನೆ ಮಾಡಬಾರದು,ಮನೆ ಬೀಜ ಬಿತ್ತುವ ರೈತರು ಹಳೆ ತಳಿಗಳನ್ನು ಪಿಲಾ/ಆಶಾ ಬಿತ್ತದೆ ಜಿಆರ್‌ಜಿ-811,ಮತ್ತು ಜಿಆರ್‌ಜಿ-152 ತಳಿಗಳು ಬಿತ್ತಬೇಕೆಂದು ತಿಳಿಸಿದ್ದಾರೆ.

**ಮಳೆಯ ಆಭರ್ಟ:** ತಾಲ್ಲೂಕಿನಾದ್ಯಂತ ಬುಧುವಾರ ಬೆಳಿಗ್ಗೆ 3.30ಗಂಟೆಂದ ಧಾರಾಕಾರ ಮಳೆ,ಬಿರುಗಾಳಿ ಸಮೆತ ದಾರಾಕಾರ ಮಳೆ ಸುರಿತು,ಇದರಿಂದ ತಾಲ್ಲೂಕಿನಾದ್ಯಂತ ಕಳೆದ ಅನೇಕ ದಿಗಳಿಂದ ಬಿಸಿಲಿನ ತಾಪಮಾನದಿಂದ ಸಾರ್ವಜನಿಕರು ಹೋರಗೆ ಬರಲು ಭಯಪಡುತ್ತಿದ್ದು ಬಿಸಿಲಿನಿಂದ ತತ್ತರಿಸಿ ಹೋಗಿದರು ಈಗ ಸಾರ್ವಜನಿಕರು ತಂಪಾದ ವಾತವಾರಣದಿಂದ ನಿಟ್ಟುಸಿರು ಬಿಟ್ಟಿದ್ದಾರೆ,ಆದರೆ ಬೆಳಿಗ್ಗೆ 8ಗಂಟೆಯವರೆಗೆ ಸುರಿದ ಮಳೆದಿಂದ ದ್ಯತ್ ವ್ಯತ್ಯಯವುಂಟಾಗಿರುವುದರಿಂದ ಸಾರ್ವಜನಿಕರಿಗೆ ಬಹಳಷ್ಟು ತೊಂದರೆ ಅನುಭವಿಸಬೇಕಾಯಿತು ಎಂದು ವಕೀಲರಾದ ಶ್ರೀ ಮಂತ ಕಟ್ಟಿಮನಿ ಆರೋಪಿಸಿದರು.

**ಮಳೆಯ ಪ್ರಮಾಣ:** ಚಿಂಚೋಳಿ:48ಮೀ.ಮೀಕುಂಚಾವರಮ್ :80ಮೀ.ಮೀ ಐನಾಪೂರ;15.5ಮೀ.ಮೀ, ಸುಲೇಪೇಟ:38.6ಮೀ. ಮೀ ಚಿಮ್ಮನಚೋಡ:18ಮೀ.ಮೀ,ನಿಡಗುಂದಾ;54ಮೀ. ಮೀ,ಕೋಡ್ಲಿ:42ಮೀ.ಮೀ, ತಾಲ್ಲೂಕಿನಾದ್ಯಂತ ಮಳೆಯ ಪ್ರಮಾಣ ಸುರಿದಿದೆ ಎಂದು ಸಹಾಯಕ ನಿರ್ಧೆಶಕ ವೀರಶೇಟ್ಟಿ ರಾಠೋಡ್ ತಿಳಿಸಿದ್ದಾರೆ.

